ಬೀದರ ▪ ಕಲಬುರಗಿ ▪ ಯಾದಗಿರಿ ▪ ರಾಯಚೂರ ▪ ಕೊಪ್ಪಳ ▪ ಬಳ್ಳಾರಿ ▪ ಬಾಗಲಕೋಟೆ ▪ ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Registration No :BDR/ 054/2024-2026 ▪ Email:mallammanudi@gmail.com

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

MALLAMMA NUDI REGIONAL NEWSPAPER ಸಂಪಾದಕರು:ರಮೇಶರೆಡ್ಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ
ಮೊ.9448604450

| VOLUME-ಸಂಪುಟ:12 | ISSUE- ಸಂಚಿಕೆ: 322 | PAGE- ಪುಟ 8 | ರವಿವಾರ – 22–12–2024, ಬೀದರ | RNI NO:KARKAN/2011/48371 | RS.ಬೆಲೆ 2/– |
|---|---|---|---|---|---|

## ಗಲ್ಫ್ ರಾಷ್ಟ್ರಗಳೊಂದಿಗೆ ಶಾಂತಿ, ಭದ್ರತೆ, ಸ್ಥಿರತೆಗೆ ಭಾರತ ಬದ್ಧ : ಮೋದಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ, ಡಿ 21 (ಪಿಟಿಐ) ಕುವೈತ್‌ಗೆ ಎರಡು ದಿನಗಳ ಭೇಟಿಯನ್ನು ಆರಂಭಿಸಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಪಶ್ಚಿಮ ಏಷ್ಯಾ ವಲಯದ ಶಾಂತಿ, ಭದ್ರತೆ ಮತ್ತು ಸ್ಥಿರತೆಗೆ ಭಾರತ ಮತ್ತು ಗಲ್ಫ್ ರಾಷ್ಟ್ರಗಳು ಆಸಕ್ತಿಯನ್ನು ಹಂಚಿಕೊಂಡಿವೆ ಎಂದು ಹೇಳಿದ್ದಾರೆ.

ಸಿರಿಯಾದಲ್ಲಿ ಅಧ್ಯಕ್ಷ ಬಶರ್ ಅಲ್–ಅಸ್ಸಾದ್ ಆಡಳಿತ ಪತನಗೊಂಡ ಎರಡು ವಾರಗಳ ನಂತರ ಮತ್ತು ಗಾಜಾದಲ್ಲಿ ಇಸ್ರೇಲ್ ದಾಳಿಯನ್ನು ಮುಂದುವರೆಸಿದ ಎರಡು ವಾರಗಳ ನಂತರ ಮೋದಿಯವರ ಕುವೈತ್ ಭೇಟಿ ನಡೆಯುತ್ತಿದೆ.

ಕುವೈತ್‌ನ ಉನ್ನತ ನಾಯಕತ್ವದೊಂದಿಗಿನ ಅವರ ಮಾತುಕತೆಯು ಭಾರತ ಮತ್ತು ಕುವೈತ್ ನಡುವಿನ ಭವಿಷ್ಯದ ಪಾಲುದಾರಿಕೆಗಾಗಿ ಮಾರ್ಗಸೂಚಿಯನ್ನು ರೂಪಿಸಲು ಒಂದು ಅವಕಾಶವಾಗಿದೆ ಎಂದು ಮೋದಿ ನಿರ್ಗಮನ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ತಲೆಮಾರುಗಳಿಂದ ಪೋಷಿಸಲ್ಪಟ್ಟಿರುವ ಕುವೈತ್‌ನೊಂದಿಗಿನ ಐತಿಹಾಸಿಕ ಸಂಪರ್ಕವನ್ನು ನಾವು ಆಳವಾಗಿ ಗೌರವಿಸುತ್ತೇವೆ. ನಾವು ಕೇವಲ ಬಲವಾದ ವ್ಯಾಪಾರ ಮತ್ತು ಇಂಧನ ಪಾಲುದಾರರಲ್ಲ ಆದರೆ ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಶಾಂತಿ, ಭದ್ರತೆ, ಸ್ಥಿರತೆ ಮತ್ತು ಸಮದ್ಧಿಯ ಬಗ್ಗೆ ಆಸಕ್ತಿಯನ್ನು ಹಂಚಿಕೊಂಡಿದ್ದೇವೆ ಎಂದು ಅವರು ಹೇಳಿದರು.

ಎಮಿರ್, ಕ್ರೌನ್ ಪ್ರಿನ್ಸ್ ಮತ್ತು ಕುವೈತ್‌ನ ಪ್ರಧಾನ ಮಂತ್ರಿಯೊಂದಿಗಿನ ಅವರ ಭೇಟಿಗಳನ್ನು ಎದುರು ನೋಡುತ್ತಿದ್ದೇನೆ ಎಂದು ಮೋದಿ ಹೇಳಿದರು. ನಮ ಜನರು ಮತ್ತು ಪ್ರದೇಶದ ಪ್ರಯೋಜನಕ್ಕಾಗಿ ಭವಿಷ್ಯದ ಪಾಲುದಾರಿಕೆಗಾಗಿ ಮಾರ್ಗಸೂಚಿಯನ್ನು ರೂಪಿಸಲು ಇದು ಒಂದು ಅವಕಾಶವಾಗಿದೆ ಎಂದು ಅವರು ತಿಳಿಸಿದ್ದಾರೆ.

ಎರಡೂ ರಾಷ್ಟ್ರಗಳ ನಡುವಿನ ಸ್ನೇಹದ ಬಾಂಧವ್ಯವನ್ನು ಬಲಪಡಿಸಲು ಅಪಾರ ಕೊಡುಗೆ ನೀಡಿದ ಕುವೈತ್‌ನಲ್ಲಿರುವ ಭಾರತೀಯ ವಲಸಿಗರನ್ನು ಭೇಟಿಯಾಗಲು ನಾನು ಉತ್ಸುಕತೆಯಿಂದ ಎದುರು ನೋಡುತ್ತಿದ್ದೇನೆ ಎಂದು ಅವರು ಹೇಳಿದರು.

## ಸಾಹಿತ್ಯ ಸಮೇಳನದಲ್ಲಿ ರಾಜಕೀಯ ಪುಸ್ತಕ ತೆರವುಗೊಳಿಸಿ : ಆರ್.ಅಶೋಕ್ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಡಿ.21– ಸಾಹಿತ್ಯ ಸಮೇಳನದ ಮಳಿಗೆಗಳಲ್ಲಿ ಇಟ್ಟಿರುವ ಎಲ್ಲ ರಾಜಕೀಯ ಪ್ರೇರಿತ ಪುಸ್ತಕಗಳನ್ನು ತೆರವು ಮಾಡಬೇಕು, ರಾಜಕೀಯ ಭಾಷಣಗಳಿಗೆ ಕಡಿವಾಣ ಹಾಕಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಕನ್ನಡ ನಾಡಿನ ನುಡಿ ಪರಂಪರೆ, ಶ್ರೀಮಂತ ಸಾಹಿತ್ಯ, ಇತಿಹಾಸ, ಸಂಸ್ಕೃತಿಯನ್ನ ಸಂಭ್ರಮಿಸುವ ವೇದಿಕೆಯಾಗಬೇಕಿದ್ದ ಅಖಿಲ ಭಾರತ ಸಾಹಿತ್ಯ ಸಮೇಳನವನ್ನು ರಾಜಕೀಯ ವೇದಿಕೆ ಮಾಡಿರುವ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ತಾಯಿ ಕನ್ನಡಾಂಬೆಗೆ, ಕನ್ನಡಿಗರ ತಾಯ್ನುಡಿಗೆ ಘೋರ ಅಪಮಾನ ಎಸಗಿದ್ದಾರೆ ಎಂದು ದೂರಿದ್ದಾರೆ.

ಮುಖ್ಯಮಂತ್ರಿಗಳ ಭಾಷಣದುದ್ದಕ್ಕೂ ರಾಜಕೀಯ ಕೆಸರೆರಚಾಟ, ಪುಸ್ತಕ ಮಳಿಗೆಗಳಲ್ಲಿ ರಾಜಕೀಯ ಪ್ರೇರಿತ ಪುಸ್ತಕಗಳ ಪ್ರದರ್ಶನ, ಮಾರಾಟ ಇದೇನಾ ಸಾಹಿತ್ಯ ಸಮೇಳನದ ಉದ್ದೇಶ? ಎಂದು ಅಶೋಕ್ ಕಿಡಿಕಾರಿದ್ದಾರೆ.

## ವಿಶ್ವ ವಿಕಲಚೇತನ ದಿನ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಡಿಸೆಂಬರ್.21– ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ, ಜಿಲ್ಲಾ ವಕೀಲರ ಸಂಘ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಬೀದರ ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ "ವಿಶ್ವ ವಿಕಲಚೇತನರ ದಿನಾಚಾರಣೆ" ಕಾರ್ಯಕ್ರಮದ ಅಂಗವಾಗಿ ಬೀದರ ಬಾಲ ಭವನದಲ್ಲಿ ಹಮ್ಮಿಕೊಂಡಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಸ ಬನಸೋಡೆ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶ್ರವಣದೋಷವುಳ್ಳ (2ನೇ ಪುಟ ನೋಡಿ...)

# ಗೋಲ್ಡನ್ ಚಾರಿಯೇಟ್ ರೈಲು ಪ್ರವಾಸದಲ್ಲಿ ಐತಿಹಾಸಿಕ ಸ್ಥಳಗಳ ಅನಾವರಣ: ಸಚಿವ ಹೆಚ್.ಕೆ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಡಿ.21– ಗೋಲ್ಡನ್ ಚಾರಿಯೇಟ್ (ಸುವರ್ಣ ರಥ) ರೈಲು ಪ್ರವಾಸ ದಕ್ಷಿಣ ಭಾರತದ ಶ್ರೀಮಂತ ಸಂಸ್ಕೃತಿ, ಪರಂಪರೆ ಹಾಗೂ ಐತಿಹಾಸಿಕ ಸ್ಥಳಗಳ ಅನಾವರಣಕ್ಕೆ ಮುಕುಟಪ್ರಾಯವೆನಿಸಿದೆ ಎಂದು ಪ್ರವಾಸೋದ್ಯಮ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದರು.



ಅವರು ಇಂದು ಯಶವಂತಪುರ ರೈಲು ನಿಲ್ದಾಣದ ಫ್ಲಾಟ್ ಫಾರಂ 6 ರಲ್ಲಿ ಗೋಲ್ಡನ್ ಚಾರಿಯೇಟ್ ಐಷಾರಾಮಿ ರೈಲು ಸೇವೆಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಈ ಗೋಲ್ಡನ್ ಚಾ–ರಿಯೇಟ್ ರೈಲು ಸೇವೆಗಳು 2018 ರಿಂದ ತಾತ್ಕಾಲಿಕವಾಗಿ ಸ್ಥಗಿತಗೊಂಡಿದ್ದು ಅದನ್ನು ಮರುಚಾಲನೆಗೊಳಿಸಲಾಗಿದೆ.

ಈ ರೈಲಿನ ಮಾಲೀಕತ್ವವನ್ನು 50% ಭಾರತೀಯ ರೈಲ್ವೇ, 25% ಪ್ರವಾಸೋದ್ಯಮ ಸಚಿವಾಲಯ ಭಾರತ ಸರ್ಕಾರ ಹಾಗೂ ಕೆಎಸ್‌ಟಿಡಿಸಿಯ 25% ರಷ್ಟು ಷೇರುಗಳ ಮೂಲಕ ರಾಜ್ಯ ಸರ್ಕಾರ ಹೊಂದಿದೆ. ರೈಲಿನ ಒಳಾಂಗಣವನ್ನು ಕಲಾತ್ಮಕವಾಗಿ ನಿರ್ಮಿಸಲಾಗಿದೆ.

18 ಕೋರ್ಟ್‌ಗಳಲ್ಲಿ ಕರ್ನಾಟಕ ಆಳಿದ ರಾಜವಂಶಸ್ಥರುಗಳಾದ ಕದಂಬ, ಹೊಯ್ಸಳ, ವಿಜಯನಗರ ಚಾಲುಕ್ಯರ ಹೆಸರನ್ನು ಇಡಲಾಗಿದೆ. ಊಟ, ವಸತಿಗೆ ಐಷಾರಾಮಿ ವ್ಯವಸ್ಥೆ ಕಲ್ಪಿಸಲಾಗಿದೆ. ಈ ಗೋಲ್ಡನ್ ಚಾರಿಯೇಟ್ ಪ್ರವಾಸೋದ್ಯಮ ವಿಶ್ವದ ಪ್ರಸಿದ್ಧ ಪರಂಪರೆಯ ತಾಣಗಳ ಜೊತೆಗೆ ಪಶ್ಚಿಮ ಘಟ್ಟಗಳು, ಪ್ರಾಚೀನ ಕಡಲತೀರಗಳು, ಸಾಂಸ್ಕೃತಿಕ ತಾಣಗಳಿಗೆ ಪ್ರವಾಸಿಗರನ್ನು ಕ–ರೆದೊಯ್ಯುತ್ತದೆ. ಇದರಿಂದ ರೈಲು ಹೋಟೆಲ್‌ಗಳು, ಕುಶಲಕರ್ಮಿಗಳು, ಪ್ರವಾಸ ನಿರ್ವಾಹಕರಿಗೆ ಆದಾಯ ಕಲ್ಪಿಸಿದಂತಾಗುತ್ತದೆ. ಈ ವಿಶೇಷ ರೈಲು ಪ್ರವಾಸ ಜಾಗತಿಕ ಮಟ್ಟದಲ್ಲಿ ವಿಶ್ವದ ಏಳು ಅತ್ಯುತ್ತಮ ಐಷಾರಾಮಿ ರೈಲು ಪ್ರಯಾಣಗಳಲ್ಲಿಗುರುತಿಸಲಾಗಿದ್ದು, ಹಲವಾರು ಪ್ರಶಸ್ತಿ ಪಡೆದು–ಕೊಂಡಿದೆ ಎಂದರು.

ಈ ರೈಲಿನಲ್ಲಿ 44 ಸುಸಜ್ಜಿತ ಕ್ಯಾಬಿನ್‌ಗಳು, ಎನ್ ಸೂಟ್ ಸ್ನಾನಗೃಹ, ವೈಫೈ ಸಹ ಒಳಗೊಂಡಿದೆ. ರುಚಿ ಮತ್ತು ನಳಪಾಕ ಹೆಸರಿನ ಎರಡು ಹೋಟೆಲ್‌ಗಳು ಭಾರತೀಯ ಮತ್ತು ಅಂತರರಾಷ್ಟ್ರೀಯ ಪಾಕಪದ್ಧತಿ ಸೇವೆ ನೀಡುತ್ತದೆ. ಲಾಂಜ್ ಬಾರ್, ಫಿಟ್‌ನೆಸ್ ಸೆಂಟರ್ ಇತರೆ ಸೌಕರ್ಯ ಕಲ್ಪಿಸಲಾಗಿದೆ ಎಂದರು. (2ನೇ ಪುಟ ನೋಡಿ...)

### ಖಾಸಗಿ ವಾಹನ ಚಾಲಕರಿಗೆ ಗುಡ್ ನ್ಯೂಸ್: ದೇಶದಲ್ಲೇ

## ಯಾವ ರಾಜ್ಯ ಮಾಡದ್ದನ್ನು ಮಾಡಿದ ಕರ್ನಾಟಕ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, (ಡಿಸೆಂಬರ್ 21): ಕರ್ನಾಟಕದ ಚಾಲಕ ಸಮೂಹದ ಹಲವು ದಶಕಗಳ ಕನಸು ನನಸಾಗಿದೆ. ಖಾಸಗಿ ಚಾಲಕರಿಗಾಗಿ ಅಭಿವೃದ್ಧಿ ನಿಗಮ ಮಂಡಳಿ ಬೇಕು ಎನ್ನುವ ಬೇಡಿಕೆ ಈಡೇರಿದೆ. ಹೌದು.. ಖಾಸಗಿ ಚಾಲಕರ ಅಭಿವೃದ್ಧಿ ನಿಗಮ ಮಂಡಳಿಯ ಮೂಲಕ ಕರ್ನಾಟಕರಾಜ್ಯಸಾರಿಗೆಇಲಾಖೆಯ ಅಡಿಯಲ್ಲಿ ಚಾಲಕರಿಗೆ ಆರೋಗ್ಯ ಕಾರ್ಡ್ ನೀಡಲು ತಿರ್ಮಾನ ಮಾಡಲಾಗಿದೆ. ದೇಶದಲ್ಲಿ ಇದೆ ಮೊದಲ ಬಾರಿಗೆ ಇಂತಹ ಸೌಲಭ್ಯವನ್ನು ರಾಜ್ಯ ಸರ್ಕಾರ ನೀಡಲು ಮುಂದಾಗಿದೆ. ಈ ಹಿಂದೆ ಚಾಲಕರು ಆಕ್ಸಿಡೆಂಟ್ ನಲ್ಲಿ ಮೃತಪಟ್ಟರೇ ಅಂತಹವರ ಕುಟುಂಬಕ್ಕೆ ಐದು ಲಕ್ಷರುಪಾಯಿ ಪರಿಹಾರ ನೀಡಲಾಗಿತ್ತು, ಇದೀಗ ಸರ್ಕಾರ ಚಾಲಕ ಅಭಿವೃದ್ಧಿ ನಿಗಮ ಮಂಡಳಿಯಲ್ಲಿ ನೋಂದಾಯಿತ ಚಾಲಕ ಆಕ್ಸಿಡೆಂಟ್ ಮತ್ತು ಸಹಜವಾಗಿ ಮೃತಪಟ್ಟರೇ ಅಂತಹ ಚಾಲಕರಿಗೆ ಐದು ಲಕ್ಷ ರುಪಾಯಿ ಪರಿಹಾರ ನೀಡಲಾಗುತ್ತದೆ.

ಚಾಲಕರಿಗೆ ಏನೆಲ್ಲ ಸೌಲಭ್ಯ ?

ಇನ್ನೂ ಅಧಿವೇಶನದಲ್ಲಿ ಪಾಸ್ ಆದ ಬಿಲ್ ನಲ್ಲಿ ಚಾಲಕರಿಗೆ ಏನೆಲ್ಲ ಸೌಲಭ್ಯ ಸಿಗುತ್ತದೆ ಎಂದು (2ನೇ ಪುಟ ನೋಡಿ...)

## ಕಲ್ಪತರ ನಾಡಿನಲ್ಲಿ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನ: ಲಾಂಛನ ಬಿಡುಗಡೆ ಮಾಡಿದ ಸಿಎಂ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಕಲ್ಪತರ ನಾಡು ತುಮಕೂರಿನಲ್ಲಿ ಜ.18 ಮತ್ತು 19 ರಂದು ನಡೆಯಲಿರುವ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಲಾಂಛನವನ್ನು ಗೃಹ ಸಚಿವ ಜಿ.ಪರಮೇಶ್ವರ ಅವರ ಸಮ್ಮುಖದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಗೃಹ ಕಚೇರಿ ಕೃಷ್ಣಾದಲ್ಲಿ ಬಿಡುಗಡೆ ಮಾಡಿದರು.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಆಯೋಜಿಸುತ್ತಿರುವ ರಾಜ್ಯ ಸಮ್ಮೇಳನದ ಉದ್ಘಾಟನೆಗೆ ಆಗಮಿಸಬೇಕು ಎಂದು ಸ್ವಾಗತ ಸಮಿತಿ ಅಧ್ಯಕ್ಷರು ಮತ್ತು ಗೃಹ ಸಚಿವರಾದ ಜಿ.ಪರಮೇಶ್ವರ್ ಅವರು ಆಹ್ವಾನಿಸಿದಾಗ ಮುಖ್ಯಮಂತ್ರಿಗಳು ಸಮ್ಮತಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಕಳೆದ ಬಾರಿಯೂ ಸಮ್ಮೇಳನ ಉದ್ಘಾಟನೆಗೆ ಬಂದಿದ್ದೇನೆ. ಈ ಬಾರಿಯೂ ಬರುತ್ತೇನೆ. ಸಮ್ಮೇಳನಕ್ಕೆ ಅಗತ್ಯವಾದ ಸಹಕಾರವನ್ನು ನೀಡುತ್ತೇನೆ ಎಂದು ತಿಳಿಸಿ ಶುಭ ಹಾರೈಸಿದರು.

ಈ (2ನೇ ಪುಟ ನೋಡಿ...)

### ಕರ್ನಾಟಕ ಕಾಲೇಜಿನಲ್ಲಿ ವಾಣಿಜ್ಯ ವಿಭಾಗದಿಂದ ರತನ್ ಟಾಟಾ ಕಾಮರ್ಸ್ ಕ್ಲಬ್ ಉದ್ಘಾಟನೆ

## ಉದ್ಯೋಗ ಮಾಡಲು ಹಣದ ಜೊತೆಗೆ ಆತ್ಮವಿಶ್ವಾಸವೂ ಬೇಕು: ಬಲಭೀಮ ಬಸೋಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 21 :– ಪ್ರತಿಯೊಬ್ಬರಿಗೂ ಸರ್ಕಾರ ನೌಕರಿ ನೀಡಲು ಸಾಧ್ಯವಿಲ್ಲ. ಹೀಗಾಗಿ ಯುವಕರು ಛಲ, ಆತ್ಮವಿಶ್ವಾಸ ಮತ್ತು ಸಮಯಪಾಲನೆಯೊಂದಿಗೆ ಸ್ವಯಂ ಉದ್ಯೋಗದ ಕಡೆಗೆ ಗಮನ ಹರಿಸಿದರೆ ಯಶಸ್ವಿ ಉದ್ಯಮಿಯಾಗಲು ಸಾಧ್ಯ ಎಂದು ಸ್ವಾದ್ ನಂದಿನಿ ಆಹಾರ ಘಟಕದ ಉದ್ಯಮಿ ಬಲಭೀಮ ಬಸೋಳೆ ತಿಳಿಸಿದರು.

ನಗರದ ಕರ್ನಾಟಕ ಕಾಲೇಜಿನ ವಾಣಿಜ್ಯ ವಿಭಾಗದ ವತಿಯಿಂದ ಕಾಲೇಜು ಸಭಾಂಗಣದಲ್ಲಿ 'ರತನ್ ಟಾಟಾ ಕಾಮರ್ಸ್ ಕ್ಲಬ್' ಉದ್ಘಾಟನೆ ನೆರವೇರಿಸಿ ಮಾತನಾಡಿದರು. ನಾನು ಕೇವಲ ಐದು ಸಾವಿರ ರೂಪಾಯಿ ಇಟ್ಟುಕೊಂಡು ಬೀದರ ಜಿಲ್ಲೆಗೆ ಬಂದೆ. ಆದರೆ ಇಂದು ರೊಟ್ಟಿ, ಚಟ್ನಿ ಹಾಗೂ ಉಪ್ಪಿನಕಾಯಿ ಉದ್ಯೋಗ ಮಾಡಿಕೊಂಡು ಮೂರರಿಂದ ನಾಲ್ಕು ಕೋಟಿ ವ್ಯವಹಾರ ನಡೆಸುತ್ತಿದ್ದೇನೆ. ಇದಕ್ಕೆ ಮೂಲ ಕಾರಣ ಸಮಯಪಾಲನೆ, ಸಾಮಾಜಿಕ ಜಾಲತಾಣಗಳ ಸದ್ಬಳಕೆ ಮತ್ತು ಆತ್ಮಬಲವೇ ಮೂಲ ಕಾರಣವಾಗಿದೆ ಎಂದು ತಿಳಿಸಿದರು. ಕೈಯಲ್ಲಿ ಹಣ ಇಟ್ಟು–ಕೊಂಡು ಉದ್ಯೋಗ ಮಾಡಲು ಸಾಧ್ಯವಿಲ್ಲ. ಸಾಧಿಸಬೇಕೆಂಬ ಛಲ, ಆರಂಭಿಕ ಪ್ರಯತ್ನ ಮಾಡಿದ ನಂತರ ಹಣದ ಅವಶ್ಯಕತೆ ಇರುತ್ತದೆ. ನಾನು ಮೊಬೈಲ್‌ನಿಂದ ಧನಾತ್ಮಕ ವಿಚಾರಗಳನ್ನು ಪಡೆದು–ಕೊಂಡೆ. ಅನಾವಶ್ಯಕ ಚರ್ಚೆ, ಇನ್ಸಾಗ್ರಾಮ್, ಫೇಸ್‌ಬುಕ್ ಮತ್ತು ವಾಟ್ಸಾಪ್‌ಗಳನ್ನು ಕೇವಲ ನನ್ನ ಉದ್ಯಮದ ಪ್ರಚಾರಕ್ಕಾಗಿ ಬಳಸುತ್ತೇನೆ. ವಿದ್ಯಾರ್ಥಿಗಳು ಸಹ ತಮ್ಮ ಮುಂದಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳಿಂದ ಅಂತರ ಕಾಯ್ದುಕೊಂಡು ತಮ್ಮ ಉದ್ಯೋಗದ ಕಡೆಗೆ ಹೆಚ್ಚು ಗಮನ ಹರಿಸಬೇಕು. ಇದರಿಂದ ಯಶಸ್ವಿ ಉದ್ಯಮಿಯಾಗಲು ಸಾಧ್ಯ ಎಂದು ಸಲಹೆ ನೀಡಿದರು.

ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸತೀಶ ಪಾಟೀಲ ಮಾತನಾಡಿ ಯುವಕರು ಯಾವ ರೀತಿ ಉದ್ಯೋಗ ಮಾಡಬೇಕು? ಕೇವಲ ಉದ್ಯೋಗವನ್ನು ಹುಡುಕದೆ, ಉದ್ಯೋಗವನ್ನು ಸೃಷ್ಟಿಸುವುದು ಹೇಗೆ? ಎಂಬ ಕುರಿತು ವಾಣಿಜ್ಯ ವಿಭಾಗದ ಪದವಿ ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಮತ್ತು ಜಾಗೃತಿ ಮೂಡಿಸಲು (2ನೇ ಪುಟ ನೋಡಿ...)

## ಗಣಿಬಾಧಿತ ಪ್ರದೇಶದಲ್ಲಿ ತಾಲೂಕಿಗೊಂದು ವೃಕ್ಷೋದ್ಯಾನ: ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21 ಗಣಿಬಾಧಿತ ಪ್ರದೇಶಗಳಲ್ಲಿ ಪರಿಸರದ ಮೇಲಿನ ದುಷ್ಪರಿಣಾಮ ತಗ್ಗಿಸಲು ತಾಲೂಕಿಗೊಂದು ವೃಕ್ಷೋದ್ಯಾನ ನಿರ್ಮಿಸಲು ಕಾರ್ಯ ಯೋಜನೆ ರೂಪಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ಅವರು ಸೂಚನೆ ನೀಡಿದರು.

ಬಳ್ಳಾರಿಯ ಅರಣ್ಯ ಇಲಾಖೆ ಕಚೇರಿಯಲ್ಲಿ ಶನಿವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕರ್ನಾಟಕ ಗಣಿ ಪರಿಸರ ಪುನರ್ ಸ್ಥಾಪನೆ ನಿಗಮ (ಕೆ.ಎಂ.ಇ.ಆರ್.ಸಿ) ನಿಧಿ ಬಳಸಿಕೊಂಡು ಜೀವಿ ಪರಿಸ್ಥಿತಿಯ ಮೇಲಾಗಿರುವ ಹಾನಿ ತಗ್ಗಿಸಲು ಕ್ರಿಯಾಯೋಜನೆ ರೂಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಗಣಿಪ್ರದೇಶಗಳಲ್ಲಿ ವನ್ಯಜೀವಿ ಸಂರಕ್ಷಣೆ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಂತೆ ಹಾಗೂ ವನ್ಯ ಜೀವಿಗಳಿಗೆ ಬೇಸಿಗೆಯಲ್ಲಿ ನೀರಿನ ಕೊರತೆ ಬಾರದಂತೆ ನೀರುಗುಂಡಿಗಳನ್ನು ಸಮರ್ಪಕವಾಗಿ ನಿರ್ವಹಣೆ (2ನೇ ಪುಟ ನೋಡಿ...)

## ಗ್ರಾಮದ ನೈರ್ಮಲ್ಯ ಹಾಗೂ ನೀರಿನ ಸಮರ್ಪಕ ಬಳಕೆಗೆ ಒತ್ತು ನೀಡಿ; ರಾಹುಲ್ ತುಕರಾಂ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಡಿ.21,–ಜಿಲ್ಲೆಯ ಸಿರವಾರ ತಾಲೂಕಿನ ಚಾಗಬಾವಿ ಗ್ರಾಮದಲ್ಲಿ ಪಿ.ಆರ್.ಇ.ಡಿ.ವತಿಯಿಂದ ಅನುಷ್ಠಾನಗೊಳಿಸುತ್ತಿರುವ ದ್ರವ ತ್ಯಾಜ್ಯ ವಿಲೇವಾರಿ ಹಾಗೂ ಚರಂಡಿ ಕಾಮಗಾರಿಯ ಸ್ಥಳಕ್ಕೆ ಶುಕ್ರವಾರ ಭೇಟಿ ನೀಡಿ, ಕಾಮಗಾರಿಯು ವೈಜ್ಞಾನಿಕವಾಗಿ ಕೂಡಿರಬೇಕು. ಹಾಗೂ ಗುಣಮಟ್ಟಕ್ಕೆ ಹೆಚ್ಚಿನ ಒತ್ತು ನೀಡಿ ನಿರ್ವಹಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ ಅವರು ಸಮಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಗ್ರಾಮದಲ್ಲಿ ಸ್ವಚ್ಛತಾ ಕಾಪಾಡಲು ಅಗತ್ಯ ಕ್ರಮ ಜರುಗಿಸಬೇಕು. ಗ್ರಾಮಸ್ಥರಿಗೆ ಶುದ್ಧ ನೀರು ಸರಬರಾಜು ಮಾಡುವ ನಿಟ್ಟಿನಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ ಮಾಡಬೇಕು. ನೀರು (2ನೇ ಪುಟ ನೋಡಿ...)

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟ
ತೋಟಗಾರಿಕೆ ಮೇಳ –2024
ಆರ್ಥಿಕತೆ ಹಾಗೂ ಪೌಷ್ಠಿಕತೆಗಾಗಿ ತೋಟಗಾರಿಕೆ
21 ಶನಿವಾರ, 22 ರವಿವಾರ ಮತ್ತು 23 ಸೋಮವಾರ
ಡಿಸೆಂಬರ್, 2024
ಸ್ಥಳ : ಮುಖ್ಯ ಆವರಣ, ಉದ್ಯಾನಗಿರಿ, ನವನಗರ, ಬಾಗಲಕೋಟ
ಸರ್ವರಿಗೂ ಆದರದ ಸ್ವಾಗತ
"ಮೇಳದಲ್ಲಿ ಸಕ್ರಿಯವಾಗಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಿ"

# ಒಂದನೆ ಪುಟದಿಂದ...

## ಐತಿಹಾಸಿಕ ಸ್ಥಳಗಳ ಅನಾವರಣ: ಸಚಿವ ಹೆಚ್.ಕೆ ಪಾಟೀಲ್

ಎಲ್ಲೆಲ್ಲಿ ಪ್ರವಾಸ:

ಜೂವೆಲ್ ಆಫ್ ಸೌತ್ ಪ್ರವಾಸ ಇದೇ ಡಿಸೆಂಬರ್ 21 ರಿಂದ 26 ರವರೆಗೆ ಬೆಂಗಳೂರಿನಿಂದ ಆರಂಭಗೊಂಡು ಮೈಸೂರು, ಕಾಂಚೀಪುರಂ, ಮಹಾಬಲಿಪುರಂ, ತಂಜಾವೂರು, ಕೊಚ್ಚಿನ್, ಮರಾರಿಕುಲಂಗೆ ತೆರಳಿ ನಂತರ ಬೆಂಗಳೂರಿಗೆ ಹಿಂದಿರುಗುತ್ತದೆ. ಇದು ಐದು ದಿನಗಳ ಪ್ರವಾಸವಾಗಿದ್ದು, ಇದಕ್ಕೆ ತಗಲುವ ವೆಚ್ಚ ಒಬ್ಬರಿಗೆ ರೂ 4,07,700/-, ಪ್ರೈಡ್ ಆಫ್ ಕರ್ನಾಟಕ ಪ್ರವಾಸ ದಿನಾಂಕ: 01-02-2025 ರಿಂದ 06-02-2025 ರವರೆಗೆ ಬೆಂಗಳೂರಿನಿಂದ – ನಂಜನಗೂಡು– ಮೈಸೂರು– ಹಳೇಬೀಡು, ಚಿಕ್ಕಮಗಳೂರು, ಹೊಸಪೇಟೆ–ಗೋವಾ– ಬೆಂಗಳೂರನ್ನು ಒಳಗೊಂಡಿದ್ದು ಇದಕ್ಕೆ ತಗಲುವ ವೆಚ್ಚ 2,71,800 ರೂಪಾಯಿಗಳು. ಸೋಜರ್ನ್ ಆಫ್ ಸೌತ್ ಚಾರ್ಟರ್ಡ್ ಪ್ರವಾಸವನ್ನು 29-12-2024 ರಿಂದ 12-02-2025 ರವರೆಗೆ ಆಯೋಜಿಸಲಾಗಿದೆ.

ಭಾರತ ಅದರಲ್ಲೂ ದಕ್ಷಿಣ ಭಾರತದ ಪ್ರವಾಸೋದ್ಯಮವನ್ನು ಜಾಗತಿಕವಾಗಿ ಗುರುತಿಸಲು ಈ ಪ್ರವಾಸವು ಹೆಚ್ಚು ಸಹಕಾರಿಯಾಗಿದೆ. 2029 ರ ವೇಳೆಗೆ ಪ್ರವಾಸಿಗರ ಸಂಖ್ಯೆಯನ್ನು ಹೆಚ್ಚಿಸಲು ಕರ್ನಾಟಕ ಭಾರತೀಯ ರಾಜ್ಯಗಳ ಪಟ್ಟಿಯಲ್ಲಿ 3ನೇ ಅಗ್ರಸ್ಥಾನ ಪಡೆಯುವ ಗುರಿ ಸಹ ಹೊಂದಿದೆ. ಅಲ್ಲದೆ ಪ್ರವಾಸಿ ತಾಣದ ಮಹತ್ವವನ್ನು ಜನರಿಗೆ ತಿಳಿಸಲು ಈ ಪ್ರವಾಸ ಹೇಳಿ ಮಾಡಿಸಿದಂತಿದೆ.

ಕಾರ್ಯಕ್ರಮದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಸಲ್ಮಾ ಕೆ. ಫಾಹಿಮ್, ಕೆಎಸ್‌ಟಿಡಿಸಿ ಅಧ್ಯಕ್ಷ ಎಂ.ಶ್ರೀನಿವಾಸ್, ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ ಹಾಗೂ ಇನ್ನಿತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಲ್ಪತರ ನಾಡಿನಲ್ಲಿ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನ: ಲಾಂಛನ ಬಿಡುಗಡೆ ಮಾಡಿದ ಸಿಎಂ ಸಿದ್ದರಾಮಯ್ಯ

ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಡಿಸೆಂಬರ್‌ನಲ್ಲಿ ಸಮ್ಮೇಳನ ಮಾಡಲು ಉದ್ದೇಶಿಸಲಾಗಿತ್ತು. ತಾವು ನೀಡಿದ ಸಲಹೆ ಹಿನ್ನೆಲೆಯಲ್ಲಿ ಜನವರಿ ತಿಂಗಳಲ್ಲಿ ಸಮ್ಮೇಳನ ಆಯೋಜಿಸಲು ನಿರ್ಧರಿಸಲಾಯಿತು ಎಂದು ಹೇಳಿದಾಗಲೂ ಪ್ರತಿಕ್ರಿಯಿಸಿದ ಸಿಎಂ, ಪತ್ರಕರ್ತರ ಸಮ್ಮೇಳನ ಚೆನ್ನಾಗಿ ಆಯೋಜಿಸಿ. ಚರ್ಚೆಗಳಾಗಲಿ. ಖಂಡಿತವಾಗಿ ಬರುತ್ತೇನೆ ಎಂದರು.

ಇದೇ ಸಂದರ್ಭದಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರನ್ನು ಆಹ್ವಾನಿಸಲಾಯಿತು.

ಈ ಸಂದರ್ಭದಲ್ಲಿ ತುಮಕೂರು ಜಿಲ್ಲಾ ಘಟಕದ ಅಧ್ಯಕ್ಷ ಚಿ.ನಿ.ಪುರುಶೋತ್ತಮ್, ಪ್ರಧಾನ ಕಾರ್ಯದರ್ಶಿ ರಘುರಾಮ್, ರಾಷ್ಟ್ರೀಯ ಮಂಡಳಿ ಸದಸ್ಯರಾದ ಡಿ.ಎಂ.ಸತೀಶ್, ಟಿ.ಎನ್.ಮಧುಕರ್, ಅನು ಶಾಂತರಾಜು, ಜಿಲ್ಲಾ ಪದಾಧಿಕಾರಿಗಳಾದ ಸತೀಶ್ ಹಾರೋಗೆರೆ, ಪರಮೇಶ್, ಯಶಸ್, ಹರೀಶ್ ಆಚಾರ್ಯ, ಕೆ.ವಿ.ಪುರುಷೋತ್ತಮ ಹಾಜರಿದ್ದರು.

### ಖಾಸಗಿ ವಾಹನ ಚಾಲಕರಿಗೆ ಗುಡ್ ನ್ಯೂಸ್: ದೇಶದಲ್ಲೇ

## ಯಾವ ರಾಜ್ಯ ಮಾಡದ್ದನ್ನು ಮಾಡಿದ ಕರ್ನಾಟಕ

ನೋಡುವುದಾದರೆ, ನೋಂದಾಯಿತ ಸದಸ್ಯರು ರಾಜ್ಯದ ಯಾವುದೇ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು 5 ಲಕ್ಷ ರುಪಾಯಿ ವರೆಗೆ ಕ್ಯಾಶ್ಲೆಸ್ ವ್ಯವಸ್ಥೆ. 50 ರಿಂದ 1 ಲಕ್ಷದವರೆಗೆ ಯಾವುದೇ ಕಾಯಿಲೆಗೆ ಖಾಸಗಿ ಆಸ್ಪತ್ರೆಯಲ್ಲಿ ಅಡ್ಮಿಟ್ ಆಗಿ ಚಿಕಿತ್ಸೆ ಪಡೆದುಕೊಂಡು ಬಿಲ್ ಪಾವತಿ ಮಾಡಿದ್ರೆ, ಆ ಬಿಲ್ ನಲ್ಲಿ ಒಂದು ಲಕ್ಷ ರುಪಾಯಿವರೆಗೆ ಹಣವನ್ನು ಮಂಡಳಿಗೆ ಬಿಲ್ ನೀಡಿ ಮರುಪಾವತಿ ಮಾಡಿಕೊಳ್ಳಬಹುದು.

ಮಹಿಳಾ ಚಾಲಕಿಯರಿಗೆ ಏನು?

ಮಹಿಳಾ ಚಾಲಕಿಯರಿಗೆ ಎರಡು ಮಕ್ಕಳಿಗೆ ಹೆರಿಗೆ ಭತ್ಯೆಯ ರೂಪದಲ್ಲಿ ತಲಾ ಹತ್ತು ಸಾವಿರ ರುಪಾಯಿ ನೀಡಲಾಗುತ್ತದೆ..ನೋಂದಾಯಿಸಲ್ಪಟ್ಟ ಚಾಲಕ ಆಕ್ಸಿಡೆಂಟ್ ನಲ್ಲಿ ಮೃತಪಟ್ಟರೇ ಅಂತಹ ಚಾಲಕನ ಮಕ್ಕಳಿಗೆ 1 ರಿಂದ ಡಬಲ್ ಡಿಗ್ರಿವರೆಗೆ ಹತ್ತು ಸಾವಿರದಿಂದ 25 ಸಾವಿರದವರೆಗೆ ಸಹಾಯಧನ ನೀಡಲಾಗುತ್ತದೆ. ಯಾರಿಗೆಲ್ಲ ಈ ಸೌಲಭ್ಯ ದೊರೆಯುತ್ತದೆ ಎಂದು ನೋಡುವುದಾದರೆ, ಆಟೋ ಚಾಲಕರು, ಕ್ಯಾಬ್ ಡ್ರೈವರ್, ಖಾಸಗಿ ಬಸ್ ಚಾಲಕರು, ಸ್ಕೂಲ್ ಬಸ್ ಚಾಲಕರು, ಲಾರಿ ಚಾಲಕರು, ಖಾಸಗಿ ಬಸ್ ಕಂಡಕ್ಟರ್, ಕ್ಲೀನರ್, ಮೆಕಾನಿಕ್, ವಾಹನಗಳ ಪೇಂಟರ್, ವೆಲ್ಡರ್ಸ್, ಬಾಡಿ ಬಿಲ್ಡರ್ಸ್, ಗಳು ಪಡೆದುಕೊಳ್ಳಬಹುದು.

ಒಟ್ಟಿನಲ್ಲಿ ದೇಶದ ಯಾವುದೇ ಸರ್ಕಾರವು ಮಾಡದ್ದನ್ನ ರಾಜ್ಯ ಕಾಂಗ್ರೆಸ್ ಸರ್ಕಾರ ಮಾಡಲು ಮುಂದಾಗಿರೋದು ನಿಜಕ್ಕೂ ಚಾಲಕರ ಹಲವು ದಶಕಗಳ ಕನಸನ್ನು ನನಸು ಮಾಡಲು ಮುಂದಾಗಿದೆ.

## ಆತ್ಮವಿಶ್ವಾಸವೂ ಬೇಕು: ಬಲಭೀಮ ಬಸೋಳೆ

ರತನ್ ಟಾಟಾ ಕಾಮರ್ಸ್ ಕ್ಲಬ್ ಉದ್ಘಾಟಿಸಲಾಗಿದೆ. ಇದರ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಸ್ವಯಂ ಉದ್ಯೋಗ ಮಾಡಲು ಸಹಕಾರಿಯಾಗಲಿದೆ ಎಂದರು. ವೇದಿಕೆ ಮೇಲೆ ವಿಶ್ರಾಮತ ಕುಲಪತಿಗಳಾದ ಪ್ರೊ. ಬಿ.ಜಿ.ಮೂಲಿಮನಿ, ಕರಾಶಿ ಸಂಸ್ಥೆಯ ಜಂಟಿ ಕಾರ್ಯದರ್ಶಿ ಶಿವಾನಂದ ಗಾದಗೆ, ಕಾಲೇಜಿನ ಪ್ರಾಚಾರ್ಯರಾದ ಡಾ. ಮಲ್ಲಿಕಾರ್ಜುನ ಹಂಗರಗೆ, ಉಪ ಪ್ರಾಚಾರ್ಯರಾದ ಅನೀಲಕುಮಾರ ಚಿಕ್ಕಮಣೂರ್, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ. ಶಶಿಧರ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕರ್ನಾಟಕ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು. ಇದೇ ವೇಳೆ ಕ್ಲಬ್ ಸ್ಥಾಪನೆಯ ಪ್ರಮುಖ ಉದ್ದೇಶಗಳನ್ನು ಒಳಗೊಂಡ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ವಾಣಿಜ್ಯ ವಿಭಾಗದ ಸಾಧನಾ ಚಿಮಕೊಡೆ ಸ್ವಾಗತಿಸಿದರು. ಆನಿ ಕ್ರಿಷ್ಟಿನಾ ನಿರೂಪಿಸಿದರು. ಡಾ. ಸೋಮೇಶ್ವರಿ ಮುದ್ದಾ ವಂದಿಸಿದರು.

## ಗ್ರಾಮದ ನೈರ್ಮಲ್ಯ ಹಾಗೂ ನೀರಿನ ಸಮರ್ಪಕ ಬಳಕೆಗೆ ಒತ್ತು ನೀಡಿ; ರಾಹುಲ್ ತುಕರಾಂ

ಪೋಲಾಗದಂತೆ ತಡೆಯಲು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದರು.

ನಂತರ ಗ್ರಾಮ ಪಂಚಾಯತಿಯಲ್ಲಿರುವ ಗ್ರಂಥಾಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಶಾಲಾ ಮಕ್ಕಳ ಸಮಸ್ಯೆಗಳನ್ನು ಆಲಿಸಿದರು ನಂತರ ಮಕ್ಕಳೊಂದಿಗೆ ಸಂವಾದ ನಡೆಸಿದರು.

ಪಂಚಾಯತಿ ವ್ಯಾಪ್ತಿಯಲ್ಲಿ ತೆರಿಗೆ ಸಂಗ್ರಹಣೆ ಮಾಡಿರುವ ಬಗ್ಗೆ ಮಾಹಿತಿ ಪಡೆದುಕೊಂಡರು. ಖಾತಾ ವಿತರಣೆ ಮಾಡುವುದನ್ನು ಪರಿಶೀಲಿಸಿದರು. ಪಂಚಾಯತ್ ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿ ಕಸವಿಲೇವಾರಿ ಮಾಡಲು ಕಸದ ವಾಹನವನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಹಾಗೂ ಮಹಿಳಾ ಚಾಲಕರ ಸೇವೆಪಡೆದು ನಿರ್ವಹಿಸಲು ತಿಳಿಸಲಾಯಿತು.

ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶಶೀಧರ್ ಸ್ವಾಮಿ, ನರೇಗಾ ಸಹಾಯಕ ನಿರ್ದೇಶಕರಾದ ಮಂಜುನಾಥ ಜಾವೂರ್, ಪಿ.ಆರ್.ಇ.ಡಿ ಎಇಇ, ಟಿಎಇ ಹಾಗೂ ನರೇಗಾ ಸಿಬ್ಬಂದಿ ಮತ್ತು ಗ್ರಾಮ ಪಂಚಾಯತ್ ಸಿಬ್ಬಂದಿಗಳು ಇದ್ದರು.

## ಗಣಿಬಾಧಿತ ಪ್ರದೇಶದಲ್ಲಿ ತಾಲೂಕಿಗೊಂದು ವೃಕ್ಷೋದ್ಯಾನ: ಸಚಿವ ಈಶ್ವರ ಖಂಡ್ರೆ

ಮಾಡುವಂತೆ ಅವರು ಸೂಚಿಸಿದರು.

ಬಳ್ಳಾರಿ ವೃತ್ತದಲ್ಲಿ ಎಷ್ಟು ಸಿ ಪ್ರವರ್ಗದ ಗಣಿಗಳಿವೆ, ಗಣಿ ಕಂಪನಿಗಳಿಗೆ ಪರಿಹಾರಾತ್ಮಕ ಅರಣ್ಯ ಬೆಳೆಸಲು ಎಷ್ಟು ಡಿಗ್ರೇಡೆಡ್ ಅರಣ್ಯ ಭೂಮಿ ನೀಡಲಾಗಿದೆ, ಎಷ್ಟು ಭೂಮಿಯಲ್ಲಿ ಪರಿಹಾರಾತ್ಮಕ ಅರಣ್ಯ ಬೆಳೆಸಲಾಗಿದೆ. ಅರಣ್ಯದಂಚಿನಲ್ಲಿ ಶ್ರೀಗಂಧ, ಬೀಟೆ, ತೇಗ ಮೊದಲಾದ ಬೆಲೆಬಾಳುವ ಮರಗಳ ಜಿಯೋ ಟ್ಯಾಗ್ ಮಾಡಲಾಗಿದೆಯೇ ಎಂಬ ಪ್ರಶ್ನೆಗಳಿಗೆ ಸಮರ್ಪಕ ಉತ್ತರ ನೀಡದ ಅಧಿಕಾರಿಗಳನ್ನು ಸಚಿವರು ತರಾಟೆಗೆ ತೆಗೆದುಕೊಂಡರು.

ದಾವಣಗೆರೆ, ಕೊಪ್ಪಳ, ಬಳ್ಳಾರಿ, ವಿಜಯನಗರ, ಚಿತ್ರದುರ್ಗ ವಿಭಾಗದಲ್ಲಿ ಹೆಚ್ಚಿನ ಸಸಿಗಳನ್ನು ನೆಟ್ಟು ಪೋಷಿಸಲು ಮತ್ತು ರೈತರ ಬೇಡಿಕೆಗೆ ಅನುಗುಣವಾಗಿ ಸಸಿಗಳನ್ನು ವಿತರಿಸಲು ನರ್ಸರಿಗಳಲ್ಲಿ ಸಸಿ ಬೆಳೆಸಲು ಹೆಚ್ಚಿನ ಮುತುವರ್ಜಿ ವಹಿಸುವಂತೆ ಸೂಚಿಸಿದರು.

ಅರಣ್ಯ ಒತ್ತುವರಿ ಬಗ್ಗೆ ನಿಗಾ ಇಡಲು ಸೂಚನೆ ಗುತ್ತಿಗೆ ನೀಡಿರುವ ಪ್ರದೇಶಕ್ಕಿಂತ ಹೆಚ್ಚುವರಿಯಾಗಿ ಗಣಿಗಾರಿಕೆಗೆ ಅರಣ್ಯ ಪ್ರದೇಶ ಒತ್ತುವರಿಯಾಗುತ್ತಿರುವ ಬಗ್ಗೆ ದೂರುಗಳಿದ್ದು, ಉಪಗ್ರಹ ಚಿತ್ರ ಮತ್ತು ಕೆ.ಎಂ.ಎಲ್. ನಕ್ಷೆ ಆಧರಿಸಿ ಅರಣ್ಯ ಸಂರಕ್ಷಿಸುವಂತೆಯೂ ಸಚಿವ ಈಶ್ವರ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಶಾಸಕ ಭರತರೆಡ್ಡಿ, ಅರಣ್ಯ ಸಂರಕ್ಷಣಾಧಿಕಾರಿ ಚಂದ್ರಶೇಖರ ನಾಯಕ್, ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳಾದ ಅರ್ನಲಾನ್, ಸಂದೀಪ್ ಸೂರ್ಯವಂಶಿ, ಮಾರ್ಕಂಡೇಯ ಮತ್ತು ಜಿ.ಜೆ. ರವಿ ಮತ್ತಿತರರು ಉಪಸ್ಥಿತರಿದ್ದರು.

## ಒಂದು ದಿನದ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಡಿಸೆಂಬರ್.21–ನಗರದ ಎಲ್ಲಾ ಆಹಾರ ಪದಾರ್ಥಗಳ ತಯಾರಕರು ಹಾಗೂ ಇತರೆ ಆಹಾರ ಪದಾರ್ಥಗಳ ಮಾರಾಟಗಾರರು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದಿಂದ ನೋಂದಣಿ ಹಾಗೂ ಪರವಾನಿಗೆ ಮಾಡಿಸುವುದು ಕಡ್ಡಾಯವಾಗಿರುತ್ತದೆ ಹಾಗೂ ಡಿಸೆಂಬರ್ ತಿಂಗಳಲ್ಲಿ ಕ್ರಿಸ್‌ಮಸ್ ಹಾಗೂ ಹೊಸ ವರ್ಷ ಆಚರಣೆಗೆ ಸಾರ್ವಜನಿಕರು ಹೆಚ್ಚಾಗಿ ಕೇಕ್ ತೆಗೆದುಕೊಳ್ಳುತ್ತಾರೆ, ಕಾರಣ ಜಿಲ್ಲೆಯ ಎಲ್ಲಾ ಬೇಕರಿ ಮಾಲೀಕರಿಗೆ ಕೃತಕ ಬಣ್ಣವನ್ನು ನಿಯಮದ ಮಿತಿಯಲ್ಲಿ ಬಳಸಬೇಕೆಂದು ಜಿಲ್ಲಾ ಅಂಕಿತ ಅಧಿಕಾರಿಗಳಾದ ಡಾ.ಸಂತೋಷ ಸೂಚಿಸಿದರು.

ಅವರು ಇತ್ತೀಚಿಗೆ ಬೀದಿ ಬದಿ ವ್ಯಾಪಾರಿಗಳು, ಟೀ ಅಂಗಡಿಗಳು, ಬೇಕರಿ, ಜಿಲೇಬಿ ತಯಾರಕರು, ಚೈನಿಸ್ ಫಾಸ್ಟ ಪುಡ್, ಟೀಫಿನ್ ಸೆಂಟರ್, ಜುಸ್ ಸೆಂಟರ್, ಚಿಕನ್ ಮತ್ತು ಕಬಾಬ್ ಸೆಂಟರ್, ಚಾರ್ಟ ಭಂಡಾ ರ್ ಗಳ ವಿಶೇಷ ನೋಂದಣಿ ಮತ್ತು ಪರವಾನಿಗೆ ಆಂದೋಲನ್ ಬಗ್ಗೆ ಹುಮನಾಬಾದ ಆರ್ಯ ಸಮಾಜದಲ್ಲಿ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದರು.

ಬೀದಿ ಬದಿ ವ್ಯಾಪಾರಿಗಳು ಯಾವುದೇ ತರಹದ ಕೃತಕ ಪದಾರ್ಥಗಳನ್ನು, ಟೆಸ್ಟಿಂಗ್ ಪೌಡರಗಳ, ಪಾನಿಪೋರಿ ನೀರಿನಲ್ಲಿ ಸಿಟ್ರಸ್ ಹಾಗೂ ಬಾಳೆ ಹಣ್ಣುಗಳನ್ನು ರೈಪನಿಂಗ ಮಾಡಲು ಕ್ಯಾಲ್ಸಿಯಂ ಕಾರ್ಬೈಡ್ ಬಳಕೆ ಮಾಡದಂತೆ ಎಚ್ಚರಿಕೆ ನೀಡಿದರು ಹಾಗೂ ಒಂದು ವೇಳೆ ಕೃತಕ ಬಣ್ಣ ಉಪೋಗಿಸಿದ ಪಕ್ಷದಲ್ಲಿ ತಮ್ಮ ವಿರುದ್ಧ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ವತಿಯಿಂದ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದರು.

ಈ ಕಾರ್ಯಕ್ರಮದಲ್ಲಿ ಗೌರವ ಅಧ್ಯಕ್ಷರು ಸುಭ್ಹಾಷ ಅಷ್ಟಿಕರ್, ಆರ್ಯ ಸಮಾಜದ ಅಧ್ಯಕ್ಷ ನಾರಾಯಣ ಚಿದ್ರಿ ಹಾಗೂ ಕಾರ್ಯಕ್ರಮ ಸಂಚಾಲನೆ ಬೀದರ ತಾಲ್ಲೂಕಾ ಆಹಾರ ಸುರಕ್ಷತಾ ಅಧಿಕಾರಿ ಮನೋಹರ ಅಲಶೆಟ್ಟಿ, ನಿರೂಪಣೆ ಹುಮನಾಬಾದ ತಾಲ್ಲೂಕಾ ಆಹಾರ ಸುರಕ್ಷತಾಧಿಕಾರಿ ರಾಜ ರೆಡ್ಡಿ ಹಾಗೂ ವ್ಯಾಪಾರಿಗಳಾದ ರಾಜಕುಮಾರ, ಆಶಿಫ್, ಗುಂಡಾರೆಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ನಿವೃತ್ತಿ ಹೊಂದಿದ ಸಾರಿಗೆ ನೌಕರರಿಗೆ

## ಹೊಸ ವರ್ಷದ ಮುಂಚೆಯೇ ಬಂಪರ್ ಕೊಡುಗೆ

ಕಲಬುರಗಿ,ಡಿ.21.(ಕ.ವಾ)– ಪ್ರಸ್ತುತ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಸುಮಾರು 19,000 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ನಿಗಮದಲ್ಲಿ ಪ್ರತಿ 4 ವರ್ಷಕ್ಕೊಮ್ಮೆ ಸಿಬ್ಬಂದಿಗಳ ವೇತನ ಪರಿಷ್ಕರಣೆ ಮಾಡಲಾಗುತ್ತದೆ. ದಿನಾಂಕ:01-01-2020 ರ ವೇತನ ಪರಿಷ್ಕರಣೆಯನ್ನು ಸರ್ಕಾರದ ಆದೇಶದಂತೆ ಮಾರ್ಚ್–2023 ರ ಮಾಹೆಯಲ್ಲಿ ಮೂಲ ವೇತನದ ಶೇ.15 ರಷ್ಟು ಹೆಚ್ಚಿಸಿ ಅನುಷ್ಠಾನಗೊಳಿಸಿ ಪಾವತಿಸಲಾಗುತ್ತಿದೆ ಎಂದು ನಿಗಮದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ದಿನಾಂಕ:01-01-2020 ರಿಂದ 28-02-2023 ರವರೆಗೆ ಸೇವೆಯಿಂದ ವಿಮುಕ್ತಿಗೊಂಡ ಸಿಬ್ಬಂದಿಗಳಿಗೆ ಈ ವೇತನ ಪರಿಷ್ಕರಣೆಯ ಆರ್ಥಿಕ ಸೌಲಭ್ಯ ನೀಡುವ ಆಶಯದಿಂದ ಮಾನ್ಯ ಸಾರಿಗೆ ಮತ್ತು ಮುಜರಾಯಿ ಖಾತೆ ಸಚಿವರಾದ ರಾಮಲಿಂಗರೆಡ್ಡಿರವರ ಸತತ ಪ್ರಯತ್ನದಿಂದಾಗಿ ಮತ್ತು ನಾಲ್ಕು ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳ ಸಹಯೋಗದಿಂದ ನಿವೃತ ನೌಕರರ ಮೂಲ ವೇತನ ಪರಿಷ್ಕರಣೆಯ ವ್ಯತ್ಯಾಸದಿಂದ ಬರುವ ಉಪದಾನ ಮತ್ತು ರಜಾ ನಗದೀಕರಣವನ್ನು ಪಾವತಿಸಲು ಕರ್ನಾಟಕ ಘನ ಸರ್ಕಾರವು ದಿನಾಂಕ:07/12/2024 ರ ಆದೇಶದನ್ವಯ ನಾಲ್ಕು ನಿಗಮಗಳಿಗೆ ರೂ.224.05 ಕೋಟಿಗಳನ್ನು ಅನುದಾನ ಬಿಡುಗಡೆ ಮಾಡಿದೆ.

ಅದರಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ ರೂ.35.75 ಕೋಟಿಗಳಷ್ಟು ಹಂಚಿಕೆಯಾಗಿರುತ್ತದೆ. ಸದರಿ ಮೊತ್ತ 35.75 ಕೋಟಿ ರೂ.ಗಳನ್ನು 2034 ಸಿಬ್ಬಂದಿಗಳಿಗೆ ಅರ್ಹ ಮೊತ್ತವನ್ನು ದಿನಾಂಕ: 21-12-2024 ರಂದು ಬಟವಡೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಡಿಸೆಂಬರ್ 23 ರಂದು ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟನೆ

ಕಲಬುರಗಿ,ಡಿ.21–ಕಾಸಿಯಾ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ಸರ್ಕಾರ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಸ್ಥಳೀಯ ಕೈಗಾರಿಕಾ ಸಂಘಗಳ ಸಹಯೋಗದೊಂದಿಗೆ "ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು" (ಖಂಒಚಿಕ) ಯೋಜನೆಯಡಿ ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ರಾಜ್ಯದ 20 ಜಿಲ್ಲೆಗಳಲ್ಲಿ ಆಯೋಜಿಸಲು ಯೋಜಿಸಲಾಗಿದೆ.

ಅದೇ ರೀತಿ ಡಿಸೆಂಬರ್ 23 ರಂದು ಸೋಮವಾರ ಬೆಳಿಗ್ಗೆ 10.30 ಗಂಟೆಗೆ ಕಲಬುರಗಿಯ ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಉದ್ದೇಶಿತ ಕಾರ್ಯಕ್ರಮವು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳ ಉತ್ಪಾದಕತೆ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಸಹಕಾರಿಯಾಗುವುದಲ್ಲದೇ ಎಂ.ಎಸ್.ಎಂ.ಇ.ಗಳ ಸಾಮರ್ಥ್ಯ ವೃದ್ಧಿಗಾಗಿ ನಿರ್ಣಾಯಕವಾಗಲಿದೆ. ದೀರ್ಘಾವಧಿಯ ಆರ್ಥಿಕ ಸ್ಥಿರತೆ ಮತ್ತು ಬೆಳವಣಿಗೆಯನ್ನು ಸಾಧಿಸಲು ಅಗತ್ಯವಾದ ಜ್ಞಾನ ಮತ್ತು ಕೌಶಲ್ಯಗಳೊಂದಿಗೆ ತಮ್ಮ ವ್ಯವಹಾರಗಳನ್ನು ಸಶಕ್ತಗೊಳಿಸುವುದಾಗಿದೆ. ರಫ್ತು ಜಾಗೃತಿ ಕಾರ್ಯಗಾರ, ಲೀನ್ ಯೋಜನೆ ಮತ್ತು ಝಡ್.ಇ.ಡಿ. ಹಾಗೂ ಇತರೆ ಕೈಗಾರಿಕಾ ವಲಯಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ಸೇರಿಸಿ ಈ ಕಾರ್ಯಕ್ರಮವನ್ನು ರೂಪಿಸಲಾಗಿದ್ದು, ಹೆಚ್ಚಿನ ವಿವರಗಳಿಗಾಗಿ ಕೆ.ಎಸ್. ಶ್ರೀಧರ ಇವರ ಮೊಬೈಲ್ ಸಂಖ್ಯೆ 9945696049 ಗೆ ಸಂಪರ್ಕಿಸಲು ಕೋರಲಾಗಿದೆ.

### ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.21–ಕಲಬುರಗಿ ಮಹಾನಗರಪಾಲಿಕೆ 2024–25ನೇ ಸಾಲಿಗಾಗಿ ಶೇ. 7.25 ಯೋಜನೆಯ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ಜನರಿಗೆ 2024–25ನೇ ಸಾಲಿನ ಎಸ್.ಎಫ್.ಸಿ. (ಮುಕ್ತ ನಿಧಿ) ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕ್ ಮುಖಾಂತರ ಎಲೆಕ್ಟ್ರಿಕಲ್ ಆಟೋ ರಿಕ್ಷಾ ಖರೀದಿಗೆ ಸಹಾಯಧನಕ್ಕೆ ಸಂಬಂಧಿಸಿದಂತೆ ಅರ್ಹ ಹಾಗೂ ಅನರ್ಹ ಅರ್ಜಿದಾರರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ. ಅದೇ ರೀತಿ ಮಹಾನಗರ ಪಾಲಿಕೆಯ ʒಣಣಠಿ://ತಿತಿತಿ.ಇಚಿಟಚಿಛಿಣಡಿಚಿರುಛಿಣಥಿ.ಟಡಿಛಿ.ರಠತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾದ್ದು, ಈ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಆಯ್ಕೆಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಜನವರಿ 27 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆಯ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

## ಅನ್ನಭಾಗ್ಯ ಯೋಜನೆಯು ಪ್ರತಿಯೊಬ್ಬರಿಗೂ ತಲುಪಿಸುವ ಕಾರ್ಯ ಮುಂದುವರಿಲಿ : ಮುರಳಿದ ರಾವ್ ಕುಲಕರ್ಣಿ



(ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕುನೂರು ಪಟ್ಟಣದ ಅನ್ನದಾನೇಶ್ವರ ಶಾಖ ಮಠದಲ್ಲಿ ಆಯೋಜಿಸಿದ್ದ ಅನ್ನದಾನೇಶ್ವರ ತಾಲೂಕ ಪಡಿತರ ವಿತರಕರ ಸಂಘದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ತಾಲೂಕ ಗ್ರೇಡ್ 2 ತಹಸಿಲ್ದಾರ ಮುರಳಿದ ರಾವ್ ಕುಲಕರ್ಣಿ ಮುಖ್ಯಮಂತ್ರಿಗಳ ಮಹಾತ್ವಕಾಂಕ್ಷಿ ಯೋಜನೆಯದ ಅನ್ನಭಾಗ್ಯವನ್ನು ಪ್ರತಿಯೊಬ್ಬರಿಗೂ ತಲುಪಿಸುವ ಪಡಿತರ ವಿತರಕರು ಸಹ ಒಗ್ಗಟ್ಟಾಗಿ ಸಂಘಟನೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು ಅವರ ಕಾರ್ಯಗಳೆಲ್ಲವೂ ಯಶಸ್ವಿಗೊಳ್ಳಲಿ ಮತ್ತು ಸೇವಾ ಮನೋಭಾವನೆಯಿಂದ ಪ್ರತಿಯೊಬ್ಬ ವಿತರಕರು ಕಾರ್ಯನಿರ್ವಹಿಸಲಿ ಎಂದು ಗ್ರೇಡ್ 2 ತಹಸೀಲ್ದಾರ ಮುರುಳಿದ ರಾವ್ ಕುಲಕರ್ಣಿ ಹೇಳಿದರು.

ಪಟ್ಟಣದಲ್ಲಿರುವ ಅನ್ನದಾನೇಶ್ವರ ಶಾಖ ಮಠದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಶ್ರೀ ಅನ್ನದಾನೇಶ್ವರ ತಾಲೂಕ ಸರ್ಕಾರಿ ಪಡಿತರ ವಿತರಕರ ಸಂಘದ ಉದ್ಘಾಟನೆ ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಗ್ರೇಡ್ ಟು ತಹಸಿಲ್ದಾರ ಮುರಳಿದ ರಾವ್ ಕುಲಕರ್ಣಿ ಮಾತನಾಡುತ್ತಾ ಪ್ರತಿಯೊಬ್ಬರು ಸೇವಾ ಮನೋಭಾವನೆ ಯೊಂದಿಗೆ ನಿಷ್ಠೆ ಹಾಗೂ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು, ಸರ್ಕಾರ ನಿರ್ವಹಿಸಿದ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸುವುದರೊಂದಿಗೆ ಯಶಸ್ವಿ ಕಾಣಬೇಕು ಎಂದು ಹೇಳಿದರು.

ಈ ವೇಳೆಯಲ್ಲಿ ಕುಕನೂರಿನ ಅನ್ನದಾನೇಶ್ವರ ಶಾಖಾಮಠದ ಶ್ರೀಗಳು ಮಾತನಾಡುತ್ತಾ ಪಟ್ಟಣದಲ್ಲಿರುವ ಪ್ರತಿಯೊಬ್ಬ ಮನುಷ್ಯರು ಕೃತಜ್ಞತಾ ಭಾವನೆ ಹೊಂದುವುದು ಬಹುಮುಖ್ಯವಾಗಿದ್ದು ಹಣದ. ಸ್ತಿರುವಂತಿಕೆಗಿಂತ ಕೃತಜ್ಞತೆ ಭಾವನೆಯ ಶ್ರೀಮಂತಿಕೆಯನ್ನು ನಿಮ್ಮದಾಗಿಸಿಕೊಳ್ಳಿ ಎಂದು ಕುಕನೂರು ಪಟ್ಟಣದ ಶ್ರೀ ಅನ್ನದಾನೇಶ್ವರ ಶಾಖ ಮಠದ ಪೂಜ್ಯರಾದ ಶ್ರೀ ಮಹಾದೇವ ಮಹಾಸ್ವಾಮಿಗಳು ಹೇಳಿದರು.

ಅನ್ನದಾನೇಶ್ವರ ಮಠದಿಂದ ಪ್ರತಿಯೊಬ್ಬರು ವಿವಿಧ ರೀತಿಯ ಸಹಕಾರವನ್ನು ಪಡೆದಿದ್ದು ಆದರೆ ಇದೇ ಮೊದಲ ಬಾರಿಗೆ ತಾಲೂಕ ಮಟ್ಟದ ಸಂಘ ಸಂಸ್ಥೆಗೆ ಶ್ರೀ ಅನ್ನದಾನೇಶ್ವರರ ಹೆಸರು ನಾಮಕರಣ ಮಾಡಿರುವುದು ಹೆಮ್ಮೆ ಹಾಗೂ ಸಂತಸದ ವಿಷಯವಾಗಿದ್ದು ಒಳ್ಳೆಯ ಕೆಲಸ ಮಾಡಿದವರನ್ನು ಎಂದಿಗೂ ಸ್ಮರಣೆ ಮಾಡಿಕೊಳ್ಳುತ್ತಿರಬೇಕು ಮನುಷ್ಯನ ಜೀವನದಲ್ಲಿ ಕೃತಜ್ಞತೆ ಭಾವನೆ ಬಹುಮುಖ್ಯವಾಗಿದ್ದು ಹಣ ಐಶ್ವರ್ಯಗಳ ಶ್ರೀಮಂತಿಕೆಗಿಂತ ಕೃತಜ್ಞತೆ ಭಾವನೆ ಹೊಂದುವ ಸೇರುವಂತಿಕೆ ಹೆಚ್ಚು ಕಾಲ ಬಾಳುತ್ತದೆ. ಸಮಾಜಕ್ಕೆ ನಾವೇನಾದರೂ ಒಳ್ಳೆಯ ಕಾರ್ಯಗಳನ್ನು ಮಾಡಿದಾಗ ಅದರ ಪ್ರತಿಫಲ ಸಮಾಜದಿಂದ ಮರಳಿ ಸಿಕ್ಕೇ ಸಿಗುತ್ತದೆ. ಕೃತಜ್ಞತೆ ಇದ್ದಾಗ ಮಾತ್ರ ಜೀವನದಲ್ಲಿ ಯಶಸ್ಸು ಸಾಧ್ಯ ಎಂದು ತಿಳಿಸಿದರು.

ಕರ್ನಾಟಕ ಹೈಕೋರ್ಟ್ ವಕೀಲರಾದ ರಾಜಶೇಖರ ಹಳ್ಳಿ ಮಾತನಾಡುತ್ತಾ ಮನುಷ್ಯನು ತಾನು ನಡೆದ ಬಂದ ದಾರಿಯನ್ನು ಮರೆಯಬಾರದು ಮಾನವನ ಬೆಳವಣಿಗೆಯಲ್ಲಿ ವೃತ್ತಿಗಳು ಪ್ರಮುಖವಾದ ಆಧಾರ ಸ್ಥಂಬಗಳಾಗಿದ್ದು ಅವರು ಮಾಡುತ್ತಿರುವ ವೃತ್ತಿಯ ಬಗ್ಗೆ ಹೆಮ್ಮೆ ಮತ್ತು ಗೌರವವನ್ನು ಹೊಂದಬೇಕು ಸರಕಾರ ಪಡಿತರ ವಿತರಕರಿಗೆ ನಿರ್ವಹಿಸಿದ ಕೆಲಸವನ್ನು ಸಮರ್ಪಕವಾಗಿ ನಿಭಾಯಿಸುವ ಕಾರ್ಯವನ್ನು ಪಡಿತರ ಅಂಗಡಿಯವರು ಮಾಡುತ್ತಿರುವುದು ಅವರ ಯಶಸ್ಸಿಗೆ ಕಾರಣವಾಗಿದೆ ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಕರ ರಾಜ್ಯ ಸಮಿತಿ ನಿರ್ದೇಶಕರಾದ ಹೊನ್ನಮ್ಮ ಕನಕಗಿರಿ ಹಾಗೂ ಇನ್ನಿತರದಿಂದ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ವೇಳೆಯಲ್ಲಿ ಪಡಿತರ ವಿತರಕರ ತಾಲೂಕ ಸಂಘದ ಅಧ್ಯಕ್ಷ ನಿಂಗರಾಜ ಕಂದಗಲ್, ಪ್ರಮುಖರಾದ ಮಹಮ್ಮದ್ ಮುಸ್ತಫಾ, ಹಾಲಯ್ಯ ಜಾಲಿ, ವೀರಯ್ಯ ತೋಂಟದಾರ್ಯ ಮಠ, ತೋಟಯ್ಯ ಸ್ವಾಮಿ ತಳಕಲ್, ಕನಕಪ್ಪ ಚಲವಾದಿ, ಸಿದ್ದನಗೌಡ ಪೊಲೀಸ್ ಪಾಟೀಲ, ಷಣ್ಮುಖ ಗೌಡ್ರು, ಮಹೇಶ ಕಲ್ಮಠ, ಈರಣ್ಣ ಅಂಟಿ, ಶಿವಶರಣಪ್ಪ ಮ್ಯಾಳಿ, ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

## ಟಿ ಗುರುರಾಜ್ ಪಿ ಎಸ್ ಐ ಅವರಿಗೆ ಅಪರಾಧ ಪ್ರಕರಣಗಳಲ್ಲಿ ಅತ್ಯುತ್ತಮ ಪ್ರಶಂಸನ ಪತ್ರ.



(ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ಬಿ.ಎಸ್. ಲೋಕೇಶ ಕುಮಾರ ಐ.ಪಿ.ಎಸ್. ಪೊಲೀಸ್ ಮಹಾ ನಿರೀಕ್ಷಕರು, ಬಳ್ಳಾರಿ ವಲಯ ಬಳ್ಳಾರಿ ರವರು ಉತ್ತಮ ಕೆಲಸ ನಿರ್ವಹಿಸಿದ ಕುಕನೂರ ಪೊಲೀಸ್ ಠಾಣಾ ಅಧಿಕಾರಿಯಾದ ಟಿ ಗುರುರಾಜ್ ಅವರಿಗೆ ಅಪರಾಧ ಪ್ರಕರಣಗಳಲ್ಲಿ ಅತ್ಯುತ್ತಮ ಕಾರ್ಯನಿರ್ವಹಣೆಗಾಗಿ ಮತ್ತು ಈ ಆರ್ ಎಸ್ ಎಸ್ ಸಿಬ್ಬಂದಿಗಳಿಗೆ ಪ್ರಶಂಸನ ಪತ್ರ ನೀಡಿ ಇನ್ನು ಉತ್ತಮ ಕೆಲಸ ನಿರ್ವಹಿಸುವಂತೆ ಪ್ರೋತ್ಸಾಹ ನೀಡಿದರು.



ಬಸವಕಲ್ಯಾಣ :– ಇಲ್ಲಿನ ಅನುಭವ ಮಂಟಪದಲ್ಲಿ ಆಯೋಜಿಸಿದ್ದ ಸುಶೀಲಾದೇವಿ ಬಿ. ಪಾಟೀಲ್ ರ. ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಪೌರಾಯುಕ್ತರಾದ ರಾಜು ಡಿ. ಬಣಕಾರ್ ಅವರಿಗೆ ಕಾಯಕ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಜಿ. ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು. ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ದೇವರು. ಡಾ. ಎಸ್. ಬಿ. ದುರ್ಗೆ. ಕುಪೇಂದ್ರ ಪಾಟೀಲ್. ಮಾಲತಿ ಇವಳೆ. ನಾಗರಾಜ್. ಮಡಿವಾಳಯ್ಯ ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಹುಮನಾಬಾದ ಪುರಸಭೆಯ ವ್ಯಾಪ್ತಿಯಲ್ಲಿ ಬರುವ

## ಆನೈರ್ಮಲ್ಯ ಶೌಚಾಲಯ ಮತ್ತು ಮ್ಯಾನುಯಲ್ ಸ್ಕ್ಯಾವೆಂಜರ್ಸ್ ಮರು ಸಮೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಡಿ.21– ಪುರಸಭೆ ವ್ಯಾಪ್ತಿಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್ಸ್‌ಗಳ ಮರು ಸಮೀಕ್ಷೆ ನಡೆಸುತ್ತಿದ್ದು, ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವ ಆನೈರ್ಮಲ್ಯ ಶೌಚಾಲಯಗಳಿಂದ ಹೊರ ಹೋಗಿ ತೆರದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಮಲವನ್ನು ಸ್ವಚ್ಛಗೊಳಿಸುವ ಶೌಚಾಲಯದ ಮನಗುಂಡಿಗಳನ್ನು ದಹಿಕವಾಗಿ ಸ್ವಚ್ಛಗೊಳಿಸುವ ಕಾರ್ಯದಲ್ಲಿ ತೊಡಗಿಕೊಂಡಿರುವ ಯಾವುದೇ ವ್ಯಕ್ತಿಗಳು ತಮ್ಮ ಹೆಸರನ್ನು ಪುರಸಭೆಯಲ್ಲಿ ನೊಂದಾಯಿಸಿಕೊಳ್ಳುವಂತೆ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹ ಮ್ಯಾನುಯಲ್ ಸ್ಕ್ಯಾವೆಂಜರ್‌ಗಳು ನೊಂದಣಿಗಾಗಿ ತಮ್ಮ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಕುಟುಂಬದ ಸದಸ್ಯರನ್ನೊಳಗೊಂಡ ಭಾವಚಿತ್ರ ಬ್ಯಾಂಕ್ ಖಾತೆಯ ಪಾಸ್ ಬುಕ್, ಅಧಾರ ಕಾರ್ಡ್ ಪ್ರತಿ ಮ್ಯಾನುಯಲ್ ಸ್ಕ್ಯಾವೆಂಜರ್ಸ್‌ಗಳ ನಿರ್ವಹಿಸುತ್ತಿರುವ ಆನೈರ್ಮಲ್ಯದ ಶೌಚಾಲಯದ ಸ್ಥಳ ವಿವರ ಅಗತ್ಯ ದಾಖಲೆಗಳೊಂದಿಗೆ ಪುರಸಭೆಯ ಆರೋಗ್ಯ ಶಾಖೆಯ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಮತ್ತು ಪರಿಸರ ಅಭಿಯಂತರಿಗೆ ಸಂಪರ್ಕಿಸಲು ಕೋರಿದ್ದಾರೆ.

ಮುಖ್ಯಮಂತ್ರಿಗಳಿಂದ ಜಯದೇವ ಆಸ್ಪತ್ರೆ ಉದ್ಘಾಟನೆ:

# ಕಾರ್ಪೊರೇಟ್ ಆಸ್ಪತ್ರೆಯನ್ನು ಮೀರಿಸುವ ಗುಣಮಟ್ಟದ ಸೇವೆ ಇಲ್ಲಿ ಲಭ್ಯ-ಡಾ.ಶರಣಪ್ರಕಾಶ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.21-ಕಲ್ಯಾಣ ಕರ್ನಾಟಕ ಭಾಗದ ಕೇಂದ್ರವಾದ ಕಲಬುರಗಿಯಲ್ಲಿ ಕೆ.ಕೆ.ಆರ್.ಡಿ.ಬಿ.ಯ 302 ಕೋಟಿ ರೂ. ಸೇರಿ ಒಟ್ಟಾರೆ 327.17 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗಿರುವ 371 ಹಾಸಿಗೆ ಸಾಮರ್ಥ್ಯದ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯ ಕಲಬುರಗಿ ಶಾಖಾ ಆಸ್ಪತ್ರೆ ಇದೇ ಡಿಸೆಂಬರ್ 22 ರಂದು ಲೋಕಾರ್ಪಣೆ ಮಾಡಲಾಗುತ್ತಿದ್ದು,ಕಾರ್ಪೊರೇಟ್ ಆಸ್ಪತ್ರೆ ಮೀರಿಸುವ ಗುಣಮಟ್ಟದ ಸೇವೆ ಇಲ್ಲಿ ಸಾರ್ವಜನಿಕರಿಗೆ ಲಭ್ಯವಾಗಲಿದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ಶುಕ್ರವಾರ ನೂತನ ಜಯದೇವ ಆಸ್ಪತ್ರೆಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಪ್ರದೇಶದ ಸಚಿವರು-ಶಾಸಕರು ಅಗಮಿಸಲಿದ್ದು, ಅಂದಾಜು 2,500 ಜನರಿಗೆ ಆಸನದ ವ್ಯವಸ್ಥೆ ಮಾಡಲಾಗಿದೆ ಎಂದರು. ನೂತನ ಆಸ್ಪತ್ರೆಯ ಸಾಮರ್ಥ್ಯಕ್ಕೆ ತಕ್ಕಂತೆ ಈಗಿರುವ 10 ಹೃದ್ರೋಗ ವೈದ್ಯರ ಜೊತೆಗೆ ಹೆಚ್ಚುವರಿಯಾಗಿ 21 ವೈದ್ಯರು, 120 ಸ್ಟಾಫ್ ನರ್ಸ್ ಸೇರಿದಂತೆ ಇತರೆ ಸಿಬ್ಬಂದಿಗಳ ನೇಮಕಾತಿಗೆ ಹಣಕಾಸು ಇಲಾಖೆ ಒಪ್ಪಿಗೆ ನೀಡಿದ್ದು, ಅದರಂತೆ ನೇಮಕಾತಿ ಪ್ರಕ್ರಿಯೆ ನಡೆಯಲಿದೆ ಎಂದರು. ನೂತನ ಜಯದೇವ ಆಸ್ಪತ್ರೆಯಲ್ಲಿ 3 ಕ್ಯಾತಲ್ಯಾಬ್,ಮೂರು ಅಪರೇಷನ್ ಥಿಯೇಟರ್, ಒಂದು ಹೈಬ್ರಿಡ್ ಓ.ಟಿ. ಇರಲಿದೆ. ಎಕ್ಸ್ರೇ, ಇ.ಎಂ.ಆರ್.ಐ., ಬ್ಲಡ್ ಬ್ಯಾಂಕ್ ಸೇವೆ ಲಭ್ಯವಿರಲಿದೆ. 105 ಐ.ಸಿ.ಸಿ.ಯು ಬೆಡ್, 120 ಜನರಲ್ ಬೆಡ್ ಸೇರಿದಂತೆ ಒಟ್ಟಾರೆ 371 ಹಾಸಿಗೆ ಸಾಮರ್ಥ್ಯ ಇದ್ದು, ಅತ್ಯಾಧುನಿಕ ಸೌಲಭ್ಯದೊಂದಿಗೆ ಬಿ.ಪಿ.ಎಲ್ ರೋಗಿಗಳಿಗೆ ಉಚಿತ ಮತ್ತು ಎ.ಪಿ.ಎಲ್. ರೋಗಿಗಳಿಗೆ ಶೇ.30ರ ರಿಯಾಯಿತಿ ದರದೊಂದಿಗೆ ಚಿಕಿತ್ಸೆ ಇಲ್ಲಿ ಸಿಗಲಿದೆ ಎಂದರು.

ಬೆಂಗಳೂರು,ಮೈಸೂರು ಬಿಟ್ಟರೆ ರಾಜ್ಯದಲ್ಲಿ ಮೂರನೇ ಸ್ವಂತ ಕಟ್ಟಡ ಕಲಬುರಗಿಯಲ್ಲಿ ಆಸ್ಪತ್ರೆ ಹೊಂದಲಿದ್ದು,ಬೆಂಗಳೂರು ಬಿಟ್ಟರೆ ಕಲಬುರಗಿ ಶಾಖಾ ಆಸ್ಪತ್ರೆಯಲ್ಲಿ ವಸ್ಕುಲರ್ ಸರ್ಜರಿ ಸೇವೆ ಸಹ ನೀಡಲು ಉದ್ದೇಶಿಸಲಾಗಿದೆ. ಇದು ಕಲ್ಯಾಣ ಕರ್ನಾಟಕ ಭಾಗದಲ್ಲಿಯೆ ಮೊದಲನೇಯದಾಗಲಿದೆ ಎಂದ ಅವರು ನೂತನ ಆಸ್ಪತ್ರೆಯಲ್ಲಿ ನೀರಿನ ಕೊರತೆ ಎದುರಾಗದಂತೆ 7 ಲಕ್ಷ ಲೀ. ನೀರು ಸಾಮರ್ಥ್ಯ ಟ್ಯಾಂಕ್ ಸ್ಥಾಪಿಸಿದ್ದು, 11ಕೆ.ವಿ. ವಿದ್ಯುತ್ ಕೇಂದ್ರವನ್ನು 33ಕೆ.ವಿ.ಗೆ ಮೇಲ್ದರ್ಜೆಗೇರಿಸಲಾಗಿದೆ ಎಂದರು.

3 ತಿಂಗಳಲ್ಲಿ ಸೂಪರ್ ಸ್ಪೆಷಾಲಿಟ್ಟಿ ಆಸ್ಪತ್ರೆ ಲಭ್ಯ: ಜಯದೇವ ಆಸ್ಪತ್ರೆ ಉದ್ಘಾಟನೆ ನಂತರ ಮುಂದಿನ ಮೂರು ತಿಂಗಳಲ್ಲಿ ಜಿಮ್ಸ್ ಆಸ್ಪತ್ರೆಯಲ್ಲಿ ನಿರ್ಮಾಣವಾಗುತ್ತಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟಿಸಿ ಸಾರ್ವಜನಿಕರ ಸೇವೆಗೆ ಲಭ್ಯಗೊಳಿಸುವುದು ತಮ್ಮ ಮುಂದಿನ ಗುರಿ ಎಂದ ಅವರು, ಹಳೇ ಜಿಲ್ಲಾ ಆಸ್ಪತ್ರೆ ಕಡೆವಿ ಅಲ್ಲಿ 100 ಹಾಸಿಗೆಯ ತಾಯಿ-ಮಕ್ಕಳ ಆಸ್ಪತ್ರೆ ನಿರ್ಮಸಲಾಗುವುದು. ಜಿಮ್ಸ್ ಆವರಣದಲ್ಲಿಯೇ 50 ಹಾಸಿಗೆಯ ಕ್ರಿಟಿಕಲ್ ಕೇರ್ ಯೂನಿಟ್, ಸುಟ್ಟು ಗಾಯಗಳ ಘಟಕ ಸ್ಥಾಪಿಸಲಾಗುತ್ತಿದೆ. ಇದಲ್ಲದೆ ಗುಲಬರ್ಗಾ ವಿ.ವಿ.ಯಲ್ಲಿ 10 ಎಕರೆ ಜಮೀನಿನಲ್ಲಿ ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆಯನ್ನು ನಿರ್ಮಿಸಲಾಗುವುದು ಎಂದು ಡಾ.ಶರಣಪ್ರಕಾಶ ಪಾಟೀಲ ವಿವರಿಸಿದರು. ಜಯದೇವ ಆಸ್ಪತ್ರೆಯಿಂದ 5.75 ಲಕ್ಷ ಓ.ಪಿ.ಡಿ. ಸೇವೆ: ಹಿಂದೆ 2016ರಲ್ಲಿ ನಮ್ಮ ಸರ್ಕಾರದ ಅವಧಿಯಲ್ಲಿಯೇ ಇಲ್ಲಿನ ಜಿಮ್ಸ್ ಆಸ್ಪತ್ರೆಯಲ್ಲಿ ಜಯದೇವ ಆಸ್ಪತ್ರೆ ತಾತ್ಕಲಿಕ ಆರಂಭಿಸಲಾಗಿತ್ತು. ಕಳೆದ 8 ವರ್ಷಗಳ ಅವಧಿಯಲ್ಲಿ ಈ ಆಸ್ಪತ್ರೆಯಿಂದ 5.75 ಲಕ್ಷ ಜನ ಮತ್ತು 18,550 ಮಕ್ಕಳು ಓ.ಪಿ.ಡಿ. ಸೇವೆ ಪಡೆದಿದ್ದಾರೆ. 47,500 ಜನ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದು, 39,462 ಜನ ಕ್ಯಾತ್‌ಲ್ಯಾಬ್ ಸೇವೆಗೆ ಒಳಗಾಗಿದ್ದಾರೆ. 25,000 ಜನ ಎನ್ಜಿಯೋಗ್ರಾಮ್ ಮಾಡಿಸಿದ್ದು, 13,000 ಎನ್ಜಿಯೋಪ್ಲಾಸ್ಟಿಸ್, 300 ಜನ ಪೇಸ್ ಮೇಕರ್ ಹಾಕಿಕೊಂಡಿದ್ದು, 1,300 ಜನ ಓಪನ್ ಹಾರ್ಟ್ ಸರ್ಜರಿಗೆ ಒಳಗಾಗಿದ್ದಾರೆ. 3.92 ಲಕ್ಷ ಜನ ಇ.ಸಿ.ಜಿ, 2.14 ಲಕ್ಷ ಜನ ಎಕೊಟೆಸ್ಟ್ ಮಾಡಿಸಿದ್ದು, 53,399 ಜನ ಎಕ್ಸ್ರೇ ಮಾಡಿಸಿಕೊಂಡಿದ್ದಾರೆ ಎಂದ ಅವರು, ಆಸ್ಪತ್ರೆ ಸ್ಥಾಪನೆಯಿಂದ ಇಲ್ಲಿನ ಜನರು ದೂರದ ಬೆಂಗಳೂರು, ಸೋಲಾಪೂರ ಹೋಗುವುದು ತಪ್ಪಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಶಾಸಕ ಎಂ.ವೈ.ಪಾಟೀಲ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್, ಡಿ.ಸಿ. ಬಿ.ಫೌಜಿಯಾ ತರನ್ನುಮ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ ಸಿ.ಇ.ಓ ಭಂವರ್ ಸಿಂಗ್ ಮೀನಾ,ಡಿ.ಸಿ.ಎಫ್ ಸುಮಿತ್ ಪಾಟೀಲ, ಸಹಾಯಕ ಆಯುಕ್ತೆ ಸಾಹಿತ್ಯ, ಮಹಾನಗರ ಪಾಲಿಕೆ ಪ್ರಭಾರಿ ಆಯುಕ್ತ ಅವಿನಾಶ ಶಿಂಧೆ, ಕೆ.ಕೆ.ಆರ್.ಟಿ.ಸಿ ಎಂ.ಡಿ. ಎಂ.ರಾಚಪ್ಪ, ಕಲಬುರಗಿಯ ಜಯದೇವ ಶಾಖಾ ಆಸ್ಪತ್ರೆಯ ಪ್ರಭಾರಿ ಅಧೀಕ್ಷಕ ಡಾ.ವಿರೇಶ ಪಾಟೀಲ, ಸಮನ್ವಯಾಧಿಕಾರಿ ಸಂತೋಷ್ ಇದ್ದರು. ನಂತರ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು ಲೋಕಾರ್ಪಣೆಗೆ ಸಿದ್ಧಗೊಂಡಿರುವ ಆಸ್ಪತ್ರೆಯ ವಿವಿಧ ವಿಭಾಗ, ವೇದಿಕೆ ಸ್ಥಳ ಪರಿಶೀಲಿಸಿ ಕಾಯಕ್ರಮ ಅಚ್ಚುಕಟ್ಟಾಗಿ ನಿರ್ವಹಣೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು.

# ಮಾಲಿ ಪಾಟೀಲ್ ಬಂಧುಗಳ ಮದುವೆ ಸಮಾರಂಭದಲ್ಲಿ 501ಸಸಿಗಳ ವಿತರಣೆ ಕಾರ್ಯ ಶ್ಲಾಘನೀಯ... ಚನ್ನಪ್ಪ ಕೆ ಹೊಸಹಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು: ಪಟ್ಟಣದ ಸಾಯಿ ಮಂದಿರದಲ್ಲಿ ಹುಲಿಗುಡ್ಡ ಗ್ರಾಮದ ಪರಿಸರ ಪ್ರೇಮಿಗಳಾದ ಗಣೇಶ ಮಾಲಿ ಪಾಟೀಲ್ ಅವರ ಮದುವೆ ಸಮಾರಂಭದಲ್ಲಿ ಮಾಲಿ ಪಾಟೀಲ್ ಬಂಧುಗಳ ಮತ್ತು ವನಸಿರಿ ಫೌಂಡೇಶನ್ ತಾಲೂಕು ಘಟಕ ಲಿಂಗಸಗೂರು ಸಹಯೋಗದೊಂದಿಗೆ "ಮದುವೆ ಮಂಟಪದಲ್ಲಿ ಪರಿಸರ ಜಾಗೃತಿ"ಎಂಬ ದ್ಯೇಯ ವಾಕ್ಯದೊಂದಿಗೆ 501 ಉಚಿತ ಸಸಿ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮ ತುಂಬಾ ಅರ್ಥಪೂರ್ಣವಾಗಿ ಜರಗಿತು. ಈ ಸಂಧರ್ಭದಲ್ಲಿ ಕುಟುಂಬದ ವತಿಯಿಂದ ವಿವಿಧ ತಳಿಗಳ 501 ಸಸಿಗಳನ್ನು ವಿತರಿಸಲಾಯಿತು. ವೇದಿಕೆಯ ಮೇಲೆ ನೂತನ ವಧುವರರಿಗೂ ಸಸಿಗಳನ್ನು ಕೊಡುವುದರ ಮೂಲಕ ಶುಭ ಹಾರೈಸಲಾಯಿತು.

ಮದುವೆಗೆ ಆಗಮಿಸಿದ ಬಂಧುಗಳು ತುಂಬಾ ಆಸಕ್ತಿ ವಹಿಸಿ ವಿವಿಧ ತಳಿಗಳ ಸಸಿಗಳ ಬಗ್ಗೆ ಮಾಹಿತಿ ತಿಳಿದುಕೊಂಡರು ಮತ್ತು ಕೊಂಡೊಯ್ದರು. ಇದೇ ವೇಳೆ ವನಸಿರಿ ಫೌಂಡೇಶನ್ ವತಿಯಿಂದ ಸಸಿಗಳ ವಿತರಣೆ-ಯ ಜೊತೆಗೆ ನೋಂದಣಿ ಕಾರ್ಯ ಕೂಡ ಯಶಸ್ವಿಯಾಗಿ ಜರುಗಿತು. ಕಾರ್ಯಕ್ರಮದ ನೇತೃತ್ವದವಹಿಸಿದ ವನಸಿರಿ ಜಾಲತಾಣದ ಅಧ್ಯಕ್ಷರಾದ ಚನ್ನಪ್ಪ ಕೆ ಹೊಸಹಳ್ಳಿ ಅವರು ಮಾತನಾಡಿ ಮಾಲಿ ಪಾಟೀಲ್ ಬಂಧುಗಳು ಮದುವೆ ಸಮಾರಂಭದಲ್ಲಿ "ಮದುವೆ ಮಂಟಪದಲ್ಲಿ ಪರಿಸರ ಜಾಗೃತಿ"ಎಂಬ ದ್ಯೇಯ ವಾಕ್ಯದೋದಿಗೆ 501 ಸಸಿಗಳ ಉಚಿತ ವಿತರಣೆ ಕಾರ್ಯಕ್ರಮ ಹಮ್ಮಿಕೊಡಿರುವುದು ತುಂಬಾ ಶ್ಲಾಘನೀಯ. ಈ ಪರಿಸರ ಜಾಗೃತಿ ಕಾರ್ಯಕ್ರಮ ಜನರಲ್ಲಿ ಪರಿಸರ ಸಂರಕ್ಷಣೆಯ ಅರಿವು ಮೂಡಿಸಲು,ಮನೆಯ ಆವರಣದಲ್ಲಿ ಅಂದವಾದ ಕೈತೋಟ ನಿರ್ಮಾಣ ಮಾಡಲು,ಶೋ ಪ್ಲಾಂಟ್, ಇನ್ನಿತರ ಹೂಗಳ ಸಸಿಗಳ ಬಗ್ಗೆ ಅರಿವನ್ನ ಮೂಡಿಸುವುದರ ಜೊತೆಗೆ ಸಸ್ಯ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಲು ನಮಗೆ ಅನುಕೂಲ ಆಯಿತು. ಪ್ರತಿಯೊಂದು ಕಾರ್ಯಕ್ರಮದಲ್ಲಿ ನಮ್ಮ ವನಸಿರಿ ಪೌಂಡೇಶನ್ ಇನ್ನೊಬ್ಬರಿಗೆ ಮಾರ್ಗದರ್ಶನವಾಗಲೆಂದು ಇಂತಹ ಕಾರ್ಯಗಳನ್ನು ಮಾಡುತ್ತಾ ಬಂದಿದ್ದೇವೆ ಇಂದು ಈ ಕಾರ್ಯ ತುಂಬಾ ಅದ್ಭುತವಾಗಿ ನೆರವೇರಿತು. ಇದೀರೀತಿ ನಮ್ಮ ಮುಂದಿನ ಪಳಿಗೆಗೆ ಪರಿಸರ ಉಳಿಸುವ ನಿಟ್ಟಿನಲ್ಲಿ ಬರುವಂತಹ ನೂತನ ವಧು ವರರು ಇಂತಹ ಮಾದರಿಯಾದ ಪರಿಸರ ಕಾರ್ಯಕ್ರಮವನ್ನು ತಮ್ಮ ಮದುವೆ ಮಂಟಪದಲ್ಲಿ ಹಮ್ಮಿಕೊಳ್ಳುವುದರ ಜೊತೆಗೆ ಸಪ್ತಪದಿ ತುಳಿಯಬೇಕೆಂಬುದೇ ನಮ್ಮ ವನಸಿರಿಯ ಆಶಯ. ಕಾರ್ಯಕ್ರಮದ ಯಶಸ್ವಿಗೆ ಕಾರಣರಾದ ಮಾಲಿ ಪಾಟೀಲ್ ಕುಟುಂಬಕ್ಕೆ ಮತ್ತು ಇದಕ್ಕೆ ಸಹಕರಿಸಿದ ಕುಟುಂಬದ ವರ್ಗದವರು,ವಕೀಲರ ಸಂಘದ ಪದಾಧಿಕಾರಿಗಳಿಗೆ,ಸ್ನೇಹಿತರಿಗೆ ನಮ್ಮ ವನಸಿರಿ ಪೌಂಡೇಷನ್ ವತಿಯಿಂದ ಹೃತ್ಪೂರ್ವಕ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಸ್ಕಿ ತಾಲೂಕ ಅಧ್ಯಕ್ಷರಾದ ರಾಜು ಬಳಗನೂರ,ವನಸಿರಿ ಪೌಂಡೇಷನ್ ದತ್ತು ಪುತ್ರ ಮುದಿಯಪ್ಪ ಹೊಸಳ್ಳಿ ಕ್ಯಾಂಪ್,ವನಸಿರಿ ಪೌಂಡೇಷನ್ ಒಡನಾಡಿ ಪರಿಸರ ಪ್ರೇಮಿ ಹುಸೇನ್ ಸಾಬ್ ಲಿಂಗಸೂರು,ವನಸಿರಿ ಪೌಂಡೇಷನ್ ಮಾರ್ಗದರ್ಶಕರಾದ ಸುರೇಶ ಕುಲಕರ್ಣಿ ಲಿಂಗಸೂರು, ಪರಿಸರ ಪ್ರೇಮಿ ತೋಷಿಪ್ ಪಾಷಾ ಮುದುಗಲ್ಲು,ಶಿವಾನಂದ ಹುಲಿಗುಡ್ಡ,ಹನುಮಗೌಡ ನಾಯಕ, ವೀರೇಶ ಹುಲಿಗುಡ್ಡ,ಕುಟುಂಬ ವರ್ಗದವರು,ವಕೀಲರ ಸಂಘದ ಸದಸ್ಯರು,ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಡಿಸೆಂಬರ್ 26 ಕುಂದು ಕೊರತೆ ಅಹ್ವಾಲು ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಡಿ.21-ಕಲಬುರಗಿ ಜಿಲ್ಲೆಯ ಯಡ್ರಾಮಿ ತಾಲ್ಲೂಕಿನ ತಹಶೀಲ್ ಕಾರ್ಯಾಲಯದಲ್ಲಿ ಡಿಸೆಂಬರ್ 26 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ. 1.30 ಗಂಟೆಯವರೆಗೆ ಭ್ರಷ್ಟಚಾರ ಮತ್ತು ಸರ್ಕಾರಿ ಕಛೇರಿಗಳಲ್ಲಿ ಕುಂದುಕೊರತೆಗಳ ಬಗ್ಗೆ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಕಲಬುರಗಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಾರ್ವಜನಿಕರಿಗೆ ಸರ್ಕಾರಿ ಕಚೇರಿಗಳಲ್ಲಿ ಕೆಲಸಗಳನ್ನು ವಿಳಂಬ ಮಾಡುತ್ತಿದ್ದರೆ ಕಾರಣ ಇಲ್ಲದೇ ಅರ್ಜಿ ತಿರಸ್ಕರಿಸುತ್ತಿದ್ದರೆ ಅಥವಾ ಕಛೇರಿಗೆ ಅಲೆದಾಡಿಸುತ್ತಿದ್ದರೆ ಅಲ್ಲದೆ, ಸರ್ಕಾರಿ ಕಚೇರಿಗಳಲ್ಲಿ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದರೆ ನಮ್ಮ ಗಮನಕ್ಕೆ ತರಲು ತಿಳಿಸಿದ್ದಾರೆ.

ಅಹವಾಲು ಸ್ವೀಕರಿಸುವ ಅಧಿಕಾರಿ ಕಲಬುರಗಿ ಕರ್ನಾಟಕ ಲೋಕ ಡಿಎಸ್.ಪಿ ಅಧಿಕಾರಿ ಶ್ರೀಮತಿ ಗೀತಾ ಟಿ. ಬೇನಹಾಳ, ಮೊಬೈಲ್ ಸಂ.9364062569, ಪೋಲಿಸ್ ನಿರೀಕ್ಷಕರು ಅರುಣ ಮರಗುಂಡಿ, ಮೊಬೈಲ್ ಸಂ: 9364062669. ಇರುತ್ತದೆ.

# ಅರೆಕಾಲಿಕ ಯೋಗ ತರಬೇತಿದಾರರ ಹುದ್ದೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.20 ಜಿಲ್ಲಾ ಆಯುಷ್ ಕಛೇರಿ ಕಲಬುರಗಿ ಅಧೀನದಲ್ಲಿ ಬರುವ ಆಯುಷ್ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ತಾತ್ಕಾಲಿಕವಾಗಿ ಅರೆಕಾಲಿಕ ಯೋಗ ತರಬೇತಿದಾರರ ಸೇವೆಯನ್ನು ಪಡೆಯಲು 11 ತಿಂಗಳ ಅವಧಿಗಾಗಿ ಡಿಸೆಂಬರ್ 31 ರ ಒಳಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಆಯುಷ್ ಕಚೇರಿ ಅಧಿಕಾರಿಗಳು ತಿಳಿಸಿದ್ದಾರೆ.

ಹುದ್ದೆಯ ಹೆಸರು, ಅರೆಕಾಲಿಕ ಯೋಗ ತರಬೇತುದಾರರ 01, ಅರೆ ಕಾಲಿಕಾ ಸೇವೆ ಸಲ್ಲಿಸುವ ಸ್ಥಳಗಳು: ಆಯುಷ್ಮಾನ್ ಆರೋಗ್ಯ ಮಂದಿರ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ಕಲಬುರಗಿ ಜಿಲ್ಲೆಯ ರಾಜಾಪೂರ, (ಜಯನಗರ) ಅಫಜಲಪೂರ ತಾಲೂಕ ಬಳೂರ್ಗಿ ಗ್ರಾಮ, ಕಲಬುರಗಿ ಜಿಲ್ಲೆ ಸಣ್ಣೂರ, ಚಿಂಚೋಳಿ ತಾಲೂಕ ಸಲಗರಬಸಂತಪೂರ, ಆಳಂದ ತಾಲೂಕ ಮಾಡಿಯಾಳ, ಗ್ರಾಮಗಳಲ್ಲಿ ಆರೋಗ್ಯ ತರಬೇತಿ ಸೇವೆ ಕೇಂದ್ರಗಳು ಆರಂಭವಾಗಿದೆ.

**ಅರೆಕಾಲಿಕಯೋಗತರಬೇತುದಾರರ 01:-ಅರೆಕಾಲಿಕಾ ಸೇವೆ ಸಲ್ಲಿಸುವ ಸ್ಥಳಗಳು:**

ಅರೆಕಾಲಿಕ ಯೋಗ ತರಬೇತುದಾರರು:- 02, ಅಲ್ಪ ಕಾಲಿಕಾ ಸೇವೆ ಸಲ್ಲಿಸುವ ಸ್ಥಳಗಳು ಆಯುಷ್ಮಾನ ಆರೋಗ್ಯ ಮಂದಿರ ಆಯುಷ್, ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ರೇವೆಗಿ ತಾ: ಕಾಳಗಿ, ಮಾಡಿಯಾಳ ತಾ: ಆಳಂದ, ತಾ: ಸೇಡಂ, ಹಂದರಗಿ

ವಿದ್ಯಾರ್ಹತೆ 10+02 ಮತ್ತು ಯೋಗ ತರಬೇತಿ ಪಡೆದ ಸಂಸ್ಥೆಯಿಂದ ಪ್ರಮಾಣಪತ್ರ ಹೊಂದಿರಬೇಕು ವಯೊಮಿತಿ 21 ರಿಂದ 60 ವರ್ಷದೊಳಗಿರಬೇಕು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆಯುಷ್ ಕಚೇರಿ ಹತ್ತಿರ ಕಂಪೌಂಡ್ ಗಾಜಿಪೂರ ಕಲಬುರಗಿ ದೂರವಾಣಿ ಸಂಖ್ಯೆ 08472-224314 ಕಛೇರಿ ಜಿಲ್ಲಾ ಆಯುಷ್ ಅಧಿಕಾರಿಗಳು, ಜಿಲ್ಲಾ ಆಯುಷ್ ಕಚೇರಿ ಕಲಬುರಗಿ ಜಿಲ್ಲಾ ಆಯುಷ್ ಕಚೇರಿ ಸಮಯದಲ್ಲಿ ಸಂಪರ್ಕಿಸಲು ಕೋರಿದ್ದಾರೆ.

ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತದ

# ನೂತನ ವರ್ಷ 2025ನೇ ಸಾಲಿನ ದಿನಚರಿ ಬಿಡುಗಡೆ.




ಮಲ್ಲಮ್ಮ ನುಡಿ ವಾರ್ತೆ

ಬೀದರ: ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತದ ಆವರಣದಲ್ಲಿ ಶ್ರೀ.ಶ್ರೀ.ಎನ್.ವ್ಹಿ.ರಡ್ಡಿ ಗುರುಜಿ ಮಂತ್ರ ಮರ್ಹಷಿಗಳು ಹಾಗೂ ಆಧ್ಯಾತ್ಮಿಕ ಗುರುಗಳು ಇವರ ಅಮೃತ ಹಸ್ತದಿಂದ ನೂತನ ವರ್ಷ 2025ನೇ ಸಾಲಿನ ದಿನಚರಿ(ಕ್ಯಾಲಿಂಡರ) ಬಿಡುಗಡೆ ಶನಿವಾರ ಬೆಳಿಗ್ಗೆ 10:30 ಗಂಟೆಗೆ ಮಾಡಲಾಯಿತು. ಸಹಕಾರಿಯು ಕಳೆದ 24 ವರ್ಷದಿಂದ ಸದಸ್ಯರ ಸಾಮಾಜಿಕ ಹಾಗೂ ಆರ್ಥಿಕ ಶೈಕ್ಷಣಿಕ ಏಳಿಗೆಗಾಗಿ ಸಾಮಾಜ ಮುಖಿಯಾಗಿ ಸೇವೆ ಸಲ್ಲಿಸುತ್ತಿರುವುದು ಶ್ಲಾಘನಿಯವಾಗಿದೆ ಎಂದು ಹೇಳಿದರು ಹಾಗೆಯೆ ಸಹಕಾರಿಯು ಇನ್ನೂ ಎತ್ತರಕ್ಕೆ ಬೆಳೆಯಲೆಂದು ಹಾರೈಸಿದರು. ಈ ಸಂದರ್ಭದಲ್ಲಿ ಸಹಕಾರಿಯ ಅಧ್ಯಕ್ಷರಾದ ಗುರುನಾಥ ಜಾಂತಿಕರ ಅವರು ಅಧ್ಯಕ್ಷ ಸ್ಥಾನ ವಹಿಸಿ ಮಾತನಾಡುತ್ತ ಸಹಕಾರಿಯು ಕಳೆದ 10 ವರ್ಷಗಳಿಂದ ಜನರಿಗೆ ಉಪಯುಕ್ತವಾದ ದಿನಚರಿಯನ್ನು ಮುದ್ರಿಸಿ ಸದಸ್ಯರಿಗೂ ಹಾಗೂ ಜನರಿಗೆ ನೀಡುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಆಡಳಿತ ಮಂಡಳಿ ಸದಸ್ಯರಾದ ಶ್ರೀ ಸುರೇಶ ಔರಾದಕರ್, ಶ್ರೀ ರಾಜಶೇಖರ ಹೊಸಳ್ಳಿ, ಶ್ರೀ ರಾಜು ಬೇಮಳಖೇಡಕರ ಹಾಗೂ ಶ್ರೀಮತಿ ಪದ್ಮಜಾ ಪೋದ್ದಾರ್ ಸದಸ್ಯರಾದ ಶಿವರಾಜ ಹುಡೇದ ಮತ್ತು ಸುನೀಲಕುಮಾರ ಅಗ್ರವಾಲ್, ಶ್ರೀ ಸಂಜುಕುಮಾರ ಸಜ್ಜನ್ ಹಾಗೂ ಮುಖ್ಯಕಾರ್ಯನಿರ್ವಾಹಣಾಧಿಕಾರಿ ಶಿವರಾಜ ಹೂಗಾರ, ಸಿಬಂದಿಗಳಾದ ಅನೀಲಕುಮಾರ ಕೊಡಂಬಲ್, ಶಿವಾನಂದ ಬಸವಣ್ಣನೋರ, ಸಂಜುಕುಮಾರ, ಶ್ರೀಕಾಂತ, ದೇವಿ ಉಪಸ್ಥಿತರಿದರು.

ಜಯದೇವ ಆಸ್ಪತ್ರೆ ಲೋಕಾರ್ಪಣೆಗೆ ಸಿ.ಎಂ.ಆಗಮನ ಹಿನ್ನೆಲೆ:

# ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.21-ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ರಾಜ್ಯ ಸಭೆ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಅವರು ಇದೇ ಡಿ.22 ರಂದು ಕಲಬುರಗಿಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ 371 ಹಾಸಿಗೆ ಸಾಮರ್ಥ್ಯದ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯ ಕಲಬುರಗಿ ಶಾಖಾ ಆಸ್ಪತ್ರೆ ಉದ್ಘಾಟನೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಶುಕ್ರವಾರ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದರು.

ಜಯದೇವ ಆಸ್ಪತ್ರೆ ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ 7 ಜಿಲ್ಲೆಯ ಸಚಿವರು, ಶಾಸಕರು ಹಾಗೂ ಇನ್ನಿತರ ಜನಪ್ರತಿನಿಧಿಗಳು ಭಾಗವಹಿಸಲಿದ್ದು, ಎಲ್ಲಿಯೂ ಲೋಪವಾಗದಂತೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕೆಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶಿಷ್ಟಾಚಾರದಂತೆ ಎಲ್ಲಾ ಜನಪ್ರತಿನಿಧಿಗಳಿಗೆ ಆಮಂತ್ರಣ ಪತ್ರಿಕೆ ತಲುಪಿಸಬೇಕು. ಸೂಕ್ತ ಪೊಲೀಸ್ ಭದ್ರತೆ ವ್ಯವಸ್ಥೆ ಕಲ್ಪಿಸಬೇಕು. ಸಂಚಾರಿ ವ್ಯವಸ್ಥೆ ನಿರ್ವಹಣೆ, ಸಾರ್ವಜನಿಕರಿಗೆ ಊಟ, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕೆಂದ ಅವರು ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಶಿಷ್ಟಾಚಾರದಂತೆ ಅಂಬುಲೆನ್ಸ್, ಅಗ್ನಿಶಾಮಕ ವಾಹನ ಕಾರ್ಯಕ್ರಮ ವೇದಿಕೆ ಸ್ಥಳದಲ್ಲಿ ತೈನಾತಿಸಬೇಕು ಎಂದರು.

ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ವೇದಿಕೆ ಕಾರ್ಯಕ್ರಮ ನೂತನ ಆಸ್ಪತ್ರೆಯ ಆವರಣದಲ್ಲಿ ನಡೆಯಲಿರುವುದರಿಂದ ಆಸ್ಪತ್ರೆಯನ್ನು ವಿದ್ಯುತ್ ದೀಪಾಲಂಕಾರದಿಂದ ಸಿಂಗರಿಸಬೇಕು. ಕಾರ್ಯಕ್ರಮದ ಮಿನಿಟ್ ಟು ಮಿನಿಟ್ ಪಟ್ಟಿ ಸಿದ್ಧಪಡಿಸಬೇಕು. ಪ್ರದೇಶದ ಜಿಲ್ಲೆಗಳಿಂದ ಸಚಿವರು-ಶಾಸಕರು ಬರುವುದರಿಂದ ಸರಿಯಾದ ರೀತಿಯಲ್ಲಿ ಆತಿಥ್ಯ ವಹಿಸಿ ಎಂದರು.

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಕಾರ್ಯಕ್ರಮ ಯಶಸ್ಸಿಗೆ ಅಧಿಕಾರಿಗಳನ್ನೊಳಗೊಂಡಂತೆ ಈಗಾಗಲೆ ಒಂಭತ್ತು ಸಮಿತಿ ರಚಿಸಿದ್ದು, ಎಲ್ಲಾ ಪೂರ್ವಸಿದ್ಧತೆ ಕೈಗೊಳ್ಳಲಾಗಿದೆ ಎಂದು ಸಚಿವರ ಗಮನಕ್ಕೆ ತಂದಿದ್ದಲ್ಲದೆ ಇದೂವರೆಗಿನ ಪ್ರಗತಿ ವಿವರವನ್ನು ಸಭೆ ಮುಂದಿಟ್ಟರು.

ಸಭೆಯಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ ಸಿ.ಇ.ಓ ಭಂವರ್ ಸಿಂಗ್ ಮೀನಾ,ಡಿ.ಸಿ.ಎಫ್ ಸುಮಿತ್ ಪಾಟೀಲ, ಸಹಾಯಕ ಆಯುಕ್ತೆ ಸಾಹಿತ್ಯ, ಮಹಾನಗರ ಪಾಲಿಕೆ ಪ್ರಭಾರಿ ಆಯುಕ್ತ ಅವಿನಾಶ ಶಿಂಧೆ, ಕೆ.ಕೆ.ಆರ್.ಟಿ.ಸಿ ಎಂ.ಡಿ. ಎಂ.ರಾಚಪ್ಪ, ಕಲಬುರಗಿಯ ಜಯದೇವ ಶಾಖಾ ಆಸ್ಪತ್ರೆಯ ಪ್ರಭಾರಿ ಅಧೀಕ್ಷಕ ಡಾ.ವಿರೇಶ ಪಾಟೀಲ, ಸಮನ್ವಯಾಧಿಕಾರಿ ಸಂತೋಷ್ ಇದ್ದರು.

# ಗಾಂಧಿ ಗ್ರಾಮ ಪ್ರಶಸ್ತಿ ಪುರಸ್ಕೃತ ಗುಡಪಳ್ಳಿ, ದುಪ್ಪತ ಮಹಾಗಾಂವ ಗ್ರಾ.ಪಗೆ ಬಿಹಾರ್ ಪಂಚಾಯತ್ ರಾಜ್ ಅಧಿಕಾರಿಗಳ ತಂಡ ಭೇಟಿ



(ಶಿವುಕುಮಾರ ಬಿರಾದಾರ)

ಮಲ್ಲಮ್ಮ ನುಡಿ ವಾರ್ತೆ

ಔರಾದ:-2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕೃತ ಗುಡಪಳ್ಳಿ ಹಾಗೂ ದುಪ್ಪತ ಮಹಾಗಾಂವ ಮಾದರಿ ಗ್ರಾಮ ಪಂಚಾಯತಿಗೆ ಬಿಹಾರದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ತಂಡ ಗುರುವಾರ ಭೇಟಿ ನೀಡಿತು. ಈ ಸಂದರ್ಭದಲ್ಲಿ ಅಧಿಕಾರಿಗಳ ತಂಡವು ಈ ಎರಡು ಗ್ರಾಮ ಪಂಚಾಯತಿಗಳ ಆಡಳಿತ ವ್ಯವಸ್ಥೆ, ಸಿಸಿ ಟಿವಿ ಅಳವಡಿಕೆ, ಗಾರ್ಡನ್ ನಿರ್ಮಾಣ, ಅಂಕವೀಕಲಿಗಾಗಿ ವೀಲ್ ಚೇರ್ ವ್ಯವಸ್ಥೆ, ಪ್ರೋಜೆಕ್ಟರ್, ವೈಫೈ ಅಳವಿಡಿಕೆ, ಕರ್ನಾಟಕ ಒನ್ ಸೇವೆ ಸೇರಿದಂತೆ ಗ್ರಾಮ ಪಂಚಾಯತಿ ವತಿಯಿಂದ ಒದಗಿಸಿದ ವಿವಿಧ ಮೂಲಭೂತ ಸೌಕರ್ಯವನ್ನು ವಿಕ್ಷಿಸಿ ಮಾಹಿತಿ ಪಡೆಯಿತು. ಔರಾದ ತಾಲ್ಲೂಕಾ ಪಂಚಾಯತ್ ಕಾರ್ಯನಿರ್ವಾಹ ಅಧಿಕಾರಿ ಮಾಣಿಕರಾವ ಪಾಟೀಲ್ ಮಾನತಾಡಿ ನರೇಗಾ ಯೋಜನೆಯಡಿ ಸುಸರ್ಜಿತ ಮಿನಿ ಸ್ಟೇಡಿಯಂ ನಿರ್ಮಿಸಲಾಗಿದ್ದು ಅಲ್ಲಿ ವಾಲಿಬಾಲ್, ಬಾಸ್ಕಿಟ್ ಬಾಲ್ ಕೋಟ್ ಅಳವಡಿಸಲಾಗಿದೆ. ಅಂಗನವಾಡಿಗಳಲ್ಲಿ ಅಡಿಗೆ ಮಾಡುವ ಸ್ಥಳಗಳಲ್ಲಿ ಸುಚಿತ್ವ ಕಾಪಾಡಲಾಗಿದೆ ಎಂದು ಮಾಹಿತಿ ನೀಡಿದರು. ಕಮಲನಗರ ತಾಲ್ಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಶಿವಕುಮಾರ ಘಾಂಟೆ ಮಾತನಾಡಿ, ಔರಾದ ಅತಿ ಹಿಂದುಳಿದ ಜಿಲ್ಲೆಯಾಗಿದ್ದು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಒಳ್ಳೆ ಕೆಲಸದ ಮನೋಭಾವದಿಂದ ಈ ಎರಡು ಗ್ರಾಮ ಪಂಚಾಯತಿಗಳು ಅಭಿವೃದ್ಧಿಯಾಗಿದ್ದು, ಈ ಗ್ರಾಮ ಪಂಚಾಯತಿ ಕಾರ್ಯ-ಕ್ಕೆ ಪ್ರಧಾನಮಂತ್ರಿ ಹಾಗೂ ಮುಖ್ಯಮಂತ್ರಿಗಳು ಶ್ಲಾಘಿಸಿದ್ದಾರೆ ಇಲ್ಲಿ ನಿರ್ಮಿಸಲಾದ ಅಮೃತ್ ಸರೋವರದಿಂದ ಸುತ್ತಲಿನ ಎರಡು ಕಿಲೋ ಮೀಟರ್ ಪ್ರದೇಶದಲ್ಲಿ ಅಂತರ್ಜಲ ಮಂಟ ಸುಧಾರಣೆ ಕಂಡಿದ್ದು ಇದರಿಂದ ಗ್ರಾಮದ ಜನರಿಗೆ ಅನೂಕುಲವಾಗಿದೆ ಬಿಹಾರ ತಂಡದ ಅಧಿಕಾರಿಗಳಿಗೆ ಮಾಹಿತಿ ತಿಳಿಸಿದರು. ಅಡ್ಮಿನ್ ಮ್ಯಾನೆಂಜರ್ ಜಯಪ್ರಕಾಶ ಚೌವ್ಹಾಣ ಮಾತನಾಡಿ, ಎರಡು ಗ್ರಾಮ ಪಂಚಾಯತಿಯ ಎಲ್ಲಾ ಶಾಲೆಗಳಲ್ಲಿ ಆರ್.ಓ ಫಿಲ್ಟರ್ ವಾಟರ್ ಲಭ್ಯವಿದ್ದು, ಅಮೃತ್ ಸರೋವರ ಯೋಜನೆಯಡಿ ನಿರ್ಮಿಸಲಾದ ಕೆರೆಯ ಸುತ್ತಲು ಅಲಂಕಾರಿಕ ಗಿಡಗಳನ್ನು ಬೆಳೆಸಲಾಗಿದೆ ಮತ್ತು ಮಕ್ಕಳಿಗೆ ಆಟವಾಡಲು ಚಿಲ್ಡ್ರನ್ಸ್ ಪಾರ್ಕ್ ಇದೆ ಬೋಟ್ ವ್ಯವಸ್ಥೆ ಮಾಡಲಾಗಿದೆ. ಬಿಹಾರ ಪಂಚಾಯತ್ ರಾಜ್ ಇಲಾಖೆ ಬಿಪಿಆರ್‌ಓ ಸುಜೀತ್ ಕುಮಾರ ಮಾತನಾಡಿ, ದುಪ್ಪತ ಮಹಾಗಾಂವ, ಗುಡಪಳ್ಳಿ ಪಂಚಾಯತಿಗೆ ಭೇಟಿ ನೀಡಿದ್ದೇವೆ ಇಲ್ಲಿ ಸರೋವರವನ್ನು ಅಚ್ಚುಕಟ್ಟಾಗಿ ನಿರ್ಮಿಸಲಾಗಿದೆ. ನಾವು ಇಲ್ಲಿಗೆ ಬರುವ ಮುಂಚೆ ಇಲ್ಲಿನ ಫೋಟೋಗಳನ್ನು ನೋಡಿದ್ದೇವು ಆದರೆ ಫೋಟೊಗಿಂತಲು ಇಲ್ಲಿ ಚೆನ್ನಾಗಿ ಸರೋವರ ನಿರ್ಮಿಸಲಾಗಿದೆ. ಜಲ ಸಂರಕ್ಷಣೆ ಜೋತೆಗೆ ಪ್ರವಾಸಿ ತಾಣವಾಗಿಯು ಸಹ ಅಭಿವೃದ್ಧಿ ಇಲ್ಲಿ ರಾತ್ರಿಹೊತ್ತಿನಲ್ಲಿ ಜನರು ಸುತ್ತಾಡಲು ಅನುಕುಲ ಮಾಡಲಾಗಿದೆ. ಒಟ್ಟಾರೆಯಾಗಿ ಎರಡು ಗ್ರಾಮ ಪಂಚಾಯತಿಗಳು ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿವೆ ಸಂಬಂಧಪಟ್ಟ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ನಾನು ಅಭಿನಂದನೆ ಸಲ್ಲಿಸುತ್ತೇನೆ ಎಂದರು.

# ಬೆಳೆ ಹಾನಿ: ಸಮರ್ಪಕ ಪರಿಹಾರಕ್ಕಾಗಿ ಶಾಸಕ ಪ್ರಭು ಚವ್ಹಾಣ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಸುರಿದ ಅಧಿಕ ಮಳೆಯಿಂದಾಗಿ ಜಿಲ್ಲೆಯಲ್ಲಿ ಸಾಕಷ್ಟು ರೈತರ ಬೆಳೆ ಹಾನಿಯಾಗಿದ್ದು, ಎಲ್ಲಾ ರೈತರಿಗೆ ಸಮರ್ಪಕವಾಗಿ ಪರಿಹಾರ ಕಲ್ಪಿಸಬೇಕು ಎಂದು ಮಾಜಿ ಸಚಿವರು ಹಾಗೂ ಔರಾದ (ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಬೆಳಗಾವಿಯಲ್ಲಿ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲಿ ಶಾಸಕರು ಕೇಳಿದ ಚು-ಕ್ಕೆ ಗುರುತಿಲ್ಲದ ಪ್ರಶ್ನೆಗೆ ಉತ್ತರಿಸಿದ ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಅವರು, ಪ್ರಸಕ್ತ ಸಾಲಿನ ಪೂರ್ವ ಮುಂಗಾರು ಹಂಗಾಮಿನಲ್ಲಿ ಸುರಿದ ಅತ್ಯಧಿಕ ಮಳೆಯಿಂದಾಗಿ ಬೀದರ್ ಜಿಲ್ಲೆಯಲ್ಲಿ 7,768.70 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಹಾಗೆಯೇ 2022-23 ರಲ್ಲಿ 65,187.83 ಹೆಕ್ಟರ್, 2023-24ರಲ್ಲಿ 6438.52 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಎನ್.ಡಿ.ಆರ್.ಎಫ್/ಎಸ್.ಡಿ.ಆರ್.ಎಫ್ ನಂತೆ ಬೆಳೆಹಾನಿಗೆ ಸಂಬಂಧಿಸಿದ ಪ್ರತಿ ರೈತರಿಗೆ ಗರಿಷ್ಠ 2 ಹೆಕ್ಟೇರ್ ಗೆ ಸೀಮಿತಗೊಳಿಸಿ, ಶೇ.33 ರಷ್ಟು ಹಾನಿಯಾದ ಮಳೆಯಾಶ್ರಿತ ಬೆಳೆಗಳಿಗೆ ಪ್ರತಿ ಹೆಕ್ಟೆರಿಗೆ 8500, ನೀರಾವರಿ ಬೆಳೆಗಳಿಗೆ ಪ್ರತಿ ಹೆಕ್ಟೆರಿಗೆ 17000 ಮತ್ತು ಬಹು ವಾರ್ಷಿಕ ಬೆಳೆಗಳಿಗೆ ಪ್ರತಿ ಹೆಕ್ಟೆರಿಗೆ 22500 ಗಳ ಪರಿಹಾರವನ್ನು ನಿಗದಿಪಡಿಸಲಾಗಿದೆ. ಅರ್ಹ ರೈತರಿಗೆ ಡಿಬಿಟಿ ತಂತ್ರಾಂಶದ ಮೂಲಕ ಫ್ರೂಟ್ಸ್ ನೊಂದಾಯಿತ ಐಡಿ ಇರುವ ರೈತರ ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗಳಿಗೆ ಪರಿಹಾರ ವಿತರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಬೆಳೆ ಹಾನಿಗೆ ಸಂಬಂಧಿಸಿದಂತೆ ಸಮೀಕ್ಷಾ ಕಾರ್ಯ ಸಮರ್ಪಕವಾಗಿ ನಡೆದಿಲ್ಲವೆಂದು ರೈತರಿಂದ ದೂರುಗಳು ಬರುತ್ತಿವೆ. ಅಲ್ಲದೆ ಬಿಡುಗಡೆಯಾದ ಬೆಳೆ ಹಾನಿ ಪರಿಹಾರ ಎಲ್ಲ ರೈತರಿಗೆ ಸಮರ್ಪಕವಾಗಿ ತಲುಪಿಲ್ಲ. ಕೆಲವು ರೈತರು ಪರಿಹಾರ ಸಿಗದೆ ಕಂಗಾಲಾಗಿದ್ದಾರೆ. ಹಾಗಾಗಿ ಸಮೀಕ್ಷಾ ಕಾರ್ಯ ಸರಿಯಾಗಿ ನಡೆಸಿ ಬೆಳೆ ಹಾನಿಯಾದ ಯಾವೊಬ್ಬ ರೈತನೂ ಸರ್ಕಾರದ ಯೋಜನೆಯಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕೆಂದು ಕಂದಾಯ ಸಚಿವರನ್ನು ಒತ್ತಾಯಿಸಲಾಗಿದೆ ಎಂದು ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮದ ಅಭಿವೃದ್ಧಿಗೆ ಶ್ರಮಿಸಿ; ಶಾಸಕ ; ತುನ್ನೂರ್



(ಎಂ.ರಫೀಕ್ ಪಟೇಲ್)

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸರ್ಕಾರದ ಅನುದಾನದಲ್ಲಿ ವಿವಿಧ ಮೂಲಭುತ ಸೌಲಭ್ಯಗಳನ್ನು ಗ್ರಾಮೀಣ ಭಾಗದ ಜನಕ್ಕೆ ನೀಡುವ ಮೂಲಕ ಉತ್ತಮ ಕೆಲಸ ಮಾಡಿ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನುರ್ ಹೇಳಿದರು. ತಾಲೂಕಿನ ಇಬ್ರಾಯಿಂಪುರ ಗ್ರಾಮಪಂಚಾಯಿತಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರಾಗಿ ಆಯ್ಕೆಯಾದ ಸಮೀನಾಬೇಗಂ ಮಹಿಬೂಬ್, ಹಾಗೂ ಉಪಾಧ್ಯಕ್ಷೆ ನೀಲಮ್ಮದೇಸಾಯಿ ಅವರನ್ನು ತಮ್ಮ ಶಾಸಕರ ಕಚೇರಿಯಲ್ಲಿ ಶನಿವಾರ ಸನ್ಮಾನಿಸಿ ಮಾತನಾಡಿದ ಅವರು, ಹಳ್ಳಿಗಳಲ್ಲಿ ಗ್ರಾಪಂಗಳೇ ಅಭಿವೃದ್ಧಿ ಸೌಧವಿದ್ದಂತೆಯೇ, ಅದಕ್ಕೆ ಗ್ರಾಪಂ ಚುನಾಯಿತ ಸದಸ್ಯರು, ಅಧಿಕಾರಿಗಳು ಒಗ್ಗಟ್ಟಿನಿಂದ ಕೆಲಸ ಮಾಡಬೇಕೆಂದರು. ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳ ಅಭಿವೃದ್ಧಿಗೆ ಏನೇ ಬೇಕಾದರೂ ತಮ್ಮ ಗಮನಕ್ಕೆ ತಂದರೇ ತಾವೂ ತಮ್ಮ ಜೊತೆ ಅಭಿವೃದ್ಧಿಯಲ್ಲಿ ಕೈಜೋಡಿಸುವುದಗಿ ಶಾಸಕರು ಹೇಳಿದರು.

ಗ್ರಾಪಂ ಸದಸ್ಯರಾದ ತಂಗಡಗಿಯ ಹೊನ್ನಪ್ಪ, ಸಾಹಿಬಣ್ಣಾ, ಶರಣಪ್ಪ, ಶಾರದಮ್ಮ ನೂರಂದಯ್ಯ, ಮಲಕರಡ್ಡಿ , ಮಾಜಿ ಬ್ಲಾಕ್ ಅಧ್ಯಕ್ಷ ಮರೆಪ್ಪ ಬಿಳ್ಹಾರ್ ಹಾಗೂ ಗ್ರಾಮದ ಪ್ರಮುಖರಾದ ಸಿದ್ದಣ್ಣಗೌಡ ಸಾಹುಕಾರ, ಮಲ್ಲಣ್ಣಗೌಡ ಪೊಲೀಸ್ ಪಾಟೀಲ್, ಮಹಾಂತಗೌಡ ಬಿರಾದಾರ, ಯಲ್ಲಾಲಿಂಗ, ಈಶ್ವರಿ ನಾಗರಡ್ಡಿ ಪಾಟೀಲ್, ಶರಣಪ್ಪ, ದೇವಕಮ್ಮ ಶರಣಮ್ಮ, ಸಿದ್ದಲಿಂಗರಡ್ಡಿ, ದಂಡಪ್ಪ, ಶಾಂತಪ್ಪ ಸೇರಿದಂತೆಯೇ ಇತರರಿದ್ದರು.

# ವೀರಕ್ತಮಠದ ಮಠಾಧ್ಯಕ್ಷರಾದ ಚನ್ನವೀರ ಮಹಾಸ್ವಾಮಿಗಳ ತುಲಾಭಾರ

ಮಲ್ಲಮ್ಮ ನುಡಿ ವಾರ್ತೆ

(ಪರಮೇಶ ರಾಂಪುರೆ)



ಕಮಲನಗರ: ವೀರಕ್ತಮಠ ಹೂವಿನಿಶಿಗ್ಲಿ ಹಾಗೂ ಸೋನಾಳ ಮಠಾಧ್ಯಕ್ಷರಾದ ಚನ್ನವೀರ ಮಹಾಸ್ವಾಮಿಗಳಿ ಲಿಂ. ನಿರಂಜನ ಮಹಾಸ್ವಾಮಿಗಳ 15 ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ನಿಮಿತ್ತ ತುಲಾಭಾರ ಶನಿವಾರ ನಡೆಯಿತು.

ಮಠಾಧ್ಯಕ್ಷರಾದ ಪರಮಪೂಜ್ಯ ಶ್ರೀ ಮ. ನಿ. ಪ್ರ. ಚನ್ನವೀರ ಮಹಾಸ್ವಾಮಿಗಳವರಿಗೆ ನಾಣ್ಯಗಳಿಂದ ತುಲಾಭಾರ

ಕಾರ್ಯಕ್ರಮವನ್ನು ಸದ್ಧಭಕ್ತರು ನಡೆಸಿಕೊಟ್ಟರು.

ರಾಜಕುಮಾರ ಕಾಶಿನಾಥ ಅಲಬಿದೆ ಗ್ರಾ.ಪಂ. ಮಾಜಿ ಅಧ್ಯಕ್ಷರು ಸೋನಾಳ,

ಈಶ್ವರ ರಾಜಕುಮಾರ ಚಿಂಚೋಳೆ ಸೋನಾಳ, ಶರಣು ಬಸವರಾಜ ಹಣಮಶೆಟ್ಟಿ ಸೋನಾಳ, ಶಿವಕಾಂತ ಕಾಶಿನಾಥ ಬಿರಾದಾರ ಸೋನಾಳ,

ಕಲ್ಲಯ್ಯಸ್ವಾಮಿ ಷಣ್ಮುಗಯ್ಯಸ್ವಾಮಿ ಮಠಪತಿ ಕಮಲನಗರ, ಬಾಬುರಾವ ಕಾಶಪ್ಪ ಹುಣಜೆ ಉಚ್ಚಾ, ತಾ.ಭಾಲ್ಕಿ ಸೇರಿ ತಲಾ ಒಂದು ಸಾರಿಯಂತೆ ಒಟ್ಟು ಆರು ಬಾರಿ ಶ್ರೀಗಳ ತುಲಾಭಾರ ಮಾಡಿದರು.

# ಚಿಟಗುಪ್ಪ ತಾಲೂಕ ಮಾದರಿ ಕ್ಷೇತ್ರ ಮಾಡುವುದೆ ನನ್ನ ಗುರಿ: ಶಾಸಕ ಪಾಟೀಲ್



(ರಾಜಕುಮಾರ ಆರ್. ಹಡಪದ)

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪಟ್ಟಣವನ್ನು ತಾಲೂಕ ಕೇಂದ್ರವಾಗಿ ಘೋಷಣೆ ಮಾಡಿ ಸುಮಾರು ವರ್ಷಗಳು ಕಳೆದರೂ ಕೂಡ ಇಲ್ಲಿಯ ವರೆಗೆ ತಹಶೀಲ್ ಕಚೇರಿ, ತಾಲೂಕ ಪಂಚಾಯತ, ಉಪಖಜಾನೆ ಕಚೇರಿ ಹೊರತುಪಡಿಸಿ ತಾಲೂಕಿಗೆ ಬೇಕಾಗಿರುವ ಸರಕಾರಿ ಕಚೇರಿಗಳು ಪ್ರಾರಂಭವಾಗಿಲ್ಲ ಎಂದು ಬೆಳಗಾವಿಯಲ್ಲಿ ನಡೆದ ಚಳಿಗಾಲ ಅಧಿವೇಶನದಲ್ಲಿ ಹುಮನಾಬಾದ ಮತ ಕ್ಷೇತ್ರದ ಶಾಸಕ ಡಾ. ಸಿದ್ದು ಪಾಟೀಲ್ ಅವರು ಸರ್ಕಾರದ ಗಮನಕ್ಕೆ ತಂದ ಪ್ರಯುಕ್ತ ಶನಿವಾರ ಚಿಟಗುಪ್ಪ ಮಹಾಶಕ್ತಿ ಕೇಂದ್ರದ ಪದಾಧಿಕಾರಿಗಳು ಹಾಗೂ ಮುಖಂಡರು, ಹಿರಿಯರು ಶಾಸಕರ ಗೃಹ-ಕಚೇರಿಯಲ್ಲಿ ಶಾಸಕರಿಗೆ ಸನ್ಮಾನಿಸಿ ಅಭಿನಂದನೆಗಳು ಸಲ್ಲಿಸಿದರು. ಬಳಿಕ ಶಾಸಕ ಡಾ. ಸಿದ್ದು ಪಾಟೀಲ ಮಾತನಾಡಿ ಹುಮನಾಬಾದ ಮತಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿಗೊಳಿಸುವುದೆ ನನ್ನ ಪ್ರಥಮ ಆದ್ಯತೆ, ನೂತನವಾಗಿ ಘೋಷಣೆಯಾದ ಚಿಟಗುಪ್ಪ ತಾಲೂಕ ಕೇಂದ್ರವನ್ನು ಮುಂಬರುವ ದಿನಗಳಲ್ಲಿ ತಾಲೂಕಿಗೆ ಬೇಕಾಗಿರುವ ಎಲ್ಲಾ ಸರ್ಕಾರಿ ಕಚೇರಿಗಳು ಪ್ರಾರಂಭಿಸಿ ಚಿಟಗುಪ್ಪ ತಾಲೂಕವನ್ನು ಮಾದರಿ ಕ್ಷೇತ್ರ ಮಾಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಅಮಿತಕುಮಾರ ತೊಗಲುರ, ರೇವಣಪ್ಪ ಹೂಗಾರ, ಸೂರ್ಯಕಾಂತ ಮಠಪತಿ, ರಾಜಕುಮಾರ ಗುತ್ತೇದಾರ , ರಾಜಗೋಪಾಲ ಐನಾಪುರ, ಅನೀಲ ಜೋಷಿ, ಇಸ್ಮಾಯಿಲ್ ಲಾಥೋಡಿ, ಮಹೇಶ ಮಹಾಜನ, ಬಸಪ್ಪ ಪಡಗಿ, ಸಂಜು ದರ್ವೇಷ, ಶಿವು ಚನ್ನೂರು, ನರಸಪ್ಪ ನರನಾಳ, ರವಿ ಪವಾರ, ಲಕ್ಷ್ಮಣ ಭೋವಿ, ಚಂದು ನಾರಾಯಣಪೇಟ, ಶಿವಕುಮಾರ ಅಡಕಿ, ಸಾಯಿ ಸಿರ್ಕೆ, ಬಸವರಾಜ ಪಾಟೀಲ್ ಮಾಡಗುಳ, ನಟವರ್ ಪವರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅನ್ನಭಾಗ್ಯ ಯೋಜನೆಯು ಪ್ರತಿಯೊಬ್ಬರಿಗೂ ತಲುಪಿಸುವ ಕಾರ್ಯ ಮುಂದುವರಿಲಿ : ಮುರಳಿದ ರಾವ್ ಕುಲಕರ್ಣಿ



(ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕುನೂರು ಪಟ್ಟಣದ ಅನ್ನದಾನೇಶ್ವರ ಶಾಖ ಮಠದಲ್ಲಿ ಆಯೋಜಿಸಿದ್ದ ಅನ್ನದಾನೇಶ್ವರ ತಾಲೂಕ ಪಡಿತರ ವಿತರಕರ ಸಂಘದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ತಾಲೂಕ ಗ್ರೇಡ್ 2 ತಹಸಿಲ್ದಾರ ಮುರಳಿದ ರಾವ್ ಕುಲಕರ್ಣಿ ಮುಖ್ಯಮಂತ್ರಿಗಳ ಮಹಾತ್ವಕಾಂಕ್ಷಿ ಯೋಜನೆಯದ ಅನ್ನಭಾಗ್ಯವನ್ನು ಪ್ರತಿಯೊಬ್ಬರಿಗೂ ತಲುಪಿಸುವ ಪಡಿತರ ವಿತರಕರು ಸಹ ಒಗ್ಗಟ್ಟಾಗಿ ಸಂಘಟನೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು ಅವರ ಕಾರ್ಯಗಳೆಲ್ಲವೂ ಯಶಸ್ವಿಗೊಳ್ಳಲಿ ಮತ್ತು ಸೇವಾ ಮನೋಭಾವನೆಯಿಂದ ಪ್ರತಿಯೊಬ್ಬ ವಿತರಕರು ಕಾರ್ಯನಿರ್ವಹಿಸಲಿ ಎಂದು ಗ್ರೇಡ್ 2 ತಹಸೀಲ್ದಾರ ಮುರುಳಿದ ರಾವ್ ಕುಲಕರ್ಣಿ ಹೇಳಿದರು.

ಪಟ್ಟಣದಲ್ಲಿರುವ ಅನ್ನದಾನೇಶ್ವರ ಶಾಖ ಮಠದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಶ್ರೀ ಅನ್ನದಾನೇಶ್ವರ ತಾಲೂಕ ಸರ್ಕಾರಿ ಪಡಿತರ ವಿತರಕರ ಸಂಘದ ಉದ್ಘಾಟನೆ ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಗ್ರೇಡ್ ಟು ತಹಸಿಲ್ದಾರ ಮುರಳಿದ ರಾವ್ ಕುಲಕರ್ಣಿ ಮಾತನಾಡುತ್ತಾ ಪ್ರತಿಯೊಬ್ಬರು ಸೇವಾ ಮನೋಭಾವನೆ ಯೊಂದಿಗೆ ನಿಷ್ಠೆ ಹಾಗೂ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು, ಸರ್ಕಾರ ನಿರ್ವಹಿಸಿದ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸುವುದರೊಂದಿಗೆ ಯಶಸ್ವಿ ಕಾಣಬೇಕು ಎಂದು ಹೇಳಿದರು.

ಈ ವೇಳೆಯಲ್ಲಿ ಕುಕನೂರಿನ ಅನ್ನದಾನೇಶ್ವರ ಶಾಖಾಮಠದ ಶ್ರೀಗಳು ಮಾತನಾಡುತ್ತಾ ಪಟ್ಟಣದಲ್ಲಿರುವ ಪ್ರತಿಯೊಬ್ಬ ಮನುಷ್ಯರು ಕೃತಜ್ಞತಾ ಭಾವನೆ ಹೊಂದುವುದು ಬಹುಮುಖ್ಯವಾಗಿದ್ದು ಹಣದ. ಸ್ತಿರುವಂತಿಕೆಗಿಂತ ಕೃತಜ್ಞತೆ ಭಾವನೆಯ ಶ್ರೀಮಂತಿಕೆಯನ್ನು ನಿಮ್ಮದಾಗಿಸಿಕೊಳ್ಳಿ ಎಂದು ಕುಕನೂರು ಪಟ್ಟಣದ ಶ್ರೀ ಅನ್ನದಾನೇಶ್ವರ ಶಾಖ ಮಠದ ಪೂಜ್ಯರಾದ ಶ್ರೀ ಮಹಾದೇವ ಮಹಾಸ್ವಾಮಿಗಳು ಹೇಳಿದರು.

ಅನ್ನದಾನೇಶ್ವರ ಮಠದಿಂದ ಪ್ರತಿಯೊಬ್ಬರು ವಿವಿಧ ರೀತಿಯ ಸಹಕಾರವನ್ನು ಪಡೆದಿದ್ದು ಆದರೆ ಇದೇ ಮೊದಲ ಬಾರಿಗೆ ತಾಲೂಕ ಮಟ್ಟದ ಸಂಘ ಸಂಸ್ಥೆಗೆ ಶ್ರೀ ಅನ್ನದಾನೇಶ್ವರರ ಹೆಸರು ನಾಮಕರಣ ಮಾಡಿರುವುದು ಹೆಮ್ಮೆ ಹಾಗೂ ಸಂತಸದ ವಿಷಯವಾಗಿದ್ದು ಒಳ್ಳೆಯ ಕೆಲಸ ಮಾಡಿದವರನ್ನು ಎಂದಿಗೂ ಸ್ಮರಣೆ ಮಾಡಿಕೊಳ್ಳುತ್ತಿರಬೇಕು ಮನುಷ್ಯನ ಜೀವನದಲ್ಲಿ ಕೃತಜ್ಞತೆ ಭಾವನೆ ಬಹುಮುಖ್ಯವಾಗಿದ್ದು ಹಣ ಐಶ್ವರ್ಯಗಳ ಶ್ರೀಮಂತಿಕೆಗಿಂತ ಕೃತಜ್ಞತೆ ಭಾವನೆ ಹೊಂದುವ ಸೇರುವಂತಿಕೆಹೆಚ್ಚುಕಾಲಬಾಳುತ್ತದೆ. ಸಮಾಜಕ್ಕೆ ನಾವೇನಾದರೂ ಒಳ್ಳೆಯ ಕಾರ್ಯಗಳನ್ನು ಮಾಡಿದಾಗ ಅದರ ಪ್ರತಿಫಲ ಸಮಾಜದಿಂದ ಮರಳಿ ಸಿಕ್ಕೇ ಸಿಗುತ್ತದೆ. ಕೃತಜ್ಞತೆ ಇದ್ದಾಗ ಮಾತ್ರ ಜೀವನದಲ್ಲಿ ಯಶಸ್ಸು ಸಾಧ್ಯ ಎಂದು ತಿಳಿಸಿದರು.

ಕರ್ನಾಟಕ ಹೈಕೋರ್ಟ್ ವಕೀಲರಾದ ರಾಜಶೇಖರ ಹಳ್ಳಿ ಮಾತನಾಡುತ್ತಾ ಮನುಷ್ಯನು ತಾನು ನಡೆದ ಬಂದ ದಾರಿಯನ್ನು ಮರೆಯಬಾರದು ಮಾನವನ ಬೆಳವಣಿಗೆಯಲ್ಲಿ ವೃತ್ತಿಗಳು ಪ್ರಮುಖವಾದ ಆಧಾರ ಸ್ಥಂಬಗಳಾಗಿದ್ದು ಅವರು ಮಾಡುತ್ತಿರುವ ವೃತ್ತಿಯ ಬಗ್ಗೆ ಹೆಮ್ಮೆ ಮತ್ತು ಗೌರವವನ್ನು ಹೊಂದಬೇಕು ಸರಕಾರ ಪಡಿತರ ವಿತರಕರಿಗೆ ನಿರ್ವಹಿಸಿದ ಕೆಲಸವನ್ನು ಸಮರ್ಪಕವಾಗಿ ನಿಭಾಯಿಸುವ ಕಾರ್ಯವನ್ನು ಪಡಿತರ ಅಂಗಡಿಯವರು ಮಾಡುತ್ತಿರುವುದು ಅವರ ಯಶಸ್ಸಿಗೆ ಕಾರಣವಾಗಿದೆ ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಕರ ರಾಜ್ಯ ಸಮಿತಿ ನಿರ್ದೇಶಕರಾದ ಹೊನ್ನಮ್ಮ ಕನಕಗಿರಿ ಹಾಗೂ ಇನ್ನಿತರದಿಂದ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ವೇಳೆಯಲ್ಲಿ ಪಡಿತರ ವಿತರಕರ ತಾಲೂಕ ಸಂಘದ ಅಧ್ಯಕ್ಷ ನಿಂಗರಾಜ ಕಂದಗಲ್, ಪ್ರಮುಖರಾದ ಮಹಮ್ಮದ್ ಮುಸ್ತಫಾ, ಹಾಲಯ್ಯ ಜಾಲಿ, ವೀರಯ್ಯ ತೋಂಟದಾರ್ಯ ಮಠ, ತೋಟಯ್ಯ ಸ್ವಾಮಿ ತಳಕಲ್, ಕನಕಪ್ಪ ಚಲವಾದಿ, ಸಿದ್ದನಗೌಡ ಪೊಲೀಸ್ ಪಾಟೀಲ, ಷಣ್ಮುಖ ಗೌಡ್ರು, ಮಹೇಶ ಕಲ್ಮಠ, ಈರಣ್ಣ ಅಂಟಿ, ಶಿವಶರಣಪ್ಪ ಮ್ಯಾಳಿ, ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು

ಶ್ರೀ ಸ್ವಾಮಿ ನರೇಂದ್ರ ಪ.ಪೂ ಕಾಲೇಜಿನಲ್ಲಿ ಪಿಯುಸಿ ಫಲಿತಾಂಶ ಹೆಚ್ಚಳಕ್ಕಾಗಿ ನಡೆದ ಕಾರ್ಯಾಗಾರ

# ಗುಣಮಟ್ಟದ ಕಲಿಕೆ ಮತ್ತು ಫಲಿತಾಂಶ ಹೆಚ್ಚಳವೇ ಕಾರ್ಯಾಗಾರದ ಉದ್ದೇಶ: ಶಾಬಾದಕರ್




ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 21 :- ಪದವಿಪೂರ್ವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಕಲಿಕೆಗಾಗಿ ಪ್ರೇರಣೆ ನೀಡುವುದು ಮತ್ತು ಪಿಯುಸಿ ಫಲಿತಾಂಶ ಹೆಚ್ಚಳದ ಉದ್ದೇಶದಿಂದ ಇಂದು ನಗರದ ಸ್ವಾಮಿ ನರೇಂದ್ರ ಪದವಿಪೂರ್ವ ಕಾಲೇಜಿನಲ್ಲಿ ಒಂದು ದಿನದ ತರಬೇತಿ ಆಯೋಜಿಸಲಾಗಿದೆ ಎಂದು ಪದವಿಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಚಂದ್ರಕಾಂತ ಶಾಬಾದಕರ್ ತಿಳಿಸಿದರು.

ಪದವಿಪೂರ್ವ ಶಿಕ್ಷಣ ಇಲಾಖೆ, ಜಿಲ್ಲಾ ಪ್ರಾಂಶುಪಾಲರು ಹಾಗೂ ಉಪನ್ಯಾಸಕರ ಸಂಘ ಹಾಗೂ ಶ್ರೀ ಸ್ವಾಮಿ ನರೇಂದ್ರ ಪದವಿ ಪೂರ್ವ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ 2024-25ನೇ ಸಾಲಿನ ಫಲಿತಾಂಶ ಸುಧಾರಣೆ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಜೀವಶಾಸ್ತ್ರ, ಗಣಿತಶಾಸ್ತ್ರ, ಸಮಾಜಶಾಸ್ತ್ರ ಮತ್ತು ರಾಜ್ಯಶಾಸ್ತ್ರ ವಿಷಯಗಳ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗಾಗಿ ವಿಶೇಷ ತರಬೇತಿ ನೀಡಲಾಗುತ್ತಿದೆ. ಹಾಜರಾತಿ ಕಡಿಮೆ ಇರುವ ವಿದ್ಯಾರ್ಥಿಗಳಿಗಾಗಿ ಉಪನ್ಯಾಸಕರು ಮನೆಗೆ ಕರೆ ಮಾಡಿ ಮಕ್ಕಳನ್ನು ಕಾಲೇಜಿಗೆ ಕಳುಹಿಸುವಂತೆ ತರಬೇತಿ ನೀಡಲಾಗಿದೆ. ಜೊತೆಗೆ ಮಕ್ಕಳು ಬೆಳಿಗ್ಗೆ ಬೇಗ ಏಳದೇ ಇರುವುದರಿಂದ ಅವರಿಗೆ ಉಪನ್ಯಾಸಕರಿಂದ ಕರೆ ಮಾಡಿಸಿ, ಬೇಗ ಏಳುವಂತೆ ಮಾಡಿ ಅಧ್ಯಯನ ಮಾಡಲು ತಿಳಿಸುವಂತೆ ಉಪನ್ಯಾಸಕರಿಗೆ ಈ ಕಾರ್ಯಾಗಾರದಲ್ಲಿ ತರಬೇತಿ ನಿಡಲಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶ್ರೀ ಸ್ವಾಮಿ ನರೇಂದ್ರ ಪದವಿ ಪೂರ್ವ ಕಾಲೇಜಿನ ಅಧ್ಯಕ್ಷರಾದ ಚಂದ್ರಕಾಂತ ಪಾಟೀಲ ಮಾತನಾಡಿ ಮಕ್ಕಳ ಫಲಿತಾಂಶ ಹೆಚ್ಚಳದ ಉದ್ದೇಶದಿಂದ ಇಂದು ಕಾಲೇಜಿನಲ್ಲಿ ಒಂದು ದಿನದ ಕಾರ್ಯಾಗಾರ

# ಸಿರವಾರ ಪಟ್ಟಣ ಪಂಚಾಯತಿ; ಆಕ್ಷೇಪಣೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಡಿ.21-ಜಿಲ್ಲೆಯ ಸಿರವಾರ ಪಟ್ಟಣ ಪಂಚಾಯತಿ ವ್ಯಾಪ್ತಿಯ ಬಯಲು ಆಂಜನೇಯ ಗುಡಿ ಮುಂಬಾಗದ ಜಾಗದಲ್ಲಿ ದಾಸ ಶ್ರೇಷ್ಠ ಶ್ರೀ ಕನಕದಾಸ ಕಂಚಿನ ಪ್ರತಿಮೆಯನ್ನು 20*20 ಸ್ಥಾಪಿಸಲು ಉದ್ದೇಶಿಸಿದ್ದು, ಪಟ್ಟಣ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕರಿಂದ ಯಾವುದಾದರು ಆಕ್ಷೇಪಣೆಗಳಿದ್ದಲ್ಲಿ ಲಿಖಿತರೂಪದ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಸಿರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ. ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಇದೇ 2024ರ ಡಿ.22ರಿಂದ 2025ರ ಜ.21ರೊಳಗಾಗಿ ಲಿಖಿತರೂಪದಲ್ಲಿ ಅಗತ್ಯ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಬಹುದಾಗಿದೆ. ಆಕ್ಷೇಪಣೆಗಳು ಬಾರದೇ ಇದ್ದಲ್ಲಿ ಮುಂದಿನ ಕ್ರಮ ಜರುಗಿಸಲಾಗುವುದು ಸಿರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕ ಭವಿಷ್ಯ ನಿಧಿ ಸಂಘಟನೆ; ಡಿ.27ರಂದು ನಿಧಿ ಆಪ್ಕೆ ನಿಕತ್ ಜಾಗೃತಿ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಡಿ.21:-ಇಪಿಎಫ್ ಮತ್ತು ಎಂಪಿ ಕಾಯ್ದೆ, 1952ರ ನಿಬಂಧನೆಗಳನ್ನು ಉತ್ತಮವಾಗಿ ಅರ್ಥಮಾಡಿಕೊಳ್ಳಲು ಮಧ್ಯಸ್ಥಗಾರರು, ಸದಸ್ಯರು ಮತ್ತು ಉದ್ಯೋಗದಾತರು ಮತ್ತು ಇಪಿಎಫ್‌ಒ ನಡುವೆ ನಿಕಟ ಸಂವಹನಕ್ಕಾಗಿ 'ನಿಧಿ ಆಪ್ಕೆ ನಿಕತ್' ಎಂಬ ಜಿಲ್ಲಾ ಜಾಗೃತಿ ಶಿಬಿರ ಮತ್ತು ಗ್ರಾಹಕ ಔಟ್ರೀಚ್ ಕಾರ್ಯಕ್ರಮವು ನಡೆಯಲಿದೆ. ಈ ಕಾರ್ಯಕ್ರಮವು ಭವಿಷ್ಯ ನಿಧಿ ಅಥವಾ ಪಿಂಚಣಿ ಸಂಬಂಧಿತ ಕುಂದುಕೊರತೆಗಳು /ಪ್ರಶ್ನೆಗಳಿಗೆ ಸ್ಥಳದಲ್ಲೇ ಪರಿಹಾರಗಳನ್ನು ಒದಗಿಸುವ ಪ್ರಯತ್ನ ಮಾಡುತ್ತದೆ.

ಈ ಹಿನ್ನೆಲೆಯಲ್ಲಿ 2024ರ ಡಿಸೆಂಬರ್ ತಿಂಗಳ ಜಂಟಿ "ನಿಧಿ ಆಪ್ಕೆ ನಿಕತ್ 2.0" ಕಾರ್ಯಕ್ರಮವನ್ನು ಇದೇ 2024ರ ಡಿ.27ರ ಬೆಳಿಗ್ಗೆ 09:30ರಿಂದ ಸಂಜೆ 04:00ರವರೆಗೆ ಮುನ್ನಾರ್ ಕಾಪು ಶಿಕ್ಷಣ ಸಂಸ್ಥೆ, ಸಿಟಿ ಟಾಕೀಸ್ ರಸ್ತೆ, ಬಂಗಿ ಕುಂಟಾ ರಾಯಚೂರು-584103ನಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ರಾಯಚೂರು ಜಿಲ್ಲೆಯ ಎಲ್ಲಾ ಉದ್ಯೋಗದಾತರು, ನೌಕರರು ಮತ್ತು ಪಿಂಚಣಿದಾರರು ಭಾಗವಹಿಸಬಹುದು.

ಪಿಂಚಣಿದಾರರು, ಇಪಿಎಫ್ ಚಂದಾದಾರರು ಮತ್ತು ಉದ್ಯೋಗದಾತರು ಈ ಅವಕಾಶದ ಸದುಪಯೋಗ ಪಡೆಯಲು ಕಾರ್ಯಕ್ರಮದಲ್ಲಿ ಭಾಗವಹಿಸಬಹುದು ಎಂದು ಪ್ರಾದೇಶಿಕ ಪಿಎಫ್ 2ನೇ ಆಯುಕ್ತರಾದ ಶಶಿ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನೈರ್ಮಲ್ಯ ಶೌಚಾಲಯ ಮತ್ತು ಮ್ಯಾನುಯಲ ಸ್ಯಾವೆಂಜರ್ಸ್ ಮರು ಸಮೀಕ್ಷೆ

(ರಾಜಕುಮಾರ ಆರ್.ಹಡಪದ)

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪುರಸಭೆ ವ್ಯಾಪ್ತಿಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್ಸಗಳ ಮರು ಸಮೀಕ್ಷೆ ನಡೆಸುತ್ತಿದ್ದು. ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವ ಅನೈರ್ಮಲ್ಯ ಶೌಚಾಲಯಗಳಿಂದ ಹೊರ ಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಮಲವನ್ನು ಸ್ವಚ್ಛಗೊಳಿಸುವ ಶೌಚಾಲಯದ ಮನಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವ ಕಾರ್ಯದಲ್ಲಿ ತೊಡಗಿಕೊಂಡಿರುವ ಯಾವುದೇ ವ್ಯಕ್ತಿಗಳು ತಮ್ಮ ಹೆಸರನ್ನು ಪುರಸಭೆಯಲ್ಲಿ ನೋಂದಾಯಿಸಿಕೊಳ್ಳುವಂತೆ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹ ಮ್ಯಾನುಯಲ್ ಸ್ಕ್ಯಾವೆಂಜರ್ಸಗಳು ನೋಂದಣಿಗಾಗಿ ತಮ್ಮ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ, ಕುಟುಂಬದ ಸದಸ್ಯರನ್ನೊಳಗೊಂಡ ಭಾವಚಿತ್ರ, ಬ್ಯಾಂಕ್ ಖಾತೆಯ ಪಾಸ್ ಬುಕ್, ಆಧಾರ ಕಾರ್ಡ್ ಪ್ರತಿ ಮ್ಯಾನುಯಲ್ ಸ್ಕ್ಯಾವೆಂಜರ್ಸಗಳ ನಿರ್ವಹಿಸುತ್ತಿರುವ ಅನೈರ್ಮಲ್ಯದ ಶೌಚಾಲಯದ ಸ್ಥಳ ವಿವರ ಅಗತ್ಯ ದಾಖಲೆಗಳೊಂದಿಗೆ ಪುರಸಭೆಯ ಆರೋಗ್ಯ ಶಾಖೆ-ಯ ಸಹಾಯಕ ಕಾರ್ಯಪಾಲಕ ಹಾಗೂ ಪರಿಸರ ಅಭಿಯಂತರರನ್ನು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.


# ಸಿರವಾರ ಪಟ್ಟಣ ಪಂಚಾಯತಿ; ಆಕ್ಷೇಪಣೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಡಿ.21-ಜಿಲ್ಲೆಯ ಸಿರವಾರ ಪಟ್ಟಣ ಪಂಚಾಯತಿ ವ್ಯಾಪ್ತಿಯ ಬಯಲು ಆಂಜನೇಯ ಗುಡಿ ಮುಂಬಾಗದ ಜಾಗದಲ್ಲಿ ದಾಸ ಶ್ರೇಷ್ಠ ಶ್ರೀ ಕನಕದಾಸ ಕಂಚಿನ ಪ್ರತಿಮೆಯನ್ನು 20*20 ಸ್ಥಾಪಿಸಲು ಉದ್ದೇಶಿಸಿದ್ದು, ಪಟ್ಟಣ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕರಿಂದ ಯಾವುದಾದರು ಆಕ್ಷೇಪಣೆಗಳಿದ್ದಲ್ಲಿ ಲಿಖಿತರೂಪದ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಸಿರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಇದೇ 2024ರ ಡಿ.22ರಿಂದ 2025ರ ಜ.21ರೊಳಗಾಗಿ ಲಿಖಿತರೂಪದಲ್ಲಿ ಅಗತ್ಯ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಬಹುದಾಗಿದೆ. ಆಕ್ಷೇಪಣೆಗಳು ಬಾರದೇ ಇದ್ದಲ್ಲಿ ಮುಂದಿನ ಕ್ರಮ ಜರುಗಿಸಲಾಗುವುದು ಸಿರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಅಕ್ರಮವಾಗಿ ಗಾಂಜಾ ಸಾಗಾಟ: ಇಬ್ಬರ ಬಂಧನ

ಕಲಬುರಗಿ,ಡಿ.21-ಸೇಡಂ ಕಡೆಯಿಂದ ಬಿಳಿ ಬಣ್ಣದ ಕಾರಿನಲ್ಲಿ ಅಕ್ರಮವಾಗಿ ಗಾಂಜಾ ಸಾಗಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ನಾಯಕ್ ಅವರ ಮಾರ್ಗದರ್ಶನದಲ್ಲಿ ದಕ್ಷಿಣ ಉಪ ವಿಭಾಗದ ಎಸಿಪಿ ಭೂತೇಗೌಡ ಅವರ ನೇತೃತ್ವದಲ್ಲಿ ಬ್ರಹ್ಮಪುರ ಪಿಐ ಸೋಮಲಿಂಗ ಕಿರದಳ್ಳಿ, ಪಿಎಸ್‌ಐ ಯಶೋಧಾ, ಸಿಬ್ಬಂದಿಗಳಾದ ಪ್ರಕಾಶ, ಕೇಸುರಾಯ, ವಿಶ್ವನಾಥ, ಅಶೋಕ, ರಾಮು ಪವಾರ, ಶಶಿಕಾಂತ, ಶಿವಶರಣಪ್ಪ ಮತ್ತು ನವೀನಕುಮಾರ ಅವರು ದಾಳಿ ನಡೆಸಿ ಇಬ್ಬರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

# ಪಟ್ಟದ್ದೇವರ 135ನೆಯ ಜಯಂತ್ಯುತ್ಸುವ ಇಂದು

(ಮಲ್ಲಪ್ಪಾ ಟಿ ಹಾಸಗೊಂಡ)



ಭಾಲ್ಕಿ: ಗಡಿಭಾಗದ ಮಹಾನ ಚೇತನ, ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 135ನೆಯ ಜಯಂತ್ಯುತ್ಸವ ಆಚರಣೆಗೆ ಪಟ್ಟಣ ಸಜ್ಜುಗೊಂಡಿದೆ.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಬೃಹತ್ ವೇದಿಕೆ ಮಂಟಪ ಸಿದ್ಧಗೊಂಡಿದ್ದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮತ್ತು ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಭಾನುವಾರ ದಿನವೀಡಿ ಕಾರ್ಯಕ್ರಮ ನೆರವೇರಲಿವೆ.

ಪಟ್ಟದ್ದೇವರ ಧ್ಯಾನ ಮಂದಿರ ಹೂವುಗಳಿಂದ ಅಲಂಕೃತಗೊಂಡಿದೆ. ಎಲ್ಲೆಡೆ ಕಾವಿ ಬಣ್ಣದ ಕಮಾನುಗಳು, ಸ್ವಾಗತ ಕೋರುವ ಬ್ಯಾನರ್, ಕಟೌಟಗಳು ರಾರಾಜಿಸುತ್ತಿವೆ.

ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಅಪ್ಪಟ್ಟ ಬಸವಣ್ಣನವರ ಅನುಯಾಯಿ ಆಗಿದ್ದರು. ಜೀವನದುದ್ದಕ್ಕೂ ಬಸವತತ್ವ ಪಾಲಿಸಿದರು. ಅಂತಹ ಪೂಜ್ಯರ ಜಯಂತ್ಯುತ್ಸವ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಮಾರ್ಗದರ್ಶನದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ.

**-ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ಪಟ್ಟಣದಲ್ಲಿ ಹಬ್ಬದ ಕಳೆ ಕಾಣಿಸಿಕೊಂಡಿದ್ದು ಪಟ್ಟದ್ದೇವರ ಜಯಂತ್ಯುತ್ಸವ ಆಚರಣೆಗೆ ಕ್ಷಣಗಣನೇ ಸಾಕ್ಷಿಯಾಗಿದೆ.

ಕಳೆದ ಡಿ.12 ರಿಂದ ಡಾ.ಚನ್ನಬಸವ ಪಟ್ಟದ್ದೇವರ ಜನ್ಮಭೂಮಿ ಕಮಲಗರದಿಂದ ಬಸವಜ್ಯೋತಿ ಪಾದಯಾತ್ರೆ ಕೈಗೊಳ್ಳುವ ಮೂಲಕ ಆರಂಭಗೊಂಡ ಸಿದ್ಧತೆಗಳು ನಿರಂತರವಾಗಿ ನಡೆದಿವೆ.&ಟಿಛಿ;

ಜೀವನ ದರ್ಶನ ಪ್ರವಚನ, ಚನ್ನಬಸವ ಮ್ಯಾರಥಾನ್, ಜ್ಞಾನ ವಿಜ್ಞಾನ ಮೇಳ, ಶರಣರ ವೇಷಭೂಷಣ, ವಚನ ಗಾಯನ, ನಿಬಂಧ ಸೇರಿ ವಿವಿಧ ಸ್ಪರ್ಧೆಗಳು ಆಯೋಜಿಸಿದ್ದು ಜಯಂತ್ಯುತ್ಸವ ಆಚರಣೆಗೆ ಮತ್ತಷ್ಟು ಮೆರಗು ತಂದು ಕೊಟ್ಟಿವೆ.

**ಸಮಾರಂಭದ ವಿವರ :**

ಬೆಳಿಗ್ಗೆ 6ಕ್ಕೆ ಹಿರೇಮಠ ಸಂಸ್ಥಾನದಿಂದ ಚನ್ನಬಸವಾಶ್ರಮದ ವರೆಗೂ ಬಸವ ಪ್ರಭಾತ ಫೇರಿ, ಬೆಳಿಗ್ಗೆ 7ಕ್ಕೆ ಷಟ್‌ಸ್ಥಲ ಧ್ವಜರೋಹಣ, ಬೆಳಿಗ್ಗೆ 10.30ಕ್ಕೆ ತೊಟ್ಟಿಲು ಕಾರ್ಯಕ್ರಮ, ಬೆಳಿಗ್ಗೆ 11ಕ್ಕೆ ಉದ್ಘಾಟನಾ ಸಮಾರಂಭ, ಮಧ್ಯಾಹ್ನ 1ಕ್ಕೆ ಪ್ರಶಸ್ತಿ ಪ್ರದಾನ ಮತ್ತು ಗ್ರಂಥ ಲೋಕಾರ್ಪಣೆ ಮತ್ತು ಸಾಯಂಕಾಲ 4ಕ್ಕೆ ಸಮಾರೋಪ ಸಮಾರಂಭ ಜರುಗಲಿದೆ. ನಂತರ ರಾತ್ರಿ 8ಕ್ಕೆ ಮಹಾಕ್ರಾಂತಿ ನಾಟಕ ಪ್ರದರ್ಶನದೊಂದಿಗೆ ಪಟ್ಟದ್ದೇವರ ಜಯಂತ್ಯುತ್ಸವಕ್ಕೆ ತೆರೆಬೀಳಲಿದೆ.

ಐದು ಗ್ರಂಥ ಬಿಡುಗಡೆ

ಸಾಹಿತಿ ಕೋರಗಲ್ ವಿರೂಪಾಕ್ಷಪ್ಪ ಬರೆದ ಕಲ್ಯಾಣದ ಉಳಿವು, ಡಾ.ನಾಗರಾಜ ಹೀರಾ ಬರೆದ ಚಿನ್ನದ ನಾಡಿನ ಶರಣರು, ಪ್ರೊ.ಭಾಲಚಂದ್ರ ಜಯಶೆಟ್ಟಿ ಹಿಂದಿ ಭಾಷೆಯಲ್ಲಿ ಅನುವಾದಿಸಿದ ಗುರುಚನ್ನಬಸವ ಮತ್ತು ಸಂಗಮೇಶ ಎನ್ ಜವಾದಿ ಅವರು ಬರೆದ ಕಾಯಕ ಯೋಗಿಗಳು ಗ್ರಂಥ ಲೋಕಾರ್ಪಣೆಗೊಳ್ಳಲಿವೆ.

ಭಕ್ತರಿಗೆ ಹುಗ್ಗಿಯೂಟ

ಪಟ್ಟದ್ದೇವರ ಜಯಂತ್ಯುತ್ಸವದಲ್ಲಿ ಭಾಗವಹಿಸುವ ಭಕ್ತರಿಗಾಗಿ ಹುಗ್ಗಿ ಊಟದ ವ್ಯವಸ್ಥೆ ಮಾಡಲಾಗಿದೆ. ವೇದಿಕೆ ಬಲಭಾಗದಲ್ಲಿ ಮಹಿಳೆಯರು ಮತ್ತು ಪುರುಷರಿಗಾಗಿ ಪ್ರತ್ಯೇಕವಾಗಿ ಊಟದ ಕೌಂಟರ್ ವ್ಯವಸ್ಥೆ ಮಾಡಲಾಗಿದೆ. ಭಕ್ತರಿಗೆ ಕುಟ್ಟಿದ ಹುಗ್ಗಿ, ಅನ್ನ, ಸಾರು ಸವಿಯುವ ಭಾಗ್ಯ ಒದಗಿ ಬರಲಿದೆ. ಗಡಿ ಜಿಲ್ಲೆ ಬೀದರ್ ಅಷ್ಟೇ ಅಲ್ಲದೇ ನೆರೆಯ ರಾಜ್ಯದ ಭಕ್ತರು ಅಪಾರ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆ ಇದೆ.

## ಕೂಸಿನ ಮನೆಗಳು ಮಕ್ಕಳ ಬೌದ್ಧಿಕ ಬೆಳವಣಿಗೆಗೆ ಸಹಕಾರಿ: ಇಒ ದುಂಡಪ್ಪ ತುರಾದಿ



(ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮಕ್ಕಳಬೌದ್ಧಿಕಬೆಳವಣಿಗೆಗೆ ಕೂಸಿನ ಮನೆಗಳು ಗ್ರಾಮೀಣ ಭಾಗಕ್ಕೆ ಸಹಕಾರಿಯಾಗಿದೆಂದು ಕೊಪ್ಪಳ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪತುರಾದಿ ಕರೆನೀಡಿದರು.

ಅವರು ಶನಿವಾರ ಕೊಪ್ಪಳ ತಾಲೂಕ ಪಂಚಾಯತಿಯ ಸಾಸಭಾಂಗಣದಲ್ಲಿ ಕೂಸಿನ ಮನೆಯ ಆರೈಕೆದಾರರಿಗೆ ಏರ್ಪಡಿಸಿದ್ದ 7 ದಿನಗಳ ತರಬೇತಿಯ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.


ಕೂಸಿನ ಮನೆಗಳು ಮಕ್ಕಳಿಗೆ ಬೇಕಾದ ಕಲಿಕಾ ಪೂರಕ ಚಟುವಟಿಕೆಗಳನ್ನು ಜರುಗಿಸಲು ನಾನಾ ರೀತಿಯ ಸೌಲಭ್ಯಗಳನ್ನು ಒದಗಿಸಲು ಗ್ರಾಮ ಪಂಚಾಯತಿಗೆ ಬಿಡುಗಡೆಯಾದ ಅನುದಾನದಲ್ಲಿ ಅಭಿವೃದ್ಧಿಪಡಿಸಲಾಗಿದ್ದು ಮಕ್ಕಳ ಆರೈಕೆದಾರರು ಕೂಸಿನ ಮನೆಗೆ ದಾಖಲಾಗುವ ಮಕ್ಕಳನ್ನು ಸರಿಯಾದ ರೀತಿಯಲ್ಲಿ ಆರೈಕೆ ಮಾಡಬೇಕೆಂದರು. ಕೂಸಿನ ಮನೆಯ ಮಕ್ಕಳನ್ನು ತಮ್ಮ ಮಕ್ಕಳಂತೆ ಆರೈಕೆ ಮಾಡಿ ಅವರಿಗೆ ಆಹಾರವನ್ನು ಕ್ರಮಬದ್ಧವಾಗಿ ನೀಡುವಂತೆ ತಿಳಿಸಿದರು. ಕೂಸಿನ ಮನೆಗೆ ನಿಗದಿಪಡಿಸಲಾದ ಎಲ್ಲಾ ದಾಖಲಾತಿಗಳನ್ನು ಕಡ್ಡಾಯವಾಗಿ ನಿರ್ವಹಿಸಬೇಕು. ಮಕ್ಕಳಿಗೆ ಸಂಬಂಧಿಸಿದ ವಿಷಯವಾಗಿರುವದರಿಂದ ಯಾವುದೇ ರೀತಿಯಾಗಿ ನಿರ್ಲಕ್ಷ್ಯವಹಿಸುವಂತಿಲ್ಲವೆಂದರು. ಪ್ರತಿ ತಿಂಗಳಿಗೊಮ್ಮೆ ಮಕ್ಕಳ ಆರೋಗ್ಯತಪಾಸಣೆಜರುಗಿಸುವದರ ಜೊತೆಗೆ ಪ್ರತಿ ಮಗುವಿನ ತೂಕ ಮತ್ತು ಆರೋಗ್ಯದ ಬಗ್ಗೆ ನಿಗಾವಹಿಸಲು ಪಾಲಕರಿಗೆ ಮಾಹಿತಿ ನೀಡಬೇಕೆಂದರು.

ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ ಮಾತನಾಡಿ, 7 ದಿನಗಳ ಕಾಲ ತರಬೇತಿಯನ್ನು ನೀಡಲಾಗಿದ್ದು ಆರೈಕೆದಾರರು ಆಸಕ್ತವಹಿಸಿ ಕೂಸಿನ ಮನೆಯನ್ನು ಮಾದರಿ ಕೂಸಿನ ಮನೆಯನ್ನಾಗಿ ನಿರ್ಮಿಸುವಲ್ಲಿ ನಿಮ್ಮಗಳ ಪಾತ್ರ ಬಹು ಮುಖ್ಯವಾಗಿದೆ. ಮಕ್ಕಳಿಗೆ ಪಠ್ಯೇತರ ಚಟುವಟಿಕೆಗಳನ್ನು ಜರುಗಿಸುವದರಿಂದ ಮಕ್ಕಳ ಬೌದ್ಧಿಕ ಬೆಳವಣಿಗೆಯಾಗುತ್ತದೆ ಎಂದು ಹೇಳಿದರು.

ಶಿಬಿರಾರ್ಥಿಗಳು ತರಬೇತಿ ಕುರಿತು ಅನಿಸಿಕೆ ವ್ಯಕ್ತಪಡಿಸಿದರು. ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್, ತಾಲೂಕ ಯೋಜನಾಧಿಕಾರಿ ರಾಜೇಸಾಬ ನದಾಫ್, ವ್ಯವಸ್ಥಾಪಕ ಬಸವರಾಜ ಪಾಟೀಲ್, ವಿಷಯ ನಿರ್ವಾಹಕ ಬಸವರಾಜ ಬಳಿಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಮಾಸ್ಟರ್ ಟ್ರೈನರಗಳಾದ ಜಯಶ್ರೀ, ಉಷಾ, ಎಚ್. ಎಸ್.ಹೊನ್ನುಂಚಿ ಸೇರಿದಂತೆ ಶಿಬಿರಾರ್ಥಿಗಳು ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಇಂದು 110/ 33 /11 ಕೆ.ವಿ ನಲ್ಲಿ ವಿದ್ಯುತ್ ವ್ಯತ್ಯಯ

( ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ:ಕುಕನೂರತಾಲೂಕಿನಲ್ಲಿ ತುರ್ತುಕಾಮಗಾರಿಕೈಗೆತ್ತಿಕೊಳ್ಳುತ್ತಿರುವ ನಿಮಿತ್ಯ ಭಾನುವಾರ ವಿದ್ಯುತ್ ಸರಬರಾಜಿನಲ್ಲಿವ್ಯತಯವಾಗಲಿದೆ ಎಂದು ಜೆಸ್ಕಾಂ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿರುತ್ತದೆ.

ಪಟ್ಟಣದಿಂದ ಸರಬರಾಜಾಗುವ ಎಲ್ಲಾ ಲೈನುಗಳು ದಿನಾಂಕ: 22-12-2024 ರ ಭಾನುವಾರ ದಂದು ಕುಕನೂರ 110/33/11ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಕಾಮಗಾರಿ ಕೈಗೆತ್ತಿಕೊಳ್ಳುವಪ್ರಯುಕ್ತಮುಂಜಾನೆ 10 ಘಂಟೆಯಿಂದ ಸಾಯಂಕಾಲ 05:00 ಘಂಟೆಯವರೆಗೆ ಕುಕನೂರ ವ್ಯಾಪ್ತಿಗೆ ಒಳಪಡುವ ಎಲ್ಲಾ ಮಾರ್ಗಗಳಿಗೆ ವಿದ್ಯುತ್ ವ್ಯತ್ಯಯವಾಗಲಿದ್ದು ಕಾರಣ ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸಬೇಕೆ ಹಾಗೂ ಸದರಿ ಕಾಮಗಾರಿ ಮುಕ್ತಾಯವಾದ ನಂತರ ಯಾವುದೇ ಮುನ್ಸೂಚನೆ ನೀಡದೆ ವಿದ್ಯುತ್ ಸರಬರಾಜು ಮಾಡಲಾಗುವುದು ಸದರಿ ಕಾಮಗಾರಿಯ ವೇಳೆ ಗ್ರಾಹಕರು ಯಾವುದೇ ವಿದ್ಯುತ್ ಕೆಲಸ ಕಾರ್ಯಗಳನ್ನು ಮಾಡಬಾರದು ಒಂದು ವೇಳೆ ವಿದ್ಯುತ್ ಕೆಲಸ ಮಾಡುತ್ತಿದ್ದರೆ ಅದಕ್ಕೆ ಜೆಸ್ಕಾಂ ಕಾರಣ ವಾಗುವುದಿಲ್ಲಾ. ಎಂದು ಕುಕನೂರು ಪಟ್ಟಣದ ಜೆಸ್ಕಾಂ ಇಲಾಖೆಯ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ),ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಗುಡ್‌ವಿಲ್ ಶಾಲೆಯಲ್ಲಿ ಧ್ಯಾನ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 21:- ಇಲ್ಲಿಯ ಗುಡ್‌ವಿಲ್‌ಪಬ್ಲಿಕ್ ಶಾಲೆಯಲ್ಲಿ ಶನಿವಾರ ಅಂತರರಾಷ್ಟ್ರೀಯ ಧ್ಯಾನ ದಿನ ಆಚರಿಸಲಾಯಿತು.

ಧ್ಯಾನದಲ್ಲಿ ಅದ್ಭುತ ಶಕ್ತಿ ಇದೆ. ಹಿಂದೆ ಋಷಿ, ಮುನಿಗಳು ಧ್ಯಾನದ ಮೂಲಕವೇ ಮಹತ್ತರ ಸಾಧನೆ ಮಾಡಿದ್ದರು ಎಂದು ಪ್ರಾಚಾರ್ಯೆ ಪ್ರೇಮಾಕುಮಾರಿ ಹೇಳಿದರು. ಧ್ಯಾನದಿಂದ ಶಾಂತಿ,ಸಮಾಧಾನ ದೊರಕುತ್ತದೆ. ಏಕಾಗ್ರತೆಯನ್ನು ಕಾಯ್ದುಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಸಾಮೂಹಿಕ ಧ್ಯಾನ ಮಾಡಿದರು. ಶಾಲೆಯ ಬೋಧಕ,ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ವರ್ತಮಾನದಲ್ಲಿ ನೈತಿಕ ಶಿಕ್ಷಣದ ಅಗತ್ಯವಿದೆ: ಶ್ರೀಶೈಲಂ ಜಗದ್ಗುರು



(ಎಂ.ರಫೀಕ್ ಪಟೇಲ್)
ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ವರ್ತಮಾನದಲ್ಲಿ ವ್ಯವಸ್ಥೆ ಅನೇಕ ಅವಾಂತರಗಳಿಂದ ಕೂಡಿದ್ದು,ಅವುಗಳಿಂದಪಾರಾಗಲು ನೈತಿಕ ಶಿಕ್ಷಣದ ಅವಶ್ಯಕತೆ ಇದೆ ಎಂದು ಶ್ರೀಶೈಲ ಜಗದ್ಗುರು 1008 ಡಾ. ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ನುಡಿದರು.

ನಗರದ ಹೊರವಲಯದಲ್ಲಿರುವ ಆರ್ಯಭಟ್ಟ ಅಂತರರಾಷ್ಟ್ರೀಯ ಅಕಾಡೆಮಿ ಶಾಲೆಗೆ ಭೇಟಿ ನೀಡಿದ ಅವರು ಅಲ್ಲಿ ನಡೆದಿರುವ ವಿಜ್ಞಾನ ವಸ್ತು ಪ್ರದರ್ಶನವನ್ನು ವಿಕ್ಷೀಸಿ, ಆಶೀರ್ವಚನ ನೀಡಿದ ಅವರು, ನಾವು ಇಂದು ದೇಶದಲ್ಲಿ ಹಲವಾರು ಕ್ಷೇತ್ರಗಳಲ್ಲಿ ಸಾಕಷ್ಟು ಅಭಿವೃದ್ಧಿ ಸಾಧಿಸಿದರು. ಮಾನವೀಯ ಮೌಲ್ಯಗಳು ಕುಸಿದು ಹೋಗುತ್ತಿವೆ ಎಂಬ ಆತಂಕ ಇಂದು ಎಲ್ಲರನ್ನು ಕಾಡುತ್ತಿದೆ. ಕಾರಣ ಶಿಕ್ಷಣ ಸಂಸ್ಥೆಗಳು ಮೂಲ ಉದ್ದೇಶಗಳನ್ನು ಸಕಾರಾತ್ಮಕವಾಗಿ ಜಾರಿಗೊಳಿಸಿದಾಗ ಮಾತ್ರ ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಾಣವಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಪ್ರಾಚಿನ ಕಾಲದಲ್ಲಿ ನಮ್ಮ ಭಾರತೀಯ ಪರಂಪರೆಯಲ್ಲಿ ಗುರುಕುಲ ಶಿಕ್ಷಣ ಪದ್ದತಿ ಇತ್ತು. ಅಲ್ಲಿ ಗುರು-ಶಿಷ್ಯರು ಅತ್ಯಂತ ಗೌರವಭಾವದಿಂದ ವಿದ್ಯಾರ್ಥಿಗಳು ಗುರುಗಳನ್ನು ಕಾಣುತ್ತಿದ್ದರು. ಗುರುಗಳು ಕೂಡ ವಿದ್ಯಾರ್ಥಿಗಳ ಮೇಲೆ ಮಮತೆಯಿಂದ ವಾತ್ಸಲ್ಯ ಭಾವನೆಯಿಂದ ವಿದ್ಯಾರ್ಜನೆ ಜೊತೆಗೆ ಸಂಸ್ಕಾರವನ್ನು ನೀಡುತ್ತಿದ್ದರು ಎಂದರು.

ಶಿಕ್ಷಕರು ಶಾಲೆಯಲ್ಲಿ ವಿದ್ಯಾರ್ಥಿಗಳ ಮೇಲೆ ಒತ್ತಡ ಹೇರಬಾರದು ಸಮಾಧಾನದಿಂದಲೇ ಅವರಲ್ಲಿರುವ ಆಸಕ್ತಿ,ಸಾಮರ್ಥ್ಯವನ್ನು ಸೂಕ್ಷ್ಮವಾಗಿ ಗಮನಿಸಿ, ಪ್ರೋತ್ಸಾಹ ನೀಡಬೇಕು. ಅಂದಾಗ ಮಾತ್ರ ಆ ಮಕ್ಕಳು ಆತ್ಮವಿಶ್ವಾಸದಿಂದ ಅಭ್ಯಾಸ ಮಾಡುವ ಜೊತೆಗೆ ಇತರ ಚಟುವಟಿಕೆಗಳಲ್ಲಿ ನಿರಂತರ ಸಾಧನೆ ಮಾಡಿ ಗುರಿ ತಲುಪಿ ಶಾಲೆಗೆ ಹಾಗೂ ನಾಡಿಗೆ ಕೀರ್ತಿ ತರುತ್ತಾರೆ ಎಂದು ಸಲಹೆ ನೀಡಿದರು.

ಈ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಜೊತೆಗೆ ಉತ್ತಮ ಪರಿಸರ ನಿರ್ಮಾಣ ಮಾಡಿ ನಿರಂತರ ಅವರ ಜ್ಞಾನಾರ್ಜನೆಗೆ ಪೂರಕ ಚಟುವಟಿಕೆಗಳನ್ನು ನಡೆಸುತ್ತಿರುವುದು ಬದಲಾವಣೆಯ ಸಂಕೇತ ಇದು ಇಂದಲ್ಲಾ ನಾಳೆ ಉತ್ತಮ ಫಲಿತಾಂಶ ನಿಮಗೆ ಸಿಗಲಿದೆ ಎಂದು ಹಾರೈಸಿದರು.

ಅಕಾಡೆಮಿಯ ಅಧ್ಯಕ್ಷ ಸುಧಾಕರರೆಡ್ಡಿ ಮಾಲಿ ಪಾಟೀಲ್ ಅನಪೂರ ಮಾತನಾಡಿ, ನಾನು ಕಷ್ಟದಲ್ಲಿ ಬೆಳೆದು ಶಿಕ್ಷಕರಾಗಿ ಮೊದಲು ಕೆಲಸ ಮಾಡಿದ್ದೇನೆ. ಪ್ರಸಕ್ತ ದಿನಗಳಲ್ಲಿ ಶೈಕ್ಷಣಿಕವಾಗಿ ಹಿಂದುಳಿದಿರುವ ಜಿಲ್ಲೆಯ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದೇ ನಮ್ಮ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಲಕ್ಷ್ಮೀಪುರದ ಮರಡಿ ಮಲ್ಲಿಕಾರ್ಜುನ ಸಂಸ್ಥಾನ ಮಠದ ಪೀಠಾಧಿಪತಿ ಡಾ. ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ಮುದನೂರು ಕಂಠಿ ಹನುಮಾನ ದೇವಸ್ಥಾನದ ಪೀಠಾಧಿಪತಿ ಮಲ್ಲಿಕಾರ್ಜುನ ಶಿವಾಚಾರ್ಯರು, ಶ್ರೀಶೈಲ ಅಂಬಿಕಾ ನಗರದ ಶ್ರೀಗಳಾದ ವಿಶ್ವರಾಧ್ಯ ಪಂಡಿತಾರಾಧ್ಯ ಮಹಾಸ್ವಾಮೀಜಿ,ಮಾತೆ ಲಿಲಾವತಿ, ಜಮಖಂಡಿಯ ಗೌರಿಶಂಕರ ಮಹಾಸ್ವಾಮೀಜಿ, ಜಿ.ಪಂ ಮಾಜಿ ಸದಸ್ಯ ಶ್ರೀನಿವಾಸರೆಡ್ಡಿ ಪಾಟೀಲ್ ಚನ್ನೂರ, ಪಿ. ಅರವಿಂಧಾಕ್ಷಣ, ಪ್ರಾಂಶುಪಾಲರಾದ ಮಾಧವಿ ಸಿಂಗ್, ರಮೇಶರೆಡ್ಡಿ, ಪ್ರದೀಪ್, ನಂದಕಿಶೋರ್, ಭಾರ್ಗವಿ, ಶಿವಾನಂದ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬೆಳಗಾವಿ ಎಐಸಿಸಿ ಅಧಿವೇಶನ ಯಶಸ್ವಿಗೆ ಸಹಕರಿಸಿ : ಶಾಸಕ ತುನ್ನೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಬರುವ ಡಿಸೆಂಬರ್ 26 - 27 ರಂದು ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಬೆಳಗಾವಿಯಲ್ಲಿ ನಡೆಯುವ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಶತಮಾನೋತ್ಸವ ಐತಿಹಾಸಿಕ ಕಾರ್ಯಕ್ರಮ ಯಶಸ್ವಿಗೆ ಎಲ್ಲರೂ ಸಹಕರಿಸಬೇಕೆಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಮನವಿ ಮಾಡಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಈ ಹಿಂದೆ ಮಹಾತ್ಮ ಗಾಂಧಿಯವರ ನೇತೃತ್ವದಲ್ಲಿ 100 ವರ್ಷಗಳ ಹಿಂದೆ ಎಐಸಿಸಿ ಕಾಂಗ್ರೆಸ್ ಸಮಾವೇಶ ಜರುಗಿತ್ತು. ಅದಾದ ನಂತರ ಸದ್ಯ ನಡೆಯುತ್ತಿರುವ ಮಹತ್ವದ ಕಾರ್ಯಕ್ರಮ ನಮ್ಮೆಲ್ಲರಿಗೆ ಸ್ಫೂರ್ತಿ ನೀಡಲಿದೆ ಎಂದು ಹೇಳಿದರು.

ಈಗಾಗಲೇ ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನಪರ ಯೋಜನೆಗಳನ್ನು ಜನರಿಗೆ ನೀಡಿದೆ ಪರಿಣಾಮ ಇತ್ತೀಚೆಗೆ ನಡೆದ ಉಪಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸುವ ಮೂಲಕ ಪಕ್ಷದ ವರ್ಚಸ್ಸು ಹೆಚ್ಚಾಗಿದೆ ಎಂದು ಅಭಿಪ್ರಾಯ ಪಟ್ಟರು.

ಮಾಜಿ ಸಚಿವ ಹಾಗೂ ರಾಜ್ಯ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಮಾತನಾಡಿ ಡಾ. ಖರ್ಗೆಯವರು ಎಐಸಿಸಿ ಅಧ್ಯಕ್ಷರಾದ ನಂತರ ದೇಶದಲ್ಲಿ ಕಾಂಗ್ರೆಸ್ ಪಕ್ಷ ಉತ್ತಮವಾಗಿ ಸಂಘಟನೆಯಾಗಿದೆ ಅವರ ನೇತೃತ್ವದಲ್ಲಿ ಎಐಸಿಸಿ ಸಮಾವೇಶ ನಡೆಯುತ್ತಿರುವುದರಿಂದ ಬರುವ ದಿನಗಳಲ್ಲಿ ಪಕ್ಷ ಸಂಘಟನೆಗೆ ನೀಲಿ ನಕ್ಷೆ ಸಿದ್ಧವಾಗಿ ಪ್ರಾಮಾಣಿಕವಾಗಿ ಅನುಷ್ಠಾನಕ್ಕೆ ಆದ್ಯತೆ ನೀಡಲಾಗುತ್ತದೆ ಎಂದು ತಿಳಿಸಿದರು. ದೇಶದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಜನವಿರೋದಿ ಆಡಳಿತದಿಂದ ಜನರು ಬೇಸತ್ತಿದ್ದಾರೆ. ನಿರುದ್ಯೋಗ ಸಮಸ್ಯೆ ಹೆಚ್ಚಾಗಿದೆ. ಯುವಕರು ಕೂಡ ನಿರಾಶರಾಗಿದ್ದಾರೆ, ಬಿಜೆಪಿ ಪಕ್ಷದ ವರ್ಚಸ್ಸು ಕುಸಿದಿದೆ ಬರುವ ದಿನಗಳಲ್ಲಿ ಕಾಂಗ್ರೆಸ್‌ಗೆ ಲಾಭವಾಗಿ ಖರ್ಗೆಯವರು ಪ್ರಧಾನ ಮಂತ್ರಿಯಾಗುವ ಯೋಗವಿದೆ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರೆಡ್ಡಿ ಪಾಟೀಲ ಅನಪೂರ ಮಾತನಾಡಿ ಡಿ.27 ರಂದು ನಡೆಯುವ ಸಮಾವೇಶಕ್ಕೆ ಜಿಲ್ಲೆಯಿಂದ 500 ಕ್ಕೂ ಹೆಚ್ಚು ಮುಖಂಡರು ಹಾಗೂ ಪ್ರಮುಖ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಗುರುಮಿಠಕಲ್ ಮತಕ್ಷೇತ್ರದ ಕಾಂಗ್ರೆಸ್ ಉಸ್ತುವಾರಿ ರಾಜಗೋಪಾಲರೆಡ್ಡಿ ಚಿದಾನಂದಪ್ಪ ಕಾಳೆಬೆಳಗುಂದಿ, ಡಾ. ಭೀಮಣ್ಣ ಮೇಟಿ, ಸಾಯಿಬಣ್ಣ ಬೋರಬಂಡ, ವಿನಾಯಕ ಮಾಲಿ ಪಾಟೀಲ, ಚಂದ್ರಶೇಖರ ದಂಡಿನ್, ಶರಣಪ್ಪ ಮಾನೇಗರ್, ವಿಶ್ವನಾಥ ನೀಲಹಳ್ಳಿ, ಸ್ಯಾಮಸನ್ ಮಾಳಿಕೇರಿ, ಕೃಷ್ಣ ಚಪೇಟ್ಲಾ, ನಿರಂಜನರೆಡ್ಡಿ, ನಿಂಗರಾಜ ಬಾಚಿಮಟ್ಟಿ, ಸುದರ್ಶನ ನಾಯಕ್, ಮಲ್ಲಣ್ಣ ದಾಸನಕೇರಿ, ಬಸವರಾಜಪ್ಪ ಬಾಗ್ಲಿ, ಮಂಜುಳಾ ಗೂಳಿ, ಕಳಸಪ್ಪ ಸಾವೂರ, ವೈಜನಾಥರೆಡ್ಡಿ ಹತ್ತಿಕುಣಿ, ಸಂಜೀವ ಕುಮರ ಕಾವಲಿ, ಮಲ್ಲಿಕಾರ್ಜುನ ಈಟೆ, ವೆಂಕಟರೆಡ್ಡಿ ವನಕೇರಿ, ಲಚಮರೆಡ್ಡಿ, ನೀಲಕಂಠ ಬಡಿಗೇರ, ಭೀಮರಾಯ ಠಾಣಗುಂದಿ, ಹೊನ್ನೇಶ ಬಳಿಚಕ್ರ ಸೇರಿದಂತೆ ಜಿಲ್ಲೆಯ ಮುಖಂಡರು ಪ್ರಮುಖ ಕಾರ್ಯಕರ್ತರು ಭಾಗವಹಿಸಿದ್ದರು.

## ನಿರೀಕ್ಷೆಗೆ ಮೀರಿ ವಿಜ್ಞಾನ ವಸ್ತು ಪ್ರದರ್ಶನ ವಿಕ್ಷೀಸಿದ ವಿದ್ಯಾರ್ಥಿಗಳು



(ಎಂ.ರಫೀಕ್ ಪಟೇಲ್)
ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಗರದ ನಗರದ ಹೊರವಲಯದಲ್ಲಿರುವ ಆರ್ಯಭಟ್ಟ ಅಂತರರಾಷ್ಟ್ರೀಯ ಅಕಾಡೆಮಿ ಶಾಲೆಯಲ್ಲಿ ಜಿಲ್ಲಾ ಕೇಂದ್ರದಲ್ಲಿ ಪ್ರಥಮ ಬಾರಿಗೆ ಕಳೆದ ಮೂರು ದಿನಗಳಿಂದ ನಡೆಯುತ್ತಿರುವ ವಿಜ್ಞಾನ ವಸ್ತು ಪ್ರದರ್ಶನ ವಿಕ್ಷೀಸಲು ಜಿಲ್ಲೆಯ ನಾನಾ ಭಾಗಗಳ ಪ್ರೌಢ ಶಾಲೆಗಳ ವಿದ್ಯಾರ್ಥಿಗಳು ನಿರೀ-ಕ್ಷೆಗೆ ಮೀರಿ ಆಗಮಿಸಿ ಅಗತ್ಯ ಮಾಹಿತಿ ಪಡೆದರು. ವಿವಿಧ ಶಾಲೆಗಳ ವಿದ್ಯಾರ್ಥಿಗಳು ವಿಜ್ಞಾನ, ಗಣಿತ, ಭೌತಶಾಸ್ತ್ರ, ರಸಾಯನ ಶಾಸ್ತ್ರ, ಜೀವ ಶಾಸ್ತ್ರ, ಕಂಪ್ಯೂಟರ್ ಸೈನ್ಸ್ ಮತ್ತು ಬಯೋಟೆಕ್ನಾಲಜಿ, ವಿಷಯಗಳಿಗೆ ಸಂಬಂಧಿಸಿದಂತೆ ವಿಜ್ಞಾನ ಮಾದರಿಗಳನ್ನು ರಚಿಸಿಕೊಂಡು ಪ್ರದರ್ಶನದಲ್ಲಿ ವಿಕ್ಷಣೆಗೆ ಇಟ್ಟದರು. ಬೇಟಿ ನೀಡಿದ ವಿದ್ಯಾರ್ಥಿಗಳು ಪ್ರತಿಯೊಂದ ವಿಜ್ಞಾನ ಮಾದರಿಯನ್ನು ವಿಕ್ಷೀಸಿ ಅನುಭವ ವಿದ್ಯಾರ್ಥಿಗಳಿಂದ ಅಗತ್ಯ ಮಾಹಿತಿ ಪಡೆದರು.

ವಿಷೇಶವಾಗಿ ಐತಿಹಾಸಿಕ ನಾಣ್ಯಗಳ ನಾಣ್ಯಶಾಸ್ತ್ರಜ್ಞ ಹೈದ್ರಬಾದನ ರಮೇಶ ಕುಮಾರ್, ಅವರ ಪ್ರಾಚೀನ ವಿಜಯ ನಗರ, ಪದ್ಮಾನಾಯಕ, ಚಾಲುಕ್ಯರ, ರಾಷ್ಟ್ರ ಕೂಟರ, ಚೋಳರ, ಟಿಪ್ಪು ಸುಲ್ತಾನ, ಮೋಘಲರ, ಕಾಕತೀಯ, ಮರಾಠ, ದಿಲ್ಲಿ ಸುಲ್ತಾನರ, ಶಾತವಾನರ್, ಮೊದಲಾದ ಸಾಮ್ರಾಜ್ಯಗಳ ಅಧಿಕಾರ ಅವಧಿಯಲ್ಲಿ ಚಲಾವಣೆಯಲ್ಲಿದ್ದ ಬೆಳ್ಳಿ, ಬಂಗಾರ, ಇತರ ಸ್ಮರಣೀಯ ನಾಣ್ಯಗಳು, ನೋಟುಗಳನ್ನು ಹಾಗೂ 250 ವಿದೇಶಗಳ ನೋಟುಗಳನ್ನು ವಿಕ್ಷೀಸಿದ ವಿದ್ಯಾರ್ಥಿಗಳು ತಜ್ಞರಿಂದ ಮಾಹಿತಿ ಪಡೆದರು. ಎಎಮ್‌ಡಿ ಬೆಂಗಳೂರ ಸಂಸ್ಥೆಯ ಪಂಚಮುಖಿ ಅವರು ಪ್ರದರ್ಶನಕ್ಕೆ ಇಟ್ಟಿದ ವಿವಿಧ ಖನಿಜ ವಸ್ತುಗಳನ್ನು ವಿಕ್ಷೀಸಿದ ವಿದ್ಯಾರ್ಥಿಗಳು ಭೂಗರ್ಭದಲ್ಲಿ ಇರುವ ಮಹತ್ವದ ಖನಿಜಗಳ ಸಂಪತ್ತಿನ ಸಮಗ್ರ ವಿವರ ಪಡೆದು ಅಚ್ಚರಿ ವ್ಯಕ್ತಪಡಿಸಿದರು.

ಅಕಾಡೆಮಿಯ ಅಧ್ಯಕ್ಷ ಸುಧಾಕರರೆಡ್ಡಿ ಮಾಲಿ ಪಾಟೀಲ್ ಅನಪೂರ ಮಾತನಾಡಿ,ಹಲವಾರು ದಿನಗಳಿಂದ ನಮ್ಮ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಪರಿಶ್ರಮದಿಂದ ವಿಜ್ಞಾನ ವಸ್ತು ಪ್ರದರ್ಶನಕ್ಕೆ ಅಗತ್ಯ ಸಿದ್ದತೆಗಳನ್ನು ಮಾಡಿದ್ದೇವೆ. ಜಿಲ್ಲೆಯ ವಿದ್ಯಾರ್ಥಿಗಳಿಗೆ ದೇಶದ ಇತಿಹಾಸ, ವಿಜ್ಞಾನ, ಗಣಿತ ಇನ್ನಿತರ ವಿಷಯಗಳ ಬಗ್ಗೆ ವಿಷಯ ತಜ್ಞರಿಂದ ಅಗತ್ಯ ಉಪನ್ಯಾಸ, ಮಾಹಿತಿ ನೀಡುವುದೇ ನಮ್ಮ ಪ್ರಮುಖ ಉದ್ದೇಶವಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಆಗಮಿಸಿರುವುದರಿಂದ ಬರುವ ದಿನಗಳಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೇವೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

## ಸರ್ದಾರ್ ಗಲ್ಲಿಯಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ ಹಾಗೂ ಕನ್ನಡಕ ವಿತರಣೆ




(ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಸರ್ದಾರಗಲ್ಲಿಯಲ್ಲಿ ಕೊಪ್ಪಳ ಜೋಶಿ ಕಣ್ಣಿನ ಆಸ್ಪತ್ರೆಯ ಖ್ಯಾತ ವೈದ್ಯರಿಂದ ಅಲ್ಫಾ ಹೆಲ್ತ್ ಎಜುಕೇಷನ್ ಅಂಡ್ ರೂರಲ್ ಡೆವೆಲೆಪ್‌ಮೆಂಟ್ ಫೌಂಡೇಷನ್, ಮಹಿಳಾ ಧ್ವನಿ ಶಿಕ್ಷಣ ಮತ್ತು ಗ್ರಾಮೀಣ ಕ್ಷೇಮಾಭಿವೃದ್ಧಿ ಸಂಘ ಕೊಪ್ಪಳ ಹಾಗೂ ಕರ್ನಾಟಕ ರಾಜ್ಯ ನದಾಫ್ /ಪಿಂಜಾರ ಸಂಘ ಕೊಪ್ಪಳ ತಾಲೂಕ (ಗ್ರಾ) ಘಟಕದ ಸಹಯೋಗದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ ಹಾಗೂ ಕನ್ನಡಕ ವಿತರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕರ್ನಾಟಕ ರಾಜ್ಯ ನದಾಫ್ ಪಿಂಜಾರ ಸಂಘದ ರಾಜ್ಯ ಕೋಶಾಧಿಕಾರಿ ಹಾಗೂ ಕೊಪ್ಪಳ ನಗರಸಭೆ ಮಾಜಿ ಸದಸ್ಯರಾದ ಶಹಾಬುದ್ದೀನ್ ಸಾಬ್ ಹಾಗೂ ಗಣ್ಯರು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಸಂಘದ ಕೊಪ್ಪಳ ಜಿಲ್ಲಾ ಅಧ್ಯಕ್ಷರಾದ ಕಾಸಿಂ ಅಲಿ ಮುದ್ದಾಬಳ್ಳಿ ಮಾತನಾಡಿ ಬಡವರು ಮತ್ತು ಸಮಾಜದ ಮಧ್ಯಮ ವರ್ಗದ ಕುಟುಂಬಗಳು ಆರೋಗ್ಯ ಸಮಸ್ಯೆ ಬಗೆಹರಿಸಿಕೊಳ್ಳುವಲ್ಲಿ ಆರ್ಥಿಕ ಪರಿಸ್ಥಿತಿ ಅವರನ್ನು ಕಟ್ಟಿಹಾಕುತ್ತದೆ. ಸಂಘ ಸಂಸ್ಥೆಗಳು ಆಯೋಜಿಸುವ ಉಚಿತ ತಪಾಸಣೆ ಶಿಬಿರಗಳು ಬಡವರ ಪಾಲಿಗೆ ವರದಾನವಾಗಿವೆ. ಸಮಾಜಮುಖಿ ಕಾರ್ಯ ಶ್ಲಾಘನೀಯ. ಆರೋಗ್ಯದಲ್ಲಿ ಪಂಚೆಂದ್ರಿಯಗಳ ಆರೈಕೆ ಬಹುಮುಖ್ಯ ಇಂತಹ ಉಚಿತ ಶಿಬಿರಗಳ ಸದುಪಯೋಗ ಪಡೆದುಕೊಳ್ಳಿ ಎಂದರು.

ಪ್ರತಿಯೊಬ್ಬ ಮನುಷ್ಯನಿಗೆ ಆರೋಗ್ಯ ಬಹಳ ಮುಖ್ಯ. ಕಣ್ಣಿದ್ದರೆ ಮಾತ್ರ ಎಲ್ಲವನ್ನು ನೋಡಿ ಅನುಭವಿಸಬಹುದು. ಆದಕಾರಣ ಕಣ್ಣಿನ ಆರೈಕೆಗೆ ಬಹಳ ಮಹತ್ವ ನೀಡುವುದರ ಮೂಲಕ ಈ ಉಚಿತ ಶಿಬಿರದ ಸದುಪಯೋಗ ಪಡಿಸಿಕೊಳ್ಳಿ ಎಂದು ಸಲಿಮಾಜಾನ್ ತಿಳಿಸಿದರು

ಕಾರ್ಯಕ್ರಮದಲ್ಲಿ ತಾಲೂಕು ಅಧ್ಯಕ್ಷರಾದ ಅಸ್ಮಾನ ಸಾಬ್ ಕರ್ಕಿ ಹಳ್ಳಿ, ಆಲ್ಫಾ ಫೌಂಡೇಶನ್ ಹಾಗೂ ನದಾಫ್ ಜಿಲ್ಲಾ ಸಂಘದ ಮಹಿಳಾ ಜಿಲ್ಲಾ ಅಧ್ಯಕ್ಷರಾದ ಸಲಿಮಾಜಾನ್, ಮಹಿಳಾ ಧ್ವನಿ ಕ್ಷೇಮಾಭಿವೃದ್ಧಿ ಅಧ್ಯಕ್ಷರಾದ ಪ್ರಿಯದರ್ಶಿನಿ, ಶಿಫಾ ಕ್ಲಿನಿಕ್ ಡಾಕ್ಟರ್ ಎಸ್ ಕೆ ರಾಜೂರ, ಜೋಶಿ ಆಸ್ಪತ್ರೆ ವ್ಯವಸ್ಥಾಪಕರಾದ ಬಸಯ್ಯ ಹಿರೇಮಠ, ಪಂಚಕಮಿಟಿ ಅಧ್ಯಕ್ಷರಾದ ಖಾದರ್ ಸಾಬ್ ಕುದ್ರಿಮೋತಿ, ನಗರಸಭೆ ಮಾಜಿ ಸದಸ್ಯರಾದ ಮಾನ್ವಿಪಾಷಾಸಾಬ್ ಉಪಾಧ್ಯಕ್ಷರಾದ ಫಕ್ರುಸಾಬ ಚುಕ್ಕನಕಲ್, ಮೀರಾಸಾಬ ಬನ್ನಿಗೋಳ, ಮುರ್ತುಜಾಸಾಬ ಚುಟ್ಟದ, ಕಾರ್ಯದರ್ಶಿ ಮುಸ್ತಫಾ ಕುದ್ರಿಮೋತಿ, ಖಜಾಂಚಿ ಮರ್ದಾನಸಾಬ್ ಲುಂಗಿ, ರಶೀದ್ ನೀರಲಗಿ, ಹಸನ್ ಸಾಬ್ ಮಂಗಳಾಪೂರ, ಪೀರಸಾಬ್ ಭೈರಾಪುರ, ರಿಯಾಜ್ ಕುದ್ರಿಮೋತಿ, ಮುಮ್ತಾಜ್ ಬೇಗಂ ರೋಣ, ಸಿರಾಜ್ ಕೋಲ್ಕಾರ್, ಖಾಜಾವಲಿ ಬನ್ನಿಕೊಪ್ಪ, ಗೌಸಾಬ್ ಸರ್ದಾರ್, ರಮ್ಜಾನ್ ಸಾಬ್ ಕಂಬಳಿ, ಶಾಕಿರ್, ರಾಜಾಬಕ್ಷಿ, ಬಡೇಸಾಬ್ ಹಾಜರಿದ್ದರು.

ಕೊಪ್ಪಳ ನಗರದ ಸರ್ದಾರಗಲ್ಲಿಯ ಸಾಲಾರಜಂಗ್ ರೋಡಿನಲ್ಲಿರುವ ಶಿಫಾ ಕ್ಲಿನಿಕ್ (ಡಾ॥ ಎಸ್ ಕೆ ರಾಜೂರ ಆಸ್ಪತ್ರೆ) ಯಲ್ಲಿ ಕೊಪ್ಪಳ ಹಾಗೂ ಇತರ ತಾಲೂಕಿನ ಗ್ರಾಮೀಣ ಹಾಗೂ ನಗರದ ಹಿಂದುಳಿದ ಪ್ರದೇಶದ ಬಡ ಜನರ ಆರೋಗ್ಯದ ಹಿತದೃಷ್ಟಿಯಿಂದ 'ಉಚಿತ ನೇತ್ರ ತಪಾಸಣಾ ಶಿಬಿರ' ಹಾಗೂ 'ಉಚಿತ ಕನ್ನಡಕ'ವನ್ನು ಅರ್ಹರಿಗೆ ವಿತರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಶಿಬಿರದಲ್ಲಿ ಸುಮಾರು 200ಕ್ಕೂ ಹೆಚ್ಚು ಫಲಾನುಭವಿಗಳನ್ನು ತಪಾಸಣೆ ಮಾಡಲಾಯಿತು. ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇರುವವರಿಗೆ ಸಲಹೆ ನೀಡಲಾಯಿತು.

## ಮನೆ ಬೀಗ ಮುರಿದು 5.77 ಲಕ್ಷ ರೂ. ಮೌಲ್ಯದ ನಗನಾಣ್ಯ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.21-ಮನೆ ಬೀಗ ಮುರಿದು 5,77,535 ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ನಗರದ ಮುಸ್ಲಿಂ ಸಂಘದ ತಾಜನಗರದಲ್ಲಿ ನಡೆದಿದೆ.

ಹಣ್ಣಿನ ವ್ಯಾಪಾರಿ ಮೊಹಮ್ಮದ್ ನಬೀಲಾಲ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 1,83,535 ರೂ. ಮೌಲ್ಯದ 4.1/2 ತೊಲೆ ಬಂಗಾರದ ಆಭರಣ, 24 ಸಾವಿರ ರೂ.ಮೌಲ್ಯದ 60 ತೊಲೆಯ ಬೆಳ್ಳಿಯ ಆಭರಣ ಹಾಗೂ 3,70,000.ರೂ.ನಗದು ಹಣ ಸೇರಿ ಒಟ್ಟು ಅಂ.ಕಿ. 5,77,535 ರೂ.ಮೌಲ್ಯದ ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ.

ಇವರು ದುಬೈನ ಅರೇಬಿಯಾದಲ್ಲಿರುವ ಮಕ್ಕಾ-ಮದೀನಾ ದೇವರ ದರ್ಶನಕ್ಕೆ ಹೋದಾಗ ಕಳ್ಳರು ಮನೆ ಬೀಗ ಮುರಿದು ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ ಎಂದು ತಿಳಿದುಬಂದಿದೆ.

ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಸಿ.ಟಿ.ರವಿ ಮೇಲೆ ಹಲ್ಲೆ ಯತ್ನ : ಸುರೇಶ ಆರ್ ಸಜ್ಜನ್ ಖಂಡನೆ

(ಮಲ್ಲಿಕಾರ್ಜುನ್ ಮಳಿಕೇರಿ)
ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:-ಸುವರ್ಣ ಸೌಧದಲ್ಲಿ ಬಿಜೆಪಿ ಹಾಗೂ ವಿಧಾನ ಮುಖಂಡ ಸದಸ್ಯರಾದ ಸಿಟಿ ರವಿ ಅವರ ಮೇಲೆ ಕಾಂಗ್ರೆಸ್ ಗುಂಡಾಗಳು ಹಲ್ಲೆಗೆ ಯತ್ನ ನಡೆಸಿ ಕೊಲೆ ಬೆದರಿಕೆ ಹಾಕಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು ಇದು ಹೇಡಿಗಳ ಕೃತಿಯ ಎಂದು ಬಿಜೆಪಿ ಜಿಲ್ಲಾ ಮುಖಂಡರಾದ ಸುರೇಶ ಆರ್ ಸಜ್ಜನ್ ತೀವವಾಗಿ ಖಂಡಿಸಿದ್ದಾರೆ.



ಲಕ್ಷ್ಮಿ ಹೆಬ್ಬಾಳ್ವರ್ ಬೆಂಬಲಿಗರ ಗುಂಡಾ ವರ್ತನೆ ಬಿಜೆಪಿ ಪಕ್ಷ ಸಹಿಸಲ್ಲ ಅಂಥವರನ್ನು ಒದ್ದು ಒಳಗೆ ಹಾಕಿ ಕಾನೂನು ಪ್ರಕಾರ ಕ್ರಮ ಪ್ರಕರಣವನ್ನು ದಾಖಲಿಸಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕೆಂದು ಹೇಳಿದ್ದಾರೆ.

ರಾಜ್ಯದಲ್ಲಿ ಕಾನೂನು ಸಂಪೂರ್ಣ ಹದಗೆಟ್ಟು ಹೋಗಿದೆ ಜನಪ್ರತಿನಿಧಿಗಳಿಗೆ ರಕ್ಷಣೆ ಇಲ್ಲದ ಮೇಲೆ ಸಾರ್ವಜನಿಕರಿಗೆ ಎಲ್ಲಿ ರಕ್ಷಣೆ ಈ ಸರ್ಕಾರ ನೀಡುತ್ತದೆ.

ನೆನ್ನೆ ರಾತ್ರಿ ಬಂಧಿಸಿ ಖಾನಾಪುರ್ ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಿ ನ್ಯಾಯಾಧೀಶರ ಮುಂದೆ ಆದರೂ ಪಡಿಸುವುದನ್ನು ಬಿಟ್ಟು ತದನಂತರ ಬೆಂಗಳೂರಿಗೆ ಕರೆದು-ಕೊಂಡು ಹೋಗುವುದಾಗಿ ಹೇಳಿದ ಪೊಲೀಸರು ಸಿಟಿ ರವಿಯವರು ಏನು ಭಯೋತ್ಪಾದಕರ ಬಂಧಿಸಿದ ರೀತಿ ಪೊಲೀಸರು ವರ್ತಿಸಿದ್ದಾರೆ ಅದನ್ನು ಬಿಟ್ಟು ಮೂರ್ನಾಲ್ಕು ಜಿಲ್ಲೆಗಳ ಠಾಣೆಗಳನ್ನು ರಾತ್ರಿ ಇಡಿ ಸುತ್ತಾಡಿಸಿ ಪೊಲೀಸರು ಮಾನಸಿಕ ಹಿಂಸೆ ನೀಡಿ ಹಲ್ಲೆ ಮಾಡಿದ್ದು ಅಕ್ಷಮ್ಯ ಅಪರಾಧ ಸಿನಿಮೆಯ ರೀತಿ ಪೊಲೀಸರು ವರ್ತಿಸಿದ್ದಾರೆ ಎಂದು ಸಜ್ಜನ್ ಆಕ್ರೋಶ್ಯಾಪ್ತಪಡಿಸಿದ್ದಾರೆ.ಸರ್ಕಾರದ ಅಣತಿಯಂತೆ ಪೊಲೀಸರು ಕಾರ್ಯನಿರ್ವಹಿಸಿದ್ದು ಈ ಸರ್ಕಾರವನ್ನು ನಾವು ಯಾವ ದೇಶದಲ್ಲಿದ್ದೇವೆ ಎಂದು ಪ್ರಶ್ನಿಸಬೇಕಾಗುತ್ತದೆ ಎಂದು ಹೇಳಿದ್ದಾರು ಒಬ್ಬ ಜನಪ್ರತಿನಿಧಿಯೊಂದಿಗೆ ಈ ರೀತಿ ನಡೆದುಕೊಂಡ- ರೆ ಪೊಲೀಸರು ಹಾಗೂ ಸರ್ಕಾರ ಅಧಿಕಾರದ ದುರ್ಬಳಕೆಯನ್ನು ಮಾಡಿಕೊಳ್ಳುತ್ತಿದೆ ಎಂದು ಬಿಜೆಪಿ ಮುಖಂಡರಾದ ಸುರೇಶ ಆರ್ ಸಜ್ಜನ್ ಹೇಳಿದ್ದಾರೆ.

# ಬಿ.ವಿ.ಬಿ. ಮಹಾವಿದ್ಯಾಲಯದಲ್ಲಿ ಐತಿಹಾಸಿಕ ಬೆಳಗಾಂವ ಕಾಂಗ್ರೇಸ್ ಸಮ್ಮೇಳನದ ಶತಮಾನೋತ್ಸವದ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : 21ನೇ ಡಿಸೆಂಬರ್ 2024 ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಮಹಾತ್ಮಗಾಂಧೀಜಿಯವರ ಜೀವನವೇ ಒಂದು ಆದರ್ಶ ಅವರು ತನಗಾಗಿ ಅಲ್ಲದೇ ಅವರ ಇಡೀ ಜೀವನ ಪ್ರಾರಂಭದಲ್ಲಿ ವಕೀಲ ವೃತ್ತಿ ಆರಂಭಿಸಿ ದಕ್ಷಣ ಆಫ್ರಿಕಾದಲ್ಲಿ ವರ್ಣಬೇಧ ನೀತಿಯ ವಿರುದ್ಧ ಹೋರಾಡಿ ಅವರಿಗೆ ಸಮಾನತೆ ದೊರಕಿಸಿಕೊಟ್ಟು ಭಾರತಕ್ಕೆ 1919ರಲ್ಲಿ ಭಾರತಕ್ಕೆ ಹಿಂದುರುಗಿದರು ಅಲ್ಲಿಂದ ಸ್ವಾತಂತ್ರ್ಯ ಸಿಗುವವರೆಗೆ ಹತ್ತು ಹಲವಾರು ಚಳುವಳಿಗಳು ಅಂದರೆ ಅಸಹಕಾರ ಚಳುವಳಿ, ಉಪ್ಪಿನ ಸತ್ಯಾಗ್ರಹ, ಕ್ವಿಟ್ ಇಂಡಿಯಾ ಚಳುವಳಿ ಹಾಗೂ 1924ರಲ್ಲಿ ಬೆಳಗಾಂವದಲ್ಲಿ ನಡೆದ ಐತಿಹಾಸಿಕ ಕಾಂಗ್ರೇಸ್ ಸಮ್ಮೇಳನದಲ್ಲಿ ಸ್ವದೇಶಿ ವಸ್ತುಗಳ ಬಗ್ಗೆ ಹಾಗೂ ಖಾದಿಯ ಬಗ್ಗೆ ವಿಶೇಷ ಒತ್ತುಕೊಟ್ಟು ಹೇಳಿದರು, ಇಂದಿನ ವಿದ್ಯಾರ್ಥಿ ಸ್ವದೇಶಿ ವಸ್ತು ಹಾಗೂ ಗಾಂಧೀಜಿಯವರ ಆದರ್ಶವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ಕೊಟ್ಟರು.




ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಮಹಾವಿದ್ಯಾಲಯ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಶೀತಕಾಲೇ, ಉಷ್ಣಂ, ಉಷ್ಣ ಕಾಲೇ ಶೀತಂ ಅದುವೇ ಖಾದಿ ವಸ್ತ್ರಂ ಎಂದು ಖಾದಿ ವಸ್ತ್ರದ ಬಗ್ಗೆ ಮಹತ್ವದ ಬಗ್ಗೆ ಹೇಳಿದರು ಹಾಗೂ ಬೆಳಗಾಂವ ಕಾಂಗ್ರೇಸ್ ಅಧಿವೇಶನದಲ್ಲಿ ಸ್ವತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡಿದ್ದ ಕರ್ನಾಟಕದ ಗಾಂಧೀಯೆಂದೇ ಪ್ರಸಿದ್ಧರಾದ ಹರ್ಡೇಕರ ಮಂಜಪ್ಪ, ಗಂಗಾಧರರಾವ ದೇಶಪಾಂಡೆ, ನಾ.ಸು. ಹರ್ಡೇಕರ, ಮೈಲಾರ ಮಹಾದೇವ ಇವರೇಲ್ಲರು ಸ್ವತಂತ್ರ್ಯ ಚಳುವಳಿಯಲ್ಲಿ ಭಾಗವಹಿಸಿ ಬ್ರೀಟಿಷರ ವಿರುದ್ಧ ಭಾರತ ಬಿಟ್ಟು ತೊಲುಗುವವರೆಗೆ ನಿರಂತರ ಹೋರಾಟ ಮಾಡಿ ಅಖಂಡ ಭಾರತಕ್ಕೆ ಸ್ವತಂತ್ರ್ಯ ಸಿಗುವವರೆಗೆ ಅನೇಕ ಹರತಾಳಗಳು, ಚಳುವಳಿಗಳು ವಿಶೇಷವಾಗಿ ಬೆಳಗಾಂವ ಕಾಂಗ್ರೇಸ್ ಅಧಿವೇಶನದಲ್ಲಿ ಅನೇಕ ನಿರ್ಣಯಗಳನ್ನು ಕೈಗೊಂಡರು. ಈ ಸಮ್ಮೇಳನಕ್ಕೆ ಪ್ರಾಮುಖ್ಯತೆ ಏಕೆಂದರೆ, ಗಾಂಧೀಜಿಯವರು ಅಧ್ಯಕ್ಷತೆ ವಹಿಸಿದ ಏಕೈಕ ಸಮ್ಮೇಳನವಾಗಿದೆ. ಆದುದರಿಂದ ಇಂದಿನ ವಿದ್ಯಾರ್ಥಿಗಳು ವಿದೇಶಿ ವಸ್ತುಗಳಿಗೆ ಮಾರುಹೋಗದೆ ಸ್ವಉದ್ಯೋಗ, ಗುಡಿ ಕೈಗಾರಿಕೆಗಳಿಗೆ ಮಹತ್ವನೀಡಿ ಭಾರತೀಯತೆಯನ್ನು ವಿದೇಶಗಳಲ್ಲಿ ಹರಡಿಸಬೇಕೆಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದ ಮೊದಲಿಗೆ ಪ್ರಾರ್ಥನೆ ಗೀತೆಯನ್ನು ಶ್ರೀಮತಿ ರೇಣುಕಾ ಎಂ.ಸ್ವಾಮಿ ಹಾಡಿದರೆ, ಪ್ರಾಸ್ತಾವಿಕ ನುಡಿಯನ್ನು ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ನಡೆಸಿಕೊಟ್ಟರೆ ಸ್ವಾಗತವನ್ನು ಶ್ರೀಮತಿ ವಾಣಿಶ್ರೀ ಹೇಳಿದರೆ, ಶ್ರೀ ಬಸವರಾಜ ಬಿರಾದಾರ ನಿರೂಪಸಿದರೆ, ಶ್ರೀಮತಿ ವಚನಶ್ರೀ ವಂದಿಸಿದರು.

ವೇದಿಕೆಯ ಮೇಲೆ ಲೇಫ್ಟನೆಂಟ್ ಸಂಯಮ ಆದಿನಾಥ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್., ಎನ್.ಸಿ.ಸಿ. ಮಹಾವಿದ್ಯಾಲಯದ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ; ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಇಚ್ಚಿಸುವ ಪರಿಶಿಷ್ಟ ಪಂಗಡದ ಯುವಕ ಮತ್ತು ಯುವತಿಯರಿಂದ ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಡಿ.23 ರ ವರೆಗೆ ವಿಸ್ತರಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಎಸ್ಎಸ್ಎಲ್‌ಸಿ ಉತ್ತೀರ್ಣರಾಗಿರಬೇಕು, 18 ರಿಂದ 45 ವರ್ಷ ವಯೋಮಾನದವರಾಗಿರಬೇಕು, ಕುಟುಂಬದ ಆದಾಯ ರೂ.2.50 ಲಕ್ಷ ಒಳಗಿರಬೇಕು, ಅಲೆಮಾರಿ, ಅರೆ-ಅಲೆಮಾರಿ, ಸೂಕ್ಷ್ಮ, ಅತೀ ಸೂಕ್ಷ್ಮ ಪರಿಶಿಷ್ಟ ವರ್ಗದ ಸಮುದಾಯದ ಯುವಕ ಮತ್ತು ಯುವತಿಯರಿಗೆ ಆದ್ಯತೆ ನೀಡಲಾಗುವುದು.

ಅರ್ಜಿಗಳನ್ನು ಬಳ್ಳಾರಿ, ಸಂಡೂರು, ಸಿರುಗುಪ್ಪ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ನಲ್ಲಚೇರುವು ಪ್ರದೇಶದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತಿಥಿ ಉಪನ್ಯಾಸಕ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಡಿಸೆಂಬರ್ 21-2024-25ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ, ಕೆ.ಆರ್ ವೃತ್ತ, ಬೆಂಗಳೂರು ಇಲ್ಲಿ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ್ ವಿಭಾಗದ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ನಿಗಧಿತ ನಮೂನೆಯಲ್ಲಿ ವಿಶ್ವವಿದ್ಯಾಲಯದ ವೆಬ್‌ಸೈಟ್ www.uvce.karnataka.gov.in ನಿಂದ ಡೌನ್ಲೋಡ್ ಮಾಡಿಕೊಂಡು ಸಂಬಂಧಿತ ದಾಖಲೆಗಳ ಪ್ರತಿಗಳೊಂದಿಗೆ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಿಗೆ ಡಿಸೆಂಬರ್ 24 ರೊಳಗಾಗಿ ಸಲ್ಲಿಸುವುದು. ನಿಗಧಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಆ ವಿಭಾಗದ ಮುಖ್ಯಸ್ಥರನ್ನು ಸಂಪರ್ಕಿಸಬಹುದು ಎಂದು ವಿಶ್ವವಿದ್ಯಾನಿಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುಸ್ತಕಗಳಿಂದ ಭೌತಿಕ ಬೆಳವಣಿಗೆ: ಪ್ರೊ.ಮುನಿರಾಜು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ಪುಸ್ತಕಗಳು ಮನುಷ್ಯನ ಜ್ಞಾನವೃದ್ಧಿ ಮಾತ್ರವಲ್ಲದೆ, ಭೌತಿಕ ಬೆಳವಣಿಗೆ ಹೊಂದಲು ಸಹಕಾರಿಯಾಗುತ್ತವೆ ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಎಂ ಮುನಿರಾಜು ಅವರು ಹೇಳಿದರು.

ನಗರದ ಸರಳಾದೇವಿ ಸತೀಶ್ಚಂದ್ರ ಅಗರ್‌ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ ಸ್ನಾತಕ ಪದವಿಯ ಪಠ್ಯದ ಭಾಗವಾದ ವಾಣಿಜ್ಯ ಸೌರಭ, ವಿಜ್ಞಾನ ಸೌರಭ ಮತ್ತು ಕಲಾ ಸೌರಭ ಎಂಬ ಪುಸ್ತಕಗಳ ಬಿಡುಗಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿಯೊಬ್ಬರೂ ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಮೊಬೈಲ್ ಗೀಳನ್ನು ಬಿಟ್ಟು ಯುವಜನತೆ ಪುಸ್ತಕಗಳನ್ನು ಖರೀದಿಸಿ ಓದಬೇಕು ಆಗ ಮಾತ್ರ ಪುಸ್ತಕ ಪ್ರೀತಿ ಇಮ್ಮಡಿಗೊಳ್ಳುತ್ತದೆ ಎಂದು ತಿಳಿಸಿದರು.

ವಿವಿಯ ಕಲಾ ನಿಕಾಯದ ಡೀನರಾದ ಪ್ರೊ.ಶಾಂತನಾಯ್ಕ್ ಅವರು ಮಾತನಾಡಿ, ಮೌಲ್ಯಯುತ ಪುಸ್ತಕಗಳು ವಿದ್ಯಾರ್ಥಿಯ ಜೀವನವನ್ನು ಬದಲಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಎಲ್ಲ ಭಾಷೆಯ ಪುಸ್ತಕಗಳನ್ನು ಓದಿರಿ, ಆದರೆ ಕನ್ನಡ ಪುಸ್ತಕಗಳನ್ನು ಪ್ರೀತಿಸಿರಿ ಎಂದು ಹೇಳಿದರು.

ವಿವಿಯ ಪ್ರಸಾರಾಂಗ ನಿರ್ದೇಶಕ ಪ್ರೊ.ಅರುಣ್ ಕುಮಾರ್ ಲಗಶೆಟ್ಟಿ ಅವರು ಮಾತನಾಡಿ, ಪ್ರಸಾರಾಂಗದಿಂದ ಪ್ರಕಟಗೊಂಡಿರುವ ಬಳ್ಳಾರಿ ದರ್ಶನ ಪುಸ್ತಕವು ಹೆಚ್ಚು ಬೇಡಿಕೆಯಲ್ಲಿದ್ದು, ಪಠ್ಯಕ್ರಮದ ಪುಸ್ತಕಗಳನ್ನು ಹೆಚ್ಚಾಗಿ ಪ್ರಕಟಿಸಲು ಮುಂಬರುವ ದಿನಗಳಲ್ಲಿ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಪುಸ್ತಕದ ಸಂಪಾದಕರಿಗೆ ಗೌರವಿಸಿ ಪುಸ್ತಕದ ಗೌರವ ಪ್ರತಿಗಳನ್ನು ನೀಡಲಾಯಿತು. ಈ ವೇಳೆ ಎಸ್‌ಎಸ್‌ಎ ಕಾಲೇಜಿನ ಪ್ರಾಂಶುಪಾಲರಾದ ಡಾ.ಮೋನಿಕಾ ರಂಜನ್, ಡಾ.ಹೊನ್ನೂರ್ ಅಲಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಡಿ.23 ರಂದು ಎಸ್‌ಸಿಎಸ್‌ಪಿ-ಟಿಎಸ್‌ಪಿ ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ಕರ್ನಾಟಕ ಅನುಸೂಚಿತಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ-2013ರ ಸೆಕ್ಷನ್-11 ರ ಪ್ರಕಾರ ಜಿಲ್ಲಾ ಮೇಲ್ವಿಚಾರಣಾ ಸಮಿತಿ ರಚಿಸಿದ್ದು, ಡಿ.23 ರಂದು ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಎಸ್‌ಸಿಎಸ್‌ಪಿ-ಟಿಎಸ್‌ಪಿ ಜಿಲ್ಲಾ ಮೇಲ್ವಿಚಾರಣಾ ಸಮಿತಿಯ ಸಭೆ ಏರ್ಪಡಿಸಲಾಗಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಲಿಡ್‌ಕರ್‌ನ ಚರ್ಮವಸ್ತುಗಳಿಗೆ ಶೇ.20 ರಷ್ಟು ರಿಯಾಯಿತಿ ದರದಲ್ಲಿ ಮಾರಾಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ಕ್ರಿಸ್‌ಮಸ್ ಹಬ್ಬ ಮತ್ತು ಹೊಸ ವರ್ಷದ ಪ್ರಯುಕ್ತ ಡಿ.20 ರಿಂದ ಜ.05 ರವರೆಗೆ (16 ದಿನಗಳವರೆಗೆ) ಲಿಡ್‌ಕರ್‌ನ ಎಲ್ಲಾ ಚರ್ಮವಸ್ತುಗಳಿಗೆ ಶೇ.20 ರಷ್ಟು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಜಿಲ್ಲಾ ಲಿಡ್‌ಕರ್ ಮಾರಾಟ ಮಳಿಗೆಯ ವ್ಯವಸ್ಥಾಪಕ ಟಿ.ಸಂಜೀವಪ್ಪ ಅವರು ತಿಳಿಸಿದ್ದಾರೆ.

ನಗರದ ಹೆಚ್.ಆರ್.ಗವಿಯಪ್ಪ ವೃತ್ತದ ಬಳಿಯ ಬುಡಾ ಕಾಂಪ್ಲೆಕ್ಸ್ ಶಾಪ್ ನಂ.24 ರ ಲಿಡ್‌ಕರ್ ಲೆದರ್ ಎಂಪೋರಿಯಮ್ ಮಳಿಗೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಮತ್ತು ಸಂಜೆ 04 ಗಂಟೆಯಿಂದ 08 ಗಂಟೆಯವರೆಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.08392271741 ಮತ್ತು ಮೊ.9844667691 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಾಧ ತಡೆ ಮಾಸಾಚರಣೆ ಪ್ರಯುಕ್ತ ಜಾಗೃತಿ ಜಾಥಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ಜಿಲ್ಲಾ ಪೊಲೀಸ್ ವತಿಯಿಂದ ಅಪರಾಧ ತಡೆ ಮಾಸಾಚರಣೆ ಪ್ರಯುಕ್ತ ಸೈಬರ್ ಅಪರಾಧ, ರಸ್ತೆ ಸುರಕ್ಷತೆ, ಮಹಿಳೆ ಮತ್ತು ಮಕ್ಕಳ ರಕ್ಷಣೆ ಮುಂತಾದ ಅಪರಾಧಗಳ ನಿಯಂತ್ರಣ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಶುಕ್ರವಾರ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.

ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ನಗರದ ಕನಕದುರ್ಗ ದೇವಸ್ಥಾನದ ಹತ್ತಿರದ ಜಿಲ್ಲಾ ಪೊಲೀಸ್ ವರಿಷ್ಠಧಿಕಾರಿಗಳ ಕಚೇರಿ ಮುಖ್ಯದ್ವಾರದಿಂದ ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕರಾದ ಬಿ.ಎಸ್.ಲೋಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಚಾಲನೆ ನೀಡಿದರು.

ಜಾಗೃತಿ ಜಾಥಾದಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿ-ವಿದ್ಯಾರ್ಥಿನಿಯರು, ಎನ್‌ಸಿಸಿ ಕೆಡೆಟ್, ರೆಡ್‌ಕ್ರಾಸ್ ಸಂಸ್ಥೆಯ ಪದಾಧಿಕಾರಿಗಳು, ನಿವೃತ್ತ ಅರೆಸೇನಾ ಪಡೆ ಸಂಘ ಹಾಗೂ ಇತರೆ ಸಂಘಟನೆಗಳು ಭಾಗವಹಿಸಿದ್ದರು.

ಜಾಥಾವು ನಗರದ ಕನಕದುರ್ಗ ವೃತ್ತ, ವಾಲ್ಮೀಕಿ ಸರ್ಕಲ್, ಅಂಬೇಡ್ಕರ್ ಸರ್ಕಲ್, ಹೆಚ್.ಆರ್.ಗವಿಯಪ್ಪ ವೃತ್ತ, ಗಡಗಿ ಚೆನ್ನಪ್ಪ ವೃತ್ತ ಸಾಗಿ ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತೆ, ಮಹಿಳೆ ಮತ್ತು ಮಕ್ಕಳ ಸುರಕ್ಷತೆ, ಸೈಬರ್ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಬಳಿಕ ಜಿಲ್ಲಾ ರೆಡ್‌ಕ್ರಾಸ್ ಸಂಸ್ಥೆ ವತಿಯಿಂದ ರಸ್ತೆ ಸುರಕ್ಷತೆ ಬಗ್ಗೆ ಅಣಕು ಪ್ರದರ್ಶನ ನಡೆಸಿಕೊಟ್ಟರು.

ಈ ವೇಳೆ ಸಿರುಗುಪ್ಪ ಡಿಎಸ್‌ಪಿ ವೆಂಕಟೇಶ್, ಡಿಎಆರ್‌ನ ಡಿಎಸ್‌ಪಿ ತಿಪ್ಪೇಸ್ವಾಮಿ, ಸಂಚಾರ ಪೊಲೀಸ್ ಠಾಣೆಯ ಪಿಐ ಅಯ್ಯನಗೌಡ ಪಾಟೀಲ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಪೂರ್ವಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಡಿಸೆಂಬರ್ 21- 2025ರ ಜನವರಿ 1 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಆಚರಣೆಯ ಪೂರ್ವಸಿದ್ಧತಾ ಸಭೆಯನ್ನು ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ 2024ರ ಡಿಸೆಂಬರ್ 23ರ ಸೋಮವಾರ ರಂದು ಸಂಜೆ 4 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ ಅವರು ತಿಳಿಸಿದ್ದಾರೆ.

# ಡಿ.23 ರಂದು ರಾಷ್ಟ್ರೀಯ ಗಣಿತ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಬೆಂಗಳೂರು ಮತ್ತು ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಡಿ.23 ರಂದು ಬೆಳಿಗ್ಗೆ 10.15 ಗಂಟೆಗೆ ಕರ್ನಾಟಕ ಪಬ್ಲಿಕ್ ಸ್ಕೂಲ್ (ಸರ್ಕಾರಿ ಬಾಲಕಿಯರ ಪ್ರೌಢಶಾಲೆ)ನಲ್ಲಿ ರಾಷ್ಟ್ರೀಯ ಗಣಿತ ವಿಜ್ಞಾನ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಕಾರ್ಯಕ್ರಮ ಉದ್ಘಾಟನೆ ಮಾಡುವರು.

ಕೆಪಿಎಸ್ ಶಾಲೆಯ ಮುಖ್ಯ ಶಿಕ್ಷಕರಾದ ಎ.ಭೈರಪ್ಪ ಅವರು ಅಧ್ಯಕ್ಷತೆ ವಹಿಸುವರು.

ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಎಸ್.ಎಂ., ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಬಳ್ಳಾರಿ ಕೇಂದ್ರದ ಎನ್‌ಐಸಿ ತಾಂತ್ರಿಕ ನಿರ್ದೇಶಕ ಸಿ.ವೆಂಕಟರಮಣ ಮೂರ್ತಿ, ಕ್ಷೇತ್ರ ಶಿಕ್ಷಣಾಧಿಕಾರಿ ನಯೀಮೂರ್ ರೆಹಮಾನ್ ಕೆ.ಎಸ್., ಡಿಡಿಪಿಐ ಕಚೇರಿಯ ಗಣಿತ ವಿಷಯ ನಿರ್ವಾಹಕರಾದ ಬಸವರಾಜ.ಎಂ., ಸಂಪನ್ಮೂಲ ವ್ಯಕ್ತಿಯಾಗಿ ಮುನ್ಸಿಪಾಲ್ ಪಿಯು ಕಾಲೇಜಿನ ಉಪನ್ಯಾಸಕರಾದ ಡಾ.ಯು.ಶ್ರೀನಿವಾಸ್ ಮೂರ್ತಿ, ಕಾರ್ಯಕ್ರಮ ಸಂಯೋಜಕ ಹಾಗೂ ಜಿಪಂ ಜಿಲ್ಲಾ ಯೋಜನಾ ಸಂಯೋಜಕರಾದ ರಾಮಚಂದ್ರರೆಡ್ಡಿ ಜಿ.ಬಿ ಸೇರಿದಂತೆ ಶಾಲಾ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಇಂದು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ನಗರದ ತಾಳೂರು ರಸ್ತೆಯಲ್ಲಿ ರಸ್ತೆ ಅಗಲೀಕರಣ ಕಾಮಗಾರಿಯಡಿ ವಿದ್ಯುತ್ ಕಬ್ಬಿಣದ ಕಂಬಗಳ ಬದಲಾವಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಡಿ.22 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ನಗರ ಜೆಸ್ಕಾಂ ಉಪವಿಭಾಗ-2 ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯವಾಗುವ ಪ್ರದೇಶಗಳು: ಎಫ್-14 ರ ವ್ಯಾಪ್ತಿಯ ಗಣೇಶ ಕಾಲೋನಿ, ಸಿದ್ಧಿ ಕಾಲೋನಿ, ಗೊಲ್ಲನರಸಪ್ಪ ಕಾಲೋನಿ, ಎಂಎಂಟಿಸಿ ಕಾಲೋನಿ, ಮಾರುತಿ ನಗರ, ಹುಸೇನ ನಗರ, ರಾಮಯ್ಯ ಕಾಲೋನಿ, ರಾಘವೇಂದ್ರ ಕಾಲೋನಿ 1ನೇ ಹಂತ, ಅನಂತಪುರ ರಸ್ತೆ, ಪಟೇಲ್ ನಗರ, ಹದ್ದಿನಗುಂಡು ರಸ್ತೆ, ಎಸ್.ಎನ್.ಪೇಟೆ 1ನೇ, 2ನೇ ಅಡ್ಡರಸ್ತೆ, ವಿಶಾಲ ನಗರ, ದತ್ತಸಾಯಿ ನಗರ, ಹನುಮಾನ್ ನಗರ, ಎಚ್‌ಎಲ್‌ಸಿ ಕಾಲೋನಿ.

ಎಫ್-6 ರ ವ್ಯಾಪ್ತಿಯ ತಾಳೂರು ರೋಡ್, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್‌ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನ ಕುಂಟೆ, ಸಿರುಗುಪ್ಪ ರೋಡ್, ರಾಮ ನಗರ, ಅವಂಬಾವಿ, ಜಿಲ್ಲಾ ಕೋರ್ಟ್ ಸಂಕೀರ್ಣ ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕ ಮರುಪಾವತಿ" ಅಡಿ ಸೌಲಭ್ಯಕ್ಕಾಗಿ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು 2025ರ ಫೆಬ್ರವರಿ 15 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಡಿ.ದೇವರಾಜು ಅರಸು ಭವನದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392-275751 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯುವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ.ಸುಧೀಂದ್ರ ಅವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21-ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ.ಸುಧೀಂದ್ರ ಅವರು ಡಿ.22 ರಂದು ಬಳ್ಳಾರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.

ಡಿ.22 ರಂದು ಬೆಳಿಗ್ಗೆ 5 ಗಂಟೆಗೆ ಬೆಂಗಳೂರಿನ ಗಿರಿನಗರ ನಿವಾಸದಿಂದ ಹೊರಟು ರಸ್ತೆಯ ಮೂಲಕ ಸರ್ಕಾರಿ ವಾಹನದಲ್ಲಿ ಬಳ್ಳಾರಿಗೆ ಆಗಮಿಸಿ, ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಅಲ್ಲಂ ಭವನದಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ 10 ಗಂಟೆಗೆ ನಿರ್ಗಮಿಸಿ, 10.30 ಗಂಟೆಗೆ ಬಳ್ಳಾರಿ ತಾಲ್ಲೂಕಿನ ಹಗರಿಯ ಕೃಷಿ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡುವರು.

ನಂತರ ಬೆಳಿಗ್ಗೆ 11 ಗಂಟೆಗೆ ಅಲ್ಲಿಂದ ಹೊರಟು, ಬೆಂಗಳೂರಿಗೆ ಪ್ರಯಾಣಿಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

# ಡಿ.23 ರಂದು ಕಂಪ್ಲಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.21 ಕಂಪ್ಲಿ ಜೆಸ್ಕಾಂ ವ್ಯಾಪ್ತಿಯ 110/11ಕೆವಿ ಕಂಪ್ಲಿ ಉಪಕೇಂದ್ರ ಹಾಗೂ ಇಟ್ಟಿಗಿ 110/11ಕೆವಿ ಉಪಕೇಂದ್ರದ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಡಿ.23 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಕಂಪ್ಲಿ ನಗರ, ನಂ-10 ಮುದ್ದಾಪುರ, ಕಣಿವೆ ತಿಮ್ಮಾಪುರ, ರಾಮಸಾಗರ, ದೇವಸಮುದ್ರ, ಹಂಪಾದೇವನಹಳ್ಳಿ, ಜಾಯಿಗನೂರು, ಕುಂಬಾರ್ ಕ್ಯಾಂಪ್, ಕೃಷನಗರ ಕ್ಯಾಂಪ್, ಬೆಳಗೋಡುಹಾಳು, ಸಣಾಪುರ, ಇಟ್ಟಿಗಿ, ನಂ-2 ಮುದ್ದಾಪುರ, ಸಣಾಪುರ, ಅರಳಹಳ್ಳಿ, ಬಸವೇಶ್ವರ ಕ್ಯಾಂಪ್, ಮಾರೆಮ್ಮ ಕ್ಯಾಂಪ್ ಮತ್ತು ಎಫ್-7 ಸಣಾಪುರ ಮಾರ್ಗದಲ್ಲಿಯೂ ಸಹ ವಿದ್ಯುತ್ ವ್ಯತ್ಯಯವಾಗಲಿದೆ ಹಾಗೂ ಐಪಿ ಸೆಟ್ ಮಾರ್ಗಗಳಲ್ಲಿ ಬೆಳಿಗ್ಗೆ 4 ಗಂಟೆಯಿಂದ ವಿದ್ಯುತ್ ಸರಬರಾಜು ಮಾಡಲಾಗುವುದು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಲಂಪ್ಯಾಡ ಪರೀಕ್ಷೆಯಲ್ಲಿ ದ್ವಿತೀಯ ಸ್ಥಾನ ಪಡೆದ ಕುಮಾರಿ ಭಾಗ್ಯ ವಸುಂದರ್



(ಮಲ್ಲಿಕಾರ್ಜುನ್ ಮಳಿಕೇರಿ)
ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆ ಶಹಾಪುರ ನಗರದ ಚಾಮುಂಡೇಶ್ವರಿ ನಗರದ ನಿವಾಸಿ ಯಾದ ಕುಮಾರಿ ಭಾಗ್ಯ ವಸುಂದರವರು

ಅಂತಾರಾಷ್ಟ್ರೀಯ ಒಲಂಪ್ಯಾಡ ಪರೀಕ್ಷೆಯಲ್ಲಿ ಶಾಲೆಗೆ ದ್ವಿತೀಯ ಸ್ಥಾನ ಪಡೆದಿರುವ ಶಾಲೆಗೆ ಹಾಗೂ ತಾಲೂಕಿಗೆ ಕೀರ್ತಿ ತಂದಿರುವ ಸುದಿನ. ಇಂತಹ ಮಕ್ಕಳಿಗೆ ಪ್ರೋತ್ಸಾಹಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಮೌನೇಶ್ ಹಳಿಸಗರ್ ರವರು ಸನ್ಮಾನಿಸಿ ಗೌರವಿಸಲಾಯಿತು.

ಉದ್ಯಾನಗಿರಿಯಲ್ಲಿ ತೋಟಗಾರಿಕೆ ಮೇಳ – 8 ಜನ ರೈತರಿಗೆ ಸನ್ಮಾನ

# ತೋಟಗಾರಿಕೆ ಮೇಳ ಜಾತ್ರೆ, ಉತ್ಸವವಾಗಬೇಕು: ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.21-ಜಿಲ್ಲೆಯಲ್ಲಿ ಜರುಗುವ ಜಾತ್ರೆಗೆ ಎತ್ತಿನ ಚಕ್ಕಡಿಯ ಮೂಲಕ ಉತ್ಸಾಹದಿಂದ ಕುಟುಂಬ ಸಮೇತ ಸಾಗುವ ರೀತಿಯಲ್ಲಿ ತೋಟಗಾರಿಕೆ ಮೇಳಕ್ಕೂ ಜನ ಸಾಗಿ ಬರಬೇಕು ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ತೋಟಗಾರಿಕೆ ವಿವಿಯ ಉದ್ಯಾನಗಿರಿಯಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಂಡಿರುವ 13ನೇ ತೋಟಗಾರಿಕೆ ತೋಟಗಾರಿಕೆ ಮೇಳಕ್ಕೆ ಶನಿವಾರ ಚಾಲನೆ ನೀಡಿ ಮಾತನಾಡಿದ ಅವರು, ದಿನನಿತ್ಯದ ಬದುಕನ್ನು ಸಾಗಿಸುವ ರೈತರು ಈ ಮೇಳದಲ್ಲಿ ಎಲ್ಲವನ್ನು ಕಾಣಬಹುದಾಗಿದೆ. ಇಂತಹ ಉತ್ಸವಕ್ಕೆ ಉತ್ಸಾಹ ತೆ-ಽರದೇ ಇರುವುದು ನೋವಿನ ಸಂಗತಿಯಾಗಿದೆ. ಯುವಕರು ಕೃಷಿ ಪ್ರೇಮಿಗಳು ಹಾಗೂ ಕೃಷಿ ವಿಷಯದಲ್ಲಿ ಪದವಿ ಪಡೆದವರು ಸುಧಾರಿಸಿದ ಕೃಷಿಯತ್ತ ಒಲವು ತೋರಿ ಪರಾವಲಂಬಿಯಾಗದೇ ಸ್ವಾವಲಂಬಿ ಬದುಕು ಕಟ್ಟುವ ಜೊತೆಗೆ ನಾಡಿಗೆ ಅನ್ನ ಹಾಕುವ ಅನ್ನದಾತ ಎನಿಸಿಕೊಳ್ಳಬೇಕು ಎಂದರು.

ಜನಸಂಖ್ಯೆ ಬೆಳೆದಂತೆಲ್ಲ ಹೆಚ್ಚಿನ ಪ್ರಮಾಣದಲ್ಲಿ ಆಹಾರ ಉತ್ಪಾದನೆ ಮಾಡುತ್ತಿದ್ದೇವೆ ಹೊರತು ಅದರ ಗುಣಮಟ್ಟದ ಕಡೆ ಗಮನಹರಿಸುತ್ತಿಲ್ಲ. ಹಿಂದೆ ಬೆಳೆಯುವ ಪ್ರತಿಯೊಂದು ಆಹಾರ ಪದಾರ್ಥಗಳು ಉತ್ಕೃಷ್ಟ ಗುಣಮಟ್ಟದ ಪದಾರ್ಥಗಳಾಗಿರುತ್ತಿದ್ದವು. ಅಲ್ಲದೇ ಅವುಗಳ ರುಚಿ ಕೂಡಾ ಚೆನ್ನಾಗಿ ಇರುತ್ತಿತ್ತು. ಆದರೆ ಆ ರುಚಿ ಇಂದು ಸಿಗುತ್ತಿಲ್ಲ. ಈ ನಿಟ್ಟಿನಲ್ಲಿ ತೋಟಗಾರಿಕೆ ವಿವಿ ಸಾವಯವ ಕೃಷಿಯತ್ತ ಹೆಚ್ಚಿನ ಒಲವು ತೋರುವ ಮೂಲಕ ಭೂಮಿಯ ಫಲತ್ತತೆ ಕಾಪಾಡುವ ಜೊತೆಗೆ ಯುವ ರೈತರಿಗೆ ಆಸಕ್ತಿ ಮೂಡಿಸುವ ಕೆಲಸ ಮಾಡಬೇಕು ಎಂದರು.

ಹಿಂದೆ ಎಪಿಎಂಸಿ ಅಧ್ಯಕ್ಷನಾಗಿದ್ದ ಸಂದರ್ಭದಲ್ಲಿ ತೋಟಗಾರಿಕೆ ವಿವಿಯಲ್ಲಿ ನಡೆಸಿದ ಸಂಶೋಧನೆಗಳು ರೈತರ ಜಮೀನಿಗೆ ತಗೆದು-ಕೊಂಡು ಹೋಗುವ ನಿಟ್ಟಿನಲ್ಲಿ ಪ್ರಯೋಗಾಲಯದಿಂದ ಜಮೀನಿನ (ಲ್ಯಾಬ್ ಟು ಲ್ಯಾಂಡ್)ವರೆಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿತ್ತು. ಅದೇ ರೀತಿ ಇಂದು ಸಹ ವಿಜ್ಞಾನಿಗಳು ಸಂಶೋಧನೆ ಮಾಡಿದಂತಹ ಹೊಸ ಹೊಸ ಅವಿಷ್ಕಾರಗಳು ರೈತರಿಗೆ ತಲುಪಿಸುವ ಕೆಲಸ ಮಾಡಿ ತೋಟಗಾರಿಕೆ ವಿವಿಯ ದೇಶಕ್ಕೆ ಮಾದರಿಯಾಗುವ ಕೆಲಸ ಮಾಡಬೇಕೆಂದರು. ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಮಾತನಾಡಿ, ಮೊದಲು ಕೃಷಿಯ ಬಗ್ಗೆ ಅಲ್ಪ ಸ್ವಲ್ಪ ಮಾಹಿತಿ ಇತ್ತು. ಆದರೆ ತೋಟಗಾರಿಕೆ ವಿವಿಯ ವ್ಯವಸ್ಥಾಪನಾ ಮಂಡಳಿಯ ಸದಸ್ಯನಾದ ಮೇಲೆ ವಿಜ್ಞಾನಿಗಳು ಹೊರತರುವ ಹೊಸ ಹೊಸ ಸಂಶೋಧನೆಗಳ ಬಗ್ಗೆ ತಿಳಿದುಕೊಂಡು ನಂತರ ಈ ತೋಟಗಾರಿಕೆ ವಿವಿಯಲ್ಲಿ ಅಗಾಧವಾದ ಶಕ್ತಿ ಇದೆ ಎಂಬುದು ಗೊತ್ತಾಯಿತು. ಇದನ್ನು ರೈತರು ಸದುಪಯೋಗ ಪಡಿಸಿಕೊಳ್ಳಬೇಕು ಎಂದ ಸಚಿವರು, ತೋವಿವಿಯ ವ್ಯಾಪ್ತಿಯಲ್ಲಿರುವ ಪಿಜಿ ಹಾಗೂ ಸಂಶೋಧನ ಕೇಂದ್ರಗಳು ಬೇ-ರೊಂದು ವಿಶ್ವವಿದ್ಯಾಲಯಕ್ಕೆ ವಿಲೀನಗೊಳಿಸಲು ಹೊರಟಿರುವುದಕ್ಕೆ ಬೆಳಗಾವಿ ಅಧಿವೇಶನದಲ್ಲಿ ವಿರೋಧ ವ್ಯಕ್ತಪಡಿಸಿರುವುದಾಗಿ ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಹನಮಂತ ನಿರಾಣಿ ಮಾತನಾಡಿ, ರೈತರಿಗೆ ಮಾರ್ಗದರ್ಶನ ನೀಡುವಂತ ತೋಟಗಾರಿಕೆ ಮೇಳಗಳ ಪ್ರಯೋಜನ ರೈತರು ಪಡೆದುಕೊಳ್ಳಬೇಕು. ವಿಜ್ಞಾನಿಗಳು ಹೊರತಂದ ಹೊಸ ತಳಿಗಳ ಪ್ರಾತ್ಯಕ್ಷಿಕೆಗಳನ್ನು ನೋಡುವದಲ್ಲದೇ ಚರ್ಚೆಯಲ್ಲಿ ಸಹ ಭಾಗವಹಿಸಲು ಮುಂದಾಗಬೇಕು. ಅಂದಾಗ ಮಾತ್ರ ಹೊಸ ಹೊಸ ವಿಧಾನಗಳ ಬಗ್ಗೆ ಮಾಹಿತಿ ಪಡೆದುಕೊಂಡು ಕೃಷಿ, ತೋಟಗಾರಿಕೆಯಲ್ಲಿ ಉತ್ತಮ ಬೆಳೆ ಬೆಳೆದು ಆರ್ಥಿಕವಾಗಿ ಮುಂದೆ ಬರಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಎಚ್.ವಾಯ್.ಮೇಟಿ ಮಾತನಾಡಿ, ಕೃಷಿ ಹಾಗೂ ತೋಟಗಾರಿಕೆಯಲ್ಲಿ ರಾಸಾಯನಿಕ ಗೊಬ್ಬರ ಹಾಗೂ ಔಷಧ ಸಿಂಪರಣೆ ಮಾಡುವುದನ್ನು ಕಡಿಮೆ ಮಾಡಿ ಗುಣಮಟ್ಟದ ಬೆಳೆ ಬೆಳೆಯುವ ನಿಟ್ಟಿನಲ್ಲಿ ತೆ-ಽಟಗಾರಿಕೆ ವಿವಿಯ ಸಂಶೋಧನೆ ನಡೆಸಲು ಮುಂದಾಗಬೇಕು. ಅಲ್ಲದೇ ತೋಟಗಾರಿಕೆಯಲ್ಲಿ ಪದವಿ ಪಡೆದವರು ಸರಕಾರಿ ನೌಕರರಿಗೆ ಅಂಟಿಕೊಳ್ಳದೇ ಕೃಷಿಯತ್ತ ಒಲವು ತೋರಿ ಉಳಿದ ರೈತರಿಗೆ ತಾವು ಕಲಿತದ್ದನ್ನು ಜಮೀನಿನಲ್ಲಿ ತೊಡಗಿಸಲು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಪ್ರಕಟಣೆಗಳನ್ನು ಬಿಡುಗಡೆ ಮಾಡಲಾಯಿತು. ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ, ವ್ಯವಸ್ಥಾಪನಾ ಮಂಡಳಿಯ ಸದಸ್ಯರಾದ ಡಾ.ಎಸ್.ಎನ್.ವಾಸುದೇವನ್, ಡಾ.ಅನಿತಾ, ಡಾ.ಎನ್.ಕೆ.ಹೆಗಡೆ, ಡಾ.ತಮ್ಮಯ್ಯ ಎನ್, ಮಹಾದೇವ ಮುರಗಿ ಸೇರಿದಂತೆ ಇತರರು

ಡಿ. 24 ರಂದು ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಶಾಂತಿಯುತ ಪ್ರತಿಭಟನೆ: ಸ್ವಾರಳ್ಳಿಕರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 21:-ಅಂಬೇಡ್ಕರ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಸ್ವಾಭಿಮಾನಿ ಡಾ. ಬಿ. ಆರ್ ಅಂಬೇಡ್ಕರ್ ವಾದಿಗಳ ಹೋರಾಟ ಸಮಿತ ವತಿಯಿಂದ ಡಿಸೇಂಬರ್ 24 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜನವಾಡ ರಸ್ತೆ ಬಳಿಯ ಅಂಬೇಡ್ಕರ್ ಭವನದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಶಾಂತಿಯುತ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸ್ವಾಭಿಮಾನಿ ಡಾ.ಬಿ.ಆರ್ ಅಂಬೇಡ್ಕರ್ ಹೋರಾಟ ಸಮಿತಿಯ ಅಧ್ಯಕ್ಷ ಉಮೇಶ್ ಸ್ವಾರಳ್ಳಿಕರ್ ಹೇಳಿದರು. ಅವರು ನಗರದಲ್ಲಿ ಶನಿವಾರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿ, ಅಮಿತ್ ಶಾ ಮಾತಿನಿಂದ ದೇಶದ ಅಂಬೇಡ್ಕರ್ ಅನುವಾಯಿಗಳಿಗೆ ಸಾಕಷ್ಟು ನೋವಾಗಿದೆ. ಅಂಬೇಡ್ಕರ್ ಬಗ್ಗೆ ಪ್ರಧಾನಿಗಳಿಗೆ ಅಭಿಮಾನ ಇದ್ದರೆ ಕೂಡಲೇ ಅಮಿತ್ ಶಾ ರಿಂದ ರಾಜೀನಾಮೆ ಪಡೆಯಬೇಕು ಎಂದು ಒತ್ತಾಯಿಸಿದರು.

ಸಮಿತಿ ಗೌರವ ಅಧ್ಯಕ್ಷ ರಾಜಕುಮಾರ ಮೂಲಭಾರತಿ ಮಾತನಾಡಿ, ಡಿ. 24 ರಂದು ನಡೆಯುವ ಹೋರಾಟದಲ್ಲಿ ಹೆಚ್ಚಿನ ಸಂಖ್ಯೆಯ ಜನ ಭಾಗವಹಿಸಬೇಕು. ಈ ಮೂಲಕ ಅಂಬೇಡ್ಕರ್ ಬಗ್ಗೆ ಅವಹೇಳನಕಾರಿ ಮಾತನಾಡಿರೆ ಏನಾಗುತ್ತದೆ ಎಂಬ ಎಚ್ಚರಿಕೆ ನೀಡಬೇಕು ಎಂದರು.

ಸಮಿತಿಯ ಪ್ರಾಧಾನ ಕಾರ್ಯದರ್ಶಿ ಮಹೇಶ್ ಗೋರನಾಳಕರ್ ಮಾತನಾಡಿ, ಈ ಹೋರಾಟ ಕೇವಲ ದಲಿತರಿಗೆ ಸೀಮಿತವಾಗಬಾರದು. ಎಲ್ಲಾ ಸಮುದಾಯದ ಜನ ಹೋರಾಟದಲ್ಲಿ ಭಾಗಿಯಾಗಬೇಕು. ಏಕೆಂದರೆ ಸಂವಿಧಾನ ಕೇವಲ ದಲಿತರಿಗೆ ಮಾತ್ರ ಹಕ್ಕು ಕೊಟ್ಟಿಲ್ಲ, ಮಾತದಾನದ ಹಕ್ಕು ಪಡೆದ ಪ್ರತಿಯೊಬ್ಬರೂ ಈ ಹೋರಾಟದಲ್ಲಿ ಭಾಗಿಯಾಗಬೇಕು ಎಂದು ಕರೆ ಕೊಟ್ಟರು.

ಈ ಪತ್ರಿಕಾಗೋಷ್ಠಿಯಲ್ಲಿ ಕಾರ್ಯಧ್ಯಕ್ಷ ವಿಷ್ಣುವರ್ಧನ್ ವಾಲದೊಡ್ಡಿ, ಉಪಾಧ್ಯಕ್ಷರಾದ ಅಂಬರೇಶ್ ಕುದರೆ, ಸಂಜುಕುಮಾರ್ ಭೋಸ್ಲೆ, ರಾಜಕುಮಾರ ಗುನ್ನಳ್ಳಿ, ಕಾರ್ಯದರ್ಶಿಗಳಾದ ಪವನ ಮಿಠಾರೆ, ಅಂಬೇಡ್ಕರ್ ಬೌದ್ಧೆ, ವಿಶಾಲ ಹೊನ್ನಾ, ಸಂಘಟನಾ ಕಾರ್ಯದರ್ಶಿ ರಾಹುಲ್ ಡಾಂಗೆ ಹಾಜರಿದ್ದರು.

# ರಾಂಪುರ ಪಿಕೆಪಿಎಸ್ ಚುನಾವಣೆ-34 ನಾಮಪತ್ರ ಸಲ್ಲಿಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.21-ಬಾಗಲಕೋಟೆ ತಾಲೂಕಿನ ರಾಂಪುರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ನಿರ್ದೇಶಕ ಮಂಡಳಿಯ 12 ಸ್ಥಾನಗಳ ಆಯ್ಕೆ ಚುನಾವಣೆಗೆ ಒಟ್ಟು 34 ನಾಮಪತ್ರಗಳು ಸಲ್ಲಿಕೆಯಾಗಿವೆ. ಸಾಮಾನ್ಯ ಸಾಲಗಾರರ ಕ್ಷೇತ್ರದ 5 ಸ್ಥಾನಗಳಿಗೆ 13 ನಾಮಪತ್ರಗಳು ಸಲ್ಲಿಕೆಯಾಗಿದ್ದು, ಪರಿಶಿಷ್ಟ ಜಾತಿಯ 1 ಸ್ಥಾನಕ್ಕೆ 2, ಪರಿಶಿಷ್ಟ ಪಂಗಡದ 1 ಸ್ಥಾನಕ್ಕೆ 2 ನಾಮಪತ್ರ ಸಲ್ಲಿಕೆಯಾಗಿವೆ.

ಮಹಿಳಾ ವಿಭಾಗದ 2 ಸ್ಥಾನಗಳಿಗೆ 7 ನಾಮಪತ್ರ, ಹಿಂದುಳಿದ 'ಅ' ವರ್ಗದ 1 ಸ್ಥಾನಕ್ಕೆ 3, ಹಿಂದುಳಿದ 'ಬ' ವರ್ಗದ 1 ಸ್ಥಾನಕ್ಕೆ 3 ಹಾಗೂ ಬಿನ್ ಸಾಲಗಾರರ ಕ್ಷೇತ್ರದ 1 ಸ್ಥಾನಕ್ಕೆ 4 ನಾಮಪತ್ರಗಳು ಸಲ್ಲಿಕೆಯಾಗಿವೆ.

ನಾಮಪತ್ರ ಸಲ್ಲಿಕೆಗೆ ಶನಿವಾರ ಕೊನೆಯ ದಿನವಾಗಿತ್ತು. ನಾಮಪತ್ರಗಳ ಪರಿಶೀಲನೆ ಡಿ.22 ರಂದು ನಡೆಯಲಿದೆ. ಡಿ.23 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದ್ದು, ಅಗತ್ಯವಿದ್ದಲ್ಲಿ ಡಿ.29 ಚುನಾವಣೆ ನಡೆಯಲಿದೆ ಎಂದು ಚುನಾವಣಾಧಿಕಾರಿ ಸಂಜಯ ಲಾಳಗೆ, ಸಹಾಯಕ ಚುನಾವಣಾಧಿಕಾರಿ ರವಿ ಕೆಂಚನ್ನವರ ಹಾಗೂ ಪಿಕೆಪಿಎಸ್ ಮುಖ್ಯ ಕಾರ್ಯನಿರ್ವಾಹಕ ಎ.ಜೆ. ದೇಶಪಾಂಡೆ ತಿಳಿಸಿದ್ದಾರೆ.

# ಬೇವೂರಿನಲ್ಲಿ ಮುದಿಯಪ್ಪಜ್ಜ ಬೆಳ್ಳಿಮೂರ್ತಿ ವೈಭವದ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.21-ತಾಲೂಕಿನ ಬೇವೂರ ಗ್ರಾಮದಲ್ಲಿ ಶನಿವಾರ ನೂತನವಾಗಿ ತಯಾರಿಸಲಾಗಿರುವ ಲಿಂ.ಮುದಿಯಪ್ಪಜ್ಜ ಬೆಳ್ಳಿಮೂರ್ತಿ ಮೆರವಣಿಗೆ ಸಡಗರ, ಸಂಭ್ರಮ ಹಾಗೂ ಶ್ರದ್ಧಾ-ಭಕ್ತಿಯಿಂದ ನಡೆಯಿತು.

ಮುಂಜಾನೆ 11 ಗಂಟೆಗೆ ಗ್ರಾಮದ ಕಲಗುಡಿ ಭಾಗದಲ್ಲಿರುವ ದುರ್ಗಾದೇವಿ ದೇವಸ್ಥಾನದಿಂದ ಟ್ರ್ಯಾಕ್ಟರ್ ಟ್ರೇಲರನಲ್ಲಿ ನಿರ್ಮಿಸಲಾದ ಭವ್ಯ ಮಂಟಪದಲ್ಲಿ ಮುದಿಯಪ್ಪಜ್ಜ ಬೆಳ್ಳಿಮೂರ್ತಿಯನ್ನಿರಿಸಿ ಮೆರವಣಿಗೆ ಪ್ರಾರಂಭಿಸಲಾಯಿತು.

ಪೂಜ್ಯ ಗ್ಯಾನಪ್ಪಜ್ಜನವರ ಸಾನಿಧ್ಯದಲ್ಲಿ ಮೆರವಣಿಗೆಗೆ ಚಾಲನೆ ನೀಡಲಾಯಿತು. ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಹಾಯ್ದು ಹೊರಟ ಮೆರವಣಿಗೆಗೆ ಕುಂಭ ಹೊತ್ತ ಇನ್ನೂರಕ್ಕೂ ಹೆಚ್ಚು ಜನ ಮಹಿಳೆಯರು ಕಳೆ ತಂದರು. ಗಣಿ, ಬೆಣ್ಣೂರ, ಬೋಡನಾಯಕದಿನ್ನಿ ಸೇರಿದಂತೆ ಅನೇಕ ಗ್ರಾಮಗಳ ಡೊಳ್ಳು ಮೇಳಗಳು, ಕುದರಿ ಸಾಲವಾಡಗಿಯ ಹಲಗಿ ಮಜಲು, ಕುದುರೆ ಕುಣಿತ ಹಾಗೂ ಗೊಂಬಿಗಳ ಕುಣಿತ ಸೇರಿ ವಿವಿಧ ವಾದ್ಯ ಮೇಳಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದವು.

ಬೇವೂರ ಸೇರಿ ವಿವಿಧ ಗ್ರಾಮಗಳ ಜನ ಸಹ ಪಾಲ್ಗೊಂಡಿದ್ದ ಮೆರವಣಿಗೆ ಹುಚ್ಚೇಶ್ವರ ಮಠದ ಮೂಲಕ ಗ್ರಾಪಂ ಕಚೇರಿ, ಬಜಾರನಲ್ಲಿ ಹಾಯ್ದು ಗ್ಯಾನಪ್ಪಜ್ಜನ ಕಟ್ಟೆ ತಲುಪಿತು. ಮಾರ್ಗದುದ್ದಕ್ಕೂ ಕುಂಭ ಹೊತ್ತ ಮಹಿಳೆಯರು, ಕಲಾ ತಂಡಗಳಿಗೆ ತಂಪು ಪಾನೀಯ, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿತ್ತು. ನಂತರ ಪ್ರಸಾದ ವ್ಯವಸ್ಥೆ ನಡೆಯಿತು.

ಜಿ.ವೈ.ಹೆರಕಲ್ಲ ನೇತೃತ್ವದಲ್ಲಿ ನಡೆದ ಮೆರವಣಿಗೆಯಲ್ಲಿ ಡಾ.ಎಂ.ಜಿ.ಹೆರಕಲ್ಲ, ಎಸ್.ಎಂ.ಹೆರಕಲ್ಲ, ನ್ಯಾಯವಾದಿಗಳಾದ ಜಿ.ಜಿ.ಮಾಗನೂರ ಹಾಗೂ ಬಿ.ಬಿ.ತೆಗ್ಗಿನಮನಿ, ಎಂ.ಎಸ್. ವೈಜಾಪೂರ, ಸಂಗಣ್ಣ ಮಾಗನೂರ, ಗ್ರಾಪಂ ಅಧ್ಯಕ್ಷೆ ಫರಿದಾ ಗುರಗುನ್ನಿ, ಸದಸ್ಯ ಶರಣಪ್ಪ ಮಾಗನೂರ, ಬಸವರಾಜ ಮಸಬಿನಾಳ, ಎಂ.ಎಸ್.ಮೇಟಿ, ಗ್ರಾಪಂ ಸದಸ್ಯರು, ಮತ್ತಿತರ ಪ್ರಮುಖರು, ಯುವಕರು, ಅಪಾರ ಸಂಖ್ಯೆಯ ಮಹಿಳೆಯರು ಪಾಲ್ಗೊಂಡಿದ್ದರು.

# ಮುರನಾಳದಲ್ಲಿ ಲಕ್ಷದೀಪೋತ್ಸವದ ಸಂಭ್ರಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.21-ತಾಲೂಕಿನ ಮುರನಾಳ ಪುನರವಸತಿ ಕೇಂದ್ರದಲ್ಲಿ ಮಳೇರಾಜೇಂದ್ರಸ್ವಾಮಿ ಕಾರ್ತಿಕೋತ್ಸವದ ಅಂಗವಾಗಿ ಲಕ್ಷ ದೀಪೋತ್ಸವ ಸಂಭ್ರಮದಿಂದ ಜರುಗಿತು.



ಮಳೇರಾಜೇಂದ್ರಸ್ವಾಮಿ ಮಠದ ಗರ್ಭಗುಡಿ ಆವರಣದಲ್ಲಿ ಮೌನೇಶ್ವರಸ್ವಾಮಿ ಮಹಾಪುರುಷ ನೇತೃತ್ವದಲ್ಲಿ ಲಕ್ಷ ದೀಪೋತ್ಸವ ಜರುಗಿತು. ನಂತರ ಗುರುವಂದನಾ, ತುಲಾಭಾರ ಕಾರ್ಯಕ್ರಮ, ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕಮತಗಿಯ ಹೊಳೆ ಹುಚ್ಚೇಶ್ವರ ಸ್ವಾಮೀಜಿ, ಮಳೇರಾಜೇಂದ್ರಸ್ವಾಮಿ ಮಠ ಈ ಭಾಗದ ರೈತರ ವಿಶ್ವವಿದ್ಯಾಲಯ ಇದ್ದಂತೆ. ಮಳೆ ಬಾರದಿದ್ದಾಗ ರೈತಾಪಿ ಜನ ಮಠಕ್ಕೆ ಬಂದು ಮಳೆ ಬೆಳೆ ಭವಿಷ್ಯ ಕೇಳುವ ಪದ್ಧತಿ ಈಗಲೂ ಇದೆ ಎಂದು ಸ್ಮರಿಸಿದರು. ಸಾನಿಧ್ಯ ವಹಿಸಿದ್ದ ಶ್ರೀಮಠದ ಹಿರಿಯ ಪೂಜ್ಯ ಮಳಿಯಪ್ಪಯ್ಯ ಸ್ವಾಮೀಜಿ ಮಾತನಾಡಿ, ಮಠದ ತ್ರಿವಳಿ ದಾಸೋಹ ವಿಶ್ವಕ್ಕೆ ಮಾದರಿಯಾಗಿದ್ದು, ಸರ್ವಧರ್ಮ ಸಮನ್ವಯ ತತ್ವ ಸಾರಿದ ಈ ಮಠ ಜಲತತ್ವ ಸಿದ್ಧಾಂತ ಪ್ರತಿಪಾದಿಸಿದೆ ಎಂದು ಹೇಳಿದರು.

ಅಂಕಲಿ ಮಠದ ಬಸವರಾಜ ಸ್ವಾಮೀಜಿ, ಗುಳೇದಗುಡ್ಡದ ಕಾಶೀನಾಥ ಶ್ರೀಗಳು, ಕೊಣ್ಣೂರಿನ ಶಿವುಕುಮಾರ ಸ್ವಾಮೀಜಿ, ಗುರುನಾಥಸ್ವಾಮೀಜಿ, ಜಗನ್ನಾಥ ಸ್ವಾಮೀಜಿ, ಗ್ರಾಮದ ಹಿರಿಯರು ಇದ್ದರು.

ಶ್ರೀಮಠದ ಹಿರಿಯ ಪೂಜ್ಯರಾದ ಮಳಿಯಪ್ಪಯ್ಯ ಸ್ವಾಮಿಗಳಿಗೆ ತುಲಾಭಾರ ಮಾಡಿ ಗುರುವಂದನೆ ಸಲ್ಲಿಸಲಾಯಿತು. ನಂತರ ರಸಮಂಜರಿ ಕಾರ್ಯಕ್ರಮ ನಡೆಯಿತು.

# ರಸ್ತೆ ಸುರಕ್ಷತೆ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಿ: ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.21-ಸಾರ್ವಜನಿಕರಿಗೆ ರಸ್ತೆ ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ತಿಳುವಳಿಕೆ ನೀಡುವ ನಿಟ್ಟಿನಲ್ಲಿ ಹೆಚ್ಚಿನ ಮಟ್ಟದ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ.ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪತ್ರಿಕೆಗಳು, ರೇಡಿಯೋ ಜಿಂಗಲ್ಸ್ ಮೂಲಕ ರಸ್ತೆ ಸುರಕ್ಷತಾ ಕ್ರಮಗಳನ್ನು ಅನುಸರಿಸುವ ಕುರಿತು ಪ್ರಚಾರ ಕೈಗೊಳ್ಳಬೇಕು. ಹೆಲ್ಮೇಟ್ ಧರಿಸುವುದು ಕಡ್ಡಾಯ ಎನ್ನುವಂತಾಗಬೇಕು ವಾಹನ ಸವಾರರು ಹೆಲ್ಮೇಟ್ ಧರಿಸದೇ ಓಡಾಡಿದಲ್ಲಿ ಅವರ ಮನೆ ವಿಳಾಸಕ್ಕೆ ನೋಟಿಸಿನೊಂದಿಗೆ ದಂಡ ಕಟ್ಟುವ ಸಂದೇಶರವಾನಿಸುವ ಕೆಲಸವಾಗಬೇಕು ಎಂದು ಹೇಳಿದರು.

ಕಳೆದ ವರ್ಷದ ಕಬ್ಬು ಕಟಾವಿನ ವೇಳೆಯಲ್ಲಿ ಹೆಚ್ಚಿನ ಸಂಖ್ಯೆಯ ಟ್ರ್ಯಾಕ್ಟರ್ ಚಾಲಕರು ಸೌಂಡ್ ಸಿಸ್ಟಮ್‌ಗಳನ್ನು ಅಳವಡಿಸಿಕೊಂಡು ಓಡಾಡಿಕೊಂಡಿದ್ದರು. ಆದರೆ ಈ ವರ್ಷ ಅವರಲ್ಲಿ ಅದರಿಂದಾಗುವ ಅನಾಹುತಗಳ ಕುರಿತು ಎಚ್ಚರಿಕೆ ನೀಡಿದ್ದರಿಂದ ಅಬ್ಬರದ ದ್ವನಿ ಕಡಿಮೆಯಾಗಿದೆ. ಇದೊಂದು ಒಳ್ಳೆಯ ಬೆಳವಣಿಗೆ ಇದೇ ರೀತಿ ಎಲ್ಲಾ ರೀತಿಯ ರಸ್ತೆ ಸುರಕ್ಷತಾ ಕ್ರಮಗಳನ್ನು ಎಲ್ಲಾ ವಾಹನ ಸವಾರರು ಮತ್ತು ಹಿಂಬಂದಿ ಸವಾರರು ಅಳವಡಿಸಿಕೊಳ್ಳುವ ರೀತಿಯಲ್ಲಿ ಜನಜಾಗೃತಿಯಾಗಬೇಕು ಎಂದು ತಿಳಿಸಿದರು.

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಲೋಕೋಪಯೋಗಿ ಇಲಾಖೆ ಕಾರ್ಯನಿರ್ವಾಹಕ ಇಂಜಿನೀಯರ್ ಕೆ.ದುರ್ಗಾದಾಸ ಮಾತನಾಡಿ, ರಾಷ್ಟ್ರೀಯ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಬರುವ ಬ್ಲಾಕ್ ಸ್ಪಾಟ್‌ಗಳನ್ನು ಸರಿಪಡಿಸುವ ಕ್ರಮ, ಮುಧೋಳ ತಾಲೂಕಿನ ಬಾಯ್‌ಪಾಸ್ ರಸ್ತೆ ಮೇಲೆ ಜಂಕ್ಷನಗಳಲ್ಲಿ ಸೂಚನಾ ಫಲಕಗಳನ್ನು ಹಾಗೂ ರಂಬಲ್ ಸ್ಟ್ರಿಪ್ಸ್‌ಗಳನ್ನು ಲೋಕೋಪಯೋಗಿ ಇಲಾಖೆಯಿಂದ ಅಳವಡಿಸಲು ಮತ್ತು ಮಹಾಲಿಂಗಪೂರ ರಸ್ತೆಯನ್ನು ಕರ್ನಾಟಕ ರಾಜ್ಯ ಹೆದ್ದಾರಿಗಳ ಅಭಿವೃದ್ಧಿಯ ಯೋಜನೆ(ಕೆಶಿಪ) ಗೋಕಾಕ ಉಪವಿಭಾಗ ರವರಿಂದ ಮೇಲ್ದರ್ಜೆಗೇರಿಸಿದರಿಯವರಿಂದಲೇ ನಿರ್ವಹಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ವರದಿ ನೀಡಿದರು. ಸಭೆಯಲ್ಲಿ ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

# ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.21-ಮಾಜಿ ಸಚಿವರು ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಾಬುರಾವ್ ಚಿಂಚನಸೂರ್ ಅವರು ಡಿಸೆಂಬರ್ 22 ರಂದು ಭಾನುವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ. ಪಂಡಿತ ರಂಗಮಂದಿರದ ಎದುರಿಗೆಯಿರುವ ನೂತನವಾಗಿ ನಿರ್ಮಿಸಿರುವ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯ ಕಲಬುರಗಿ ಶಾಖಾ ಆಸ್ಪತ್ರೆಯ ಲೋಕಾರ್ಪಣೆ ಸಮಾರಂಭದಲ್ಲಿ ಭಾಗವಹಿಸುವರು.

# ಸುರಪುರ ಅಮಿತ್ ಶಾ ವಿರುದ್ಧ ದಲಿತ ಸಂಘರ್ಷ ವತಿಯಿಂದ ಬೃಹತ್ ಪ್ರತಿಭಟನೆ




(ಮಲ್ಲಿಕಾರ್ಜುನ್ ಮಳಿಕೇರಿ)

ಮಲ್ಲಮ್ಮ ನುಡಿ ವಾರ್ತೆ ಅಮಿತ್ ಶಾ ವಿರುದ್ಧ ದೇಶದ್ರೋಹ ಪ್ರಕರಣ ದಾಖಲಿಸಿ ಸಂಸದ ಸ್ಥಾನದಿಂದ ವಜಾಗೊಆಸಲು ಆಗ್ರಹಿಸಿ ಬೃಹತ್ ಪ್ರತಿಭಟನೆ"

ಸುರಪುರ ದೇಶದ ಸಂಸತ್ ಭವನದಲ್ಲಿ ಸಂವಿಧಾನ ಶಿಲ್ಪಿ

ಡಾ.ಬಿ.ಆರ್.ಅಂಬೇಡ್ಕರ್ ಅವರ ಕುರಿತು ಅವಹೇಳನಕಾರಿ

ಹೇಳಿಕೆ ನೀಡಿರುವ ಕೇಂದ್ರದ ಗೃಹ ಮಂತ್ರಿ ಅಮಿತ್ ಶಾ ಅವರನ್ನು ಭಾರತೀಯ ಪೌರತ್ವ ರದ್ದು ಮಾಡಿ ಹಾಗೂ ಭಾರತ ಸರ್ಕಾರದ ಕ್ಯಾಬಿನೆಟ್ ನಿಂದ ವಜಾಗೊಳಿಸಿ, ಅವರ ಮೇಲೆ ದೇಶದ್ರೋಹ ಪ್ರಕರಣದಡಿಯಲ್ಲಿ ಬಂಧಿಸಿ ಎಂದು ಆಗ್ರಹಿಸಿ ಸುರಪುರ ತಹಶೀಲ್ದಾರ್ ಮೂಲಕ ರಾಷ್ಟಪತಿಗಳಿಗೆ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರವಾದ) ವತಿಯಿಂದ

ಮನವಿ ಪತ್ರ ಸಲ್ಲಿಸಿದರು.

ಮನವಿ ಪತ್ರ ಸಲ್ಲಿಸಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರವಾದ ರಾಜ್ಯ ಸಮಿತಿ

ಸದಸ್ಯರಾದ ನಾಗಣ್ಣ ಬಡಿಗೇರ ಅವರು, ಶತ ಶತಮಾನಗಳಿಂದ ಜಾತಿ ವರ್ಣ ವ್ಯವಸ್ಥೆಯ ವಾಕ್ಯದ

ಸಂಕೋಲೆಯಿಂದ ಬಿಡುಗಡೆಗೊಳಿಸಿದ ಮಹಾನಾಯಕ, ಇಡೀ ದೇಶ

# ರಾಜ್ಯದ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.21--ರಾಜ್ಯದ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರಾದ ಡಿ. ಸುಧಾಕರ್ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಡಿಸೆಂಬರ್ 22 ರಂದು ಭಾನುವಾರ ಬೆಳಿಗ್ಗೆ 11.40 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಬೆಳಿಗ್ಗೆ 12 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ. ಪಂಡಿತ ರಂಗಮಂದಿರದ ಎದುರಿಗೆಯಿರುವ ನೂತನವಾಗಿ ನಿರ್ಮಿಸಿರುವ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯ ಕಲಬುರಗಿ ಶಾಖಾ ಆಸ್ಪತ್ರೆಯ ಲೋಕಾರ್ಪಣೆ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಸಂಜೆ 4.20 ಗಂಟೆಗೆ ಕಲಬುರಗಿಯಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

ಹುನಗುಂದದಲ್ಲಿ ಜಾನ್ ಡಿಯರ್ ಶೋರೂಂ ಉದ್ಘಾಟನೆ

# ರೈತರ ಅನುಕೂಲಕ್ಕೆ ತಾಲೂಕಿಗೊಂದು ಶೋರೂಂ-ಕೃಷ್ಣಮೂರ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.21-ಜಿಲ್ಲೆಯ ಹುನಗುಂದ ನಗರದ ಜಾನ್ ಡಿಯರ್ ಅಧಿಕೃತ ಮಾರಾಟಗಾರ ಶ್ರೀ ಸಾಯಿ ಅಗ್ರಿಕಲ್ಚರಲ್ ಟ್ರೇಡರ್ಸನವರು ರಾಷ್ಟ್ರೀಯ ಹೆದ್ದಾರಿ 50 ರ ಸರ್ವಿಸ್ ರಸ್ತೆಯಲ್ಲಿ ನೂತನವಾಗಿ ಪ್ರಾರಂಭಿಸಿರುವ ಜಾನ್ ಡಿಯರ ಶೋರೂಂ ಮತ್ತು ಸೇವಾ ಕೇಂದ್ರವನ್ನು ಕಂಪನಿಯ ದಕ್ಷಿಣ ಕರ್ನಾಟಕ ವಲಯದ ಬ್ಯುಸಿನೆಸ್ ಮ್ಯಾನೇಜರ್ ಕೃಷ್ಣಮೂರ್ತಿ ಮತಿವನ್ನನ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತಾಪಿ ವರ್ಗಕ್ಕೆ ಅನುಕೂಲವಾಗುವ ದೃಷ್ಠಿಯಿಂದ ತಾಲೂಕಿಗೊಂದು ಜಾನ್ ಡಿಯರ್ ಶೋರೂಂ ಪ್ರಾರಂಭಿಸಲಾಗುವುದು ಎಂದು ಹೇಳಿದರು.

ಕರ್ನಾಟಕ ಕಸ್ಟಮರ್ ಸಪೋರ್ಟ ಮ್ಯಾನೇಜರ್ ದೀಪಕ ಕುಮಾರ, ವರ್ಕ್ಸ್ ಶಾಪ್ ಉದ್ಘಾಟಿಸಿ ಮಾತನಾಡಿ, ಬಾಗಲಕೋಟೆ ಜಿಲ್ಲೆಯಲ್ಲಿ ಜಾನ್ ಡಿಯರ್ ಎಂ.ಡಿ ಶಿವನಗೌಡ ರಂಗನಗೌಡರ ಇವರ ಮಾಲಿಕತ್ವದಲ್ಲಿ ಅತೀ ಹೆಚ್ಚು ಜಾನ್ ಡಿಯರ್ ಟ್ಯಾಕ್ಟರಗಳು ಮಾರಾಟವಾಗಿವೆ. ಅವರು ರೈತರಿಗೆ ಹೆಚ್ಚು ಅನುಕೂಲ ಮಾಡಿಕೊಟ್ಟಿದ್ದು ಅವರ ಸೇವಾ ಮನೋಭಾವನೆ ಮೆಚ್ಚುವಂತಹದ್ದು ಎಂದು ಹೇಳಿದರು.

ಡೀಲರ್ ಡೆವಲಪಮೆಂಟ್ ಮ್ಯಾನೇಜರ್ ರಾಜೇಶ ಜೋತಿಮನಿ, ಜಾನ್ ಡಿಯರ್ ಟ್ಯಾಕ್ಟರ ವಿಶೇಷತೆಗಳ ಬಗ್ಗೆ ವಿವರಿಸಿ, ರೈತರ ಕೆಲಸಗಳಿಗೆ ತಕ್ಕಂತೆ ಜಾನ್‌ಡಿಯರ ಸಂಸ್ಥೆ ಟ್ಯಾಕ್ಟರಗಳನ್ನು ಬಿಡುಗಡೆ ಮಾಡುತ್ತದೆ. ಬೇರೆ ಟ್ಯಾಕ್ಟರಗಳಿಗೆ ಹೋಲಿಸಿದರೆ ಜಾನಡಿಯರಿ ಟ್ಯಾಕ್ಟರ ಟೆಕನಾಲಜಿಯಲ್ಲಿ ಅತ್ಯಂತ ಮಂಚೂಣಿ ಸ್ಥಾನದಲ್ಲಿದೆ. ಸುಲಭ ಬಡ್ಡಿದರದಲ್ಲಿ ರೈತರಿಗೆ ಸಾಲ ಸೌಲಭ್ಯ ಕೂಡ ಸಿಗುತ್ತದೆ ಎಂದು ಹೇಳಿದರು.

ಮುಧೋಳದ ಸಾಯಿ ಅಗ್ರಿಕಲ್ಚರ ಟ್ರೇಡರ್ಸನ ಮ್ಯಾನೇಜಿಂಗ್ ಡೈರೆಕ್ಟರ್ ಶಿವನಗೌಡ ರಂಗನಗೌಡರ ಮಾತನಾಡಿ, ನಮ್ಮ ಸಂಸ್ಥೆ ಅತಿ ಹೆಚ್ಚು ಟ್ಯಾಕ್ಟರ್ ಮಾರಾಟ ಮಾಡಿ ಜಿಲ್ಲೆಯಲ್ಲಿ ಪ್ರಥಮ ಸ್ಥಾನದಲ್ಲಿದೆ. ಕಳೆದ 12 ವರ್ಷಗಳಿಂದ ಸೇವೆಯಲ್ಲಿದ್ದು ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಲ್ಲಿ ವರ್ಷಕ್ಕೆ ಸುಮಾರು 600 ಟ್ರ್ಯಾಕ್ಟರ್ ಮಾರಾಟವಾಗುತ್ತಿವೆ ಎಂದರು.

**ಫಲಶ್ರೇಷ್ಠ ರೈತರಿಗೆ ಸನ್ಮಾನ**

ಬಾಗಲಕೋಟೆಯ ಫಕೀರಪ್ಪ ಮಾದರ, ಹಾವೇರಿಯ ಮುಪ್ಪಿನಾರ್ಯ ಧೂಳೇಹೊಳೆ, ಬೀದರ ಜಿಲ್ಲೆಯ ರಾಜೇಶ ಬಸನಾಳ, ಕಲಬುರ್ಗಿ ಜಿಲ್ಲೆಯ ರೇವಣಸಿದ್ದಪ್ಪ ಹಾಳಕಿ, ಕೋಲಾರ ಜಿಲ್ಲೆಯ ಮಂಜುನಾಥ ಟಿ.ಎಂ, ಉತ್ತರ ಕನ್ನಡ ಜಿಲ್ಲೆಯ ಪ್ರಕಾಶ ನಾಯಕ, ವಿಜಯಪುರ

ಕಾರ್ಯಕ್ರಮಕ್ಕೂ ಪೂರ್ವದಲ್ಲಿ ಸುನಗದ ಪ್ರವೀಣ ಹಿರೇಮಠ, ಪ್ರಕಾಶ ಹಿರೇಮಠ, ಪಂಚಾ-ಕ್ಷರಯ್ಯ ಹಿರೇಮಠ, ಬಸಯ್ಯ ವಿಭೂತಿಮಠ ಪೂಜೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಿದರು.

ರೈತರಾದ ಶಿವಾನಂದ ಬಸಪ್ಪ ಬದಾಮಿ ಹಾಗೂ ರಾಮಪ್ಪ ಯವನಪ್ಪ ಮ್ಯಾಗೇರಿ ಅವರುಗಳು ಹೊಸ ಟ್ರ್ಯಾಕ್ಟರ್ ಖರೀದಿಸಿದರು.

ಹುನಗುಂದ ಶಾಖೆ-ಯ ಮ್ಯಾನೇಜರ್ ನಾಗರಾಜ ಬಲವಂತನವರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜು ಪಾಟೀಲ ನಿರೂಪಿಸಿದರು. ವೆಂಕಟೇಶ ಇಟಗಿ ವಂದಿಸಿದರು.

ಗೋವಾ ವಿಮೋಚನಾ ದಿನದ ಮುನ್ನಾದಿನದಂದು ಹುತಾತ್ಮ ಬಸವರಾಜ ಹುಡುಗಿ ಅವರ

## ಪುತ್ರ ದಿಲೀಪಕುಮಾರ್ ಅವರಿಗೆ ಗೋವಾ ಸರ್ಕಾರದಿಂದ ಸನ್ಮಾನ




(ರಾಜಕುಮಾರ ಆರ್. ಹಡಪದ)

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಗೋವಾವಿಮೋಚನಾ ದಿನದ ಮುನ್ನಾದಿನದಂದು ಮುಖ್ಯಮಂತ್ರಿಡಾ.ಪ್ರಮೋದ್ ಸಾವಂತ್ ಅವರು ಕರಾವಳಿ ರಾಜ್ಯದಲ್ಲಿ ಪೋರ್ಚುಗೀಸ್ ವಸಾಹತುಶಾಹಿ ಆಳ್ವಿಕೆಯನ್ನು ಕೊನೆಗೊಳಿಸಲು ಚಳುವಳಿಯ ಸಂದರ್ಭದಲ್ಲಿ ಪ್ರಾಣ ತ್ಯಾಗ ಮಾಡಿದವರ ಕುಟುಂಬ ಸದಸ್ಯರನ್ನು ಅಹ್ವಾನಿಸಿ ಬುಧವಾರ ಸನ್ಮಾನಿಸಿ ಗೌರವಿಸಿದರು. ಚಿಟಗುಪ್ಪ ಪಟ್ಟಣದ ಹೆಮ್ಮೆಯ ಸುಪುತ್ರ ಗೋವಾ ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದ ಬಸವರಾಜ ಹುಡಗಿ ಅವರ ಸುಪುತ್ರ ಪುರಸಭೆ ಮಾಜಿ ಅಧ್ಯಕ್ಷರು ಹಾಲಿ ಸದಸ್ಯರಾದ ದಿಲೀಪಕುಮಾರ್ ಬಗ್ದಲಕ್ಕರ್ ಅವರನ್ನು ಅಹ್ವಾನಿಸಿ ಗೋವಾ ವಿಧಾನ ಸಭಾ ಸಭಾಂಗಣದಲ್ಲಿ ಹುತಾತ್ಮರ ಕುಟುಂಬಕ್ಕೆ 10 ಲಕ್ಷ ರೂಪಾಯಿ ಗೌರವಧನ ಹಾಗೂ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಿದರು. ನಂತರ ಗೋವಾ ಮುಖ್ಯಮಂತ್ರಿ ಡಾ. ಪ್ರಮೋದ ಸಾವಂತ ಅವರು ಮಾತನಾಡಿ, 1961 ರಲ್ಲಿ ಪೋರ್ಚುಗೀಸರಿಂದ ರಾಜ್ಯವನ್ನು ವಿಮೋಚನೆಗೊಳಿಸಲು ಸಶಸ್ತ್ರ ಪಡೆಗಳು ಕೈಗೊಂಡ 'ಆಪರೇಷನ್ ವಿಜಯ್' ಯಶಸ್ಸನ್ನು ಗುರುತಿಸಲು ಪ್ರತಿ ವರ್ಷ ಡಿಸೆಂಬರ್ 19 ರಂದು ಗೋವಾ ವಿಮೋಚನಾ ದಿನವನ್ನು ಆಚರಿಸಲಾಗುತ್ತದೆ. ಹಲವಾರು ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಗಳನ್ನು ಸನ್ಮಾನಿಸಲಾಯಿತು. ಹುತಾತ್ಮರಾದ ಕೆಲವರನ್ನು ಬಾಲರಾಯ ಮಾಪಾರಿ, ಬಸವರಾಜ ಹುಡಗಿ, ಶೇಷನಾಥ ವಾಡೇಕರ್, ತುಳಶಿರಾಮ್ ಬಾಲಕೃಷ್ಣ ಹಿರ್ವೆ, ಬಾಬುರಾವ್ ಕೇಶವ ಥೋರಟ್, ಸಖಾರಾಮ್ ಶಿರೋಡ್ಕರ್, ರೋಹಿದಾಸ್ ಮಾಪಾರಿ, ಯಶವಂತ ಅಗರವಾಡೇಕರ್, ರಾಮಚಂದ್ರ ನೇವಗಿ, ಬಾಪು ವಿಷ್ಣು ಗವಾಸ್, ಬಬ್ಲಾಲಿಂಗ್ ಟಿ, ಲಕ್ಷ್ಮಣ ಪರಬ್, ಲಕ್ಷ್ಮಣ ಪರಬ್, ಲಕ್ಷ್ಮಣ್, ಮತ್ತು ಪರಶುರಾಮ ಆಚಾರ್ಯ ಈ ವೀರ ಹೋರಾಟದಲ್ಲಿ, 74 ಕೆಚ್ಚೆದೆಯ ಆತ್ಮಗಳು ಅಂತಿಮ ತ್ಯಾಗವನ್ನು ಮಾಡಿದ್ದಾರೆ ಮತ್ತು ನಮ್ಮ ಸರ್ಕಾರದ ಈ ಗುರುತಿಸುವಿಕೆ ಮತ್ತು ಅಭಿನಂದನೆಯು ಈ ಸ್ವಾತಂತ್ರ್ಯ ಹೋರಾಟಗಾರರು ಮತ್ತು ಅವರ ಕುಟುಂಬಗಳ ತ್ಯಾಗವನ್ನು ಗೌರವಿಸಲು ಮತ್ತು ಸ್ಮರಿಸಲು ನಮ್ಮ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ" ಎಂದು ಸಾವಂತ್ ಹೇಳಿದರು.

ಗೋವಾ ಸರ್ಕಾರ ಹುತಾತ್ಮರ ಕುಟುಂಬದವರಿಗೆ ಅಹ್ವಾನಿಸಿ ವಿಶೇಷವಾದ ಸನ್ಮಾನ ಮಾಡಿ ಗೌರವಿಸಿ ಸ್ವಯಂ ಪ್ರೇರಣೆಯಿಂದ ಹುತಾತ್ಮರ ಕುಟುಂಬಗಳಿಗೆ 10 ಲಕ್ಷ ರೂಪಾಯಿ ನೀಡುತ್ತಿರುವುದು ಸಂತೋಷ. ನಾವು ಸರ್ಕಾರಕ್ಕೆ ಯಾವುದೇ ಸಹಾಯ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿಲ್ಲಾ. ಇಲಿಯವರೆಗೆ ಸರ್ಕಾರದ ಯಾವುದೇ ಸೌಲಭ್ಯ ಪಡೆದಿಲ್ಲಾ. ಸರ್ಕಾರ ಹುತಾತ್ಮರ ಕುಟುಂಬಕ್ಕೆ 10 ಲಕ್ಷ ರೂಪಾಯಿ ನೀಡುತ್ತಿದೆ. ಗೋವಾ ಸರ್ಕಾರಕ್ಕೆ ಧನ್ಯವಾದಗಳು ಸಲ್ಲಿಸಿದರು.



**ದಿಲೀಪಕುಮಾರ್ ಬಿ. ಬಗ್ದಲ್ಕರ ಪುರಸಭೆ ಮಾಜಿ ಅಧ್ಯಕ್ಷರು ಹಾಲಿ ಸದಸ್ಯರು ಚಿಟಗುಪ್ಪ.**

## ಸೋನಾಳ ಗ್ರಾಮದಲ್ಲಿ ಸಂಭ್ರಮದ ರಥೋತ್ಸವ



(ಪರಮೇಶ ರಾಂಪುರೆ)

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ತಾಲೂಕಿನ ಸೋನಾಳ ಗ್ರಾಮದಲ್ಲಿ ಲಿಂ. ನಿರಂಜನ ಮಹಾ ಸ್ವಾಮಿಗಳ 15ನೇ ಪುಣ್ಯ ಸ್ಮರಣೋತ್ಸವ ನಿಮಿತ್ತ ನೂತನ ರಥೋತ್ಸವ ಶನಿವಾರ ಸಂಜೆ ಜರುಗಿತು.

ಚನ್ನವೀರ ಮಹಾಸ್ವಾಮಿಗಳ ನೇತೃತ್ವದಲ್ಲಿ 15 ಜನರ ಸ್ವಾಮೀಜಿಗಳ ಪಾದ ಪೂಜೆಯನ್ನು ಗ್ರಾಮದ ಭಕ್ತರು ಮಾಡಿದರು. ನಂತರ ಎಲ್ಲಾ ಶ್ರೀಗಳಿಂದ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. 21 ಅಡಿ ಉದ್ದ ಮತ್ತು 12 ಫೀಟ್ ಅಗಲ ಹೊಂದಿರುವ ರಥವನ್ನು ವಿರಕ್ತ ಮಠದ ಚನ್ನವೀರ ಸ್ವಾಮಿಗಳು ರಥಕ್ಕೆ ಪೂಜೆ, ಟೆಂಗು ಮತ್ತು ನೈವಧ್ಯವನ್ನು ಅರ್ಪಿಸಿ ಧಾರ್ಮಿಕ ವಿಧಿ ವಿಧಾನಗಳನ್ನು ಪೂರ್ಣಗೊಳಿಸಿ ಶುಭ ಮಂಗಲ ಹಾಡಿದರು.

ಮೇರೇವಣಿಗೆ ಉದ್ದಕ್ಕೂ ನೂರಾರು ಜನ ಮಹಿಳೆಯರು, ಅಲಂಕಾರ ಮಾಡಿದ ಪೂರ್ಣಕುಂಭ (ಕಳಸ) ಹೊತ್ತಿ ಮೇರೇವಣಿಗೆಯಲ್ಲಿ ಭಾಗವಹಿಸಿ, ಜನರ ಕಣ್ಮನ ಸೆಳೆದರು. ಇದೇ ಸಂದರ್ಭದಲ್ಲಿ ಭಾಜಾ ಭಜಂತ್ರಿ, ಡೊಳ್ಳು ಕುಣಿತದಿಂದ ಇಡಿ ಗ್ರಾಮವು ಉತ್ಸವ ಉಲ್ಲಾಸದಿಂದ ಕುಣಿದು ಕುಪ್ಪಳಿಸಿತು.

ಗ್ರಾಮದ ಹನುಮಾನ ದೇವಾಲಯದಿಂದ' ಪ್ರಾರಂಭಗೊಂಡ ರಥ ಮೆರವಣಿಗೆ ನಿರಂಜನ ವೃತ್ತದವರೆಗೆ ಸಂಭ್ರಮ ಸಡಗರದಿಂದ ನಡೆಯಿತು. ಟೆಂಗು ನೈವ್ಯದ್ಯವನ್ನು ಆರ್ಪಿಸಿ ಭಕ್ತರು ವಿಶೇಷವಾಗಿ ದರ್ಶನ ಪಡೆದು ಪುನಿತರಾದರು. ಈ ಜಾತ್ರೆಯಲ್ಲಿ ಯಾವುದೇ ಅಹಿತಕರ ಘಟನೆಯಾಗದಂತೆ ಪೋಲಿಸರು ಬೀಗಿ ಬಂದೋಬಸ್ತ್ ಏರ್ಪಡಿಸಿದರು.

## ಶಿಶುವಿನ ಪೋಷಕರ ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

(ಎಂ.ರಫೀಕ್ ಪಟೇಲ್)

ಯಾದಗಿರಿ : ಡಿಸೆಂಬರ್ 21-2024ರ ಡಿಸೆಂಬರ್ 11 ರಂದು ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ದಿವಳಗುಡ್ಡ ಗ್ರಾಮದ ಪಿಡ್ಡಣ್ಣ ಮುತ್ಯನ ದೇವಸ್ಥಾನ ಹಿಂದೆ ಸಿಕ್ಕ ಅಂದಾಜು ಐದು ದಿನದ ನವಜಾತ ಗಂಡು ಶಿಶುವಿನ ಪೋಷಕರ ಪತ್ತೆಗಾಗಿ ಮನವಿ ಮಾಡಲಾಗಿದೆ ಎಂದು ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರೇಮ್‌ಮೂರ್ತಿ ಅವರು ತಿಳಿಸಿದ್ದಾರೆ.

2024ರ ಡಿಸೆಂಬರ್ 11 ರಂದು ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ದಿವಳಗುಡ್ಡ ಗ್ರಾಮದ ಪಿಡ್ಡಣ್ಣ ಮುತ್ಯನ ದೇವಸ್ಥಾನ ಹಿಂದೆ ಸಿಕ್ಕ ಅಂದಾಜು ಐದು ದಿನದ ನವಜಾತ ಗಂಡು ಶಿಶು ಸಿಕ್ಕಿದ್ದು, ಸದರಿ ಶಿಶುವಿನ ಪಾಲಕರ ಪತ್ತೆಗಾಗಿ ಬಾಲ ನ್ಯಾಯ (ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015 ರನ್ವಯ ಉಚಿತ ಪತ್ರಿಕಾ ಪ್ರಕಟಣೆ ನೀಡಬೇಕಾಗಿರುವುದರಿಂದ ಹಾಗೂ ವಾರಸುದಾರರು (ಪೋಷಕರು) ಯಾರು ಪತ್ತೆಯಾಗದಿದ್ದಾಗ ಸದರಿ ಕಾಯ್ದೆಯಡಿ ಮಗುವಿನ ಯಾರು ವಾರಸುದಾರರು, ಪೋಷಕರು ಇಲ್ಲವೆಂದು ಭಾವಿಸಿ ದತ್ತು ಮುಕ್ತ ಆದೇಶ ನೀಡಲು ಅವಶ್ಯವಿರುವುದರಿಂದ ಸದರಿ ಮಗುವಿಗೆ ಪ್ರಸ್ತುತ ಅಂದಾಜು 15 ದಿನಗಳಾಗಿದ್ದು, ಈ ನವಜಾತ ಗಂಡು ಶಿಶುವಿನ ವಾರಸುದಾರರು, ಪೋಷಕರು ಯಾರಾದರು ಇದ್ದಲ್ಲಿ ಈ ಪ್ರಕಟಣೆ ಹೊರಡಿಸಿದ 60 ದಿನಗಳ ಒಳಗೆ ಸಂಪರ್ಕಿಸಬೇಕಾದ ವಿಳಾಸ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೋಣೆ ಸಂಖ್ಯೆ ಸಿ-17, ಒಂದನೇ ಮಹಡಿ, ಜಿಲ್ಲಾಡಳಿತ ಭವನ ಸಂಕೀರ್ಣ, ಚಿತ್ತಾಪೂರ ರಸ್ತೆ, ಯಾದಗಿರಿ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಿತ ಶಾಲೆ, ಹೆತ್ತವರನ್ನು ಮರೆಯದಿರಿ

(ಮಲ್ಲಪ್ಪಾ ಟಿ ಹಾಸಗೊಂಡ)

ಮಲ್ಲಮ್ಮ ನುಡಿ ವಾರ್ತೆ



ಭಾಲ್ಕಿ: ವಿದ್ಯಾರ್ಥಿಗಳು ಕಲಿತ ಶಾಲೆ, ಶಿಕ್ಷಕರು ಮತ್ತು ಹೆತ್ತ ತಂದೆ ತಾಯಿಂದಿರನ್ನು ಎಂದಿಗೂ ಮರೆಯಬಾರದು ಎಂದು ಚರ್ಮ ರೋಗ ತಜ್ಞ ಡಾ.ಪರಮೇಶ್ವರ ಬಿರಾದಾರ್ ಹೇಳಿದರು. ಪಟ್ಟಣದ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಇಂದಿನ ವಿದ್ಯಾರ್ಥಿಗಳು ನಾಳೆ ದೊಡ್ಡ ಸ್ಥಾನಕ್ಕೇರಬಹುದು ಆದರೆ, ಕಲಿತ ಶಾಲೆ, ಕಲಿಸಿದ ಶಿಕ್ಷಕರನ್ನು ಎಂದಿಗೂ ಮರೆಯಬಾರದು. ಪಾಠ ಹೇಳಿ, ಜ್ಞಾನಾರ್ಜಣೆ ಮಾಡಿಸಿ ಬದುಕಿಗೆ ಬೆಳಕಾದ ಶಾಲೆಯ ಶಿಕ್ಷಕರ ಕೊಡುಗೆ ಸದಾಕಾಲಕ್ಕೂ ಸ್ಮರಿಸಬೇಕು. ಗುರುಗಳ ಸೇವೆಯನ್ನು ಸ್ಮರಿಸುವುದು ಮತ್ತು ಅವರಿಗೆ ಕೃತಜ್ಞತೆ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದರು. ನಾನು ಕೂಡ ಶಾಲೆಯ ಹಳೆಯ ವಿದ್ಯಾರ್ಥಿಯಾಗಿದ್ದು, ಶಾಲೆಯ ಶಿಕ್ಷಕರ ಮಾರ್ಗದರ್ಶನ, ತಂದೆ ತಾಯಿಂದರ ಉತ್ತಮ ಸಂಸ್ಕಾರದ ಪರಿಣಾಮ ವೈದ್ಯಕೀಯ ಕ್ಷೇತ್ರದಲ್ಲಿ ವೈದ್ಯನಾಗಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿದೆ. ಹಾಗಾಗಿ ಕಲಿತ ಶಾಲೆಯ ಶುದ್ಧ ಕುಡಿಯುವ ನೀರಿನ ಘಟಕ ಕಾಣಿಕೆಯಾಗಿ ನೀಡಿ ಒಂದಷ್ಟು ಋಣ ತೀರಿಸುವ ಪ್ರಯತ್ನ ಮಾಡಿದ್ದೇನೆ. ಜತೆಗೆ ಬಡ ಪ್ರತಿಭಾವಂತ ಒಬ್ಬ ವಿದ್ಯಾರ್ಥಿಯ ಒಂದು ವರ್ಷದ ಶೈಕ್ಷಣಿಕ ವ್ಯಾಸಂಗಕ್ಕೆ ಖರ್ಚು ವೆಚ್ಚ ನೀಡುವುದಾಗಿ ಭರವಸೆ ನೀಡಿದರು. ಕಲಿತ ಶಾಲೆಯ ಅಭಿವೃದ್ಧಿಗೆ ಹಳೆಯ ವಿದ್ಯಾರ್ಥಿಗಳು ಕೂಡ ಸಹಕಾರ ಮಾಡಬೇಕು ಎಂದು ಸಲಹೆ ನೀಡಿದರು. ಅಧ್ಯಕ್ಷತೆ ವಹಿಸಿದ ಮುಖ್ಯಗುರು ಆನಂದ ಕಲ್ಯಾಣೆ ಮಾತನಾಡಿ, ನಮ್ಮ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ವಿವಿಧ ಭಾಗಗಳಲ್ಲಿ ಸರಕಾರಿ ಮತ್ತು ಖಾಸಗಿ ಸಂಸ್ಥೆಯಗಳಲ್ಲಿ ವೈದ್ಯರು, ಎಂಜನಿಯರ್, ಪೊಲೀಸ್, ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅದರಲ್ಲಿ ಡಾ.ಪರಮೇಶ್ವರ ಬಿರಾದಾರ್ ಒಬ್ಬವರು ಅವರು ವೈದ್ಯರಾಗಿ ಜನರ ಸೇವೆಯಲ್ಲಿ ತೊಡಗಿಸಿ ಕೊಂಡಿರುವುದು ಹೆಮ್ಮೆ ತರಿಸಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಆಕಾಶ ಸ್ವಾಮಿ, ಕೇದಾರ ಬಿರಾದಾರ್, ದಿಲೀಪ ಘಂಟೆ, ಪ್ರಕಾಶ ರುದನೂರೆ, ಅಂಜಲಿ ಜೋಶಿ, ಶುಭಂ ರಾಯವಾಡೆ ಇದ್ದರು. ಉದಯ ಜೋಶಿ ಸ್ವಾಗತಿಸಿದರು. ಜೈಪ್ರಕಾಶ ಸಹಾನೆ ವಂದಿಸಿದರು.

## ಅಮಿತ್ ಶಾ ವಿರುದ್ಧ ಭೀಮ್ ಆರ್ಮಿ ಏಕತಾ ಮಿಷನ್ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 21 :- ಕೇಂದ್ರ ಗೃಹ ಸಚಿವ ಅಮಿತ್ ಶಾ ಅಂಬೇಡ್ಕರ್ ವಿರೋಧಿ ಹೇಳಿಕೆ ನೀಡಿರುವುದು ಖಂಡನೀಯ. ಅವರ ಮೇಲೆ ದೇಶದ್ರೋಹದಡಿ ಪ್ರಕರಣ ದಾಖಲಿಸಿ ದೇಶದಿಂದ ಗಡಿಪಾರು ಮಾಡಬೇಕು ಎಂದು ಭೀಮ್ ಆರ್ಮಿ ಏಕತಾ ಮಿಷನ್ ಸಂಘಟನೆ ಆಗ್ರಹ ಮಾಡಿದೆ.

ಭೀಮ್ ಆರ್ಮಿ ಏಕತಾ ಮಿಷನ್ ವತಿಯಿಂದ ಇಂದು ಭಾಲ್ಕಿ ಪಟ್ಟಣದ ಅಂಬೇಡ್ಕರ್ ಪ್ರತಿಮೆಯಿಂದ ತಹಶೀಲ್ದಾರ್ ಕಚೇರಿವರೆಗೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಅಮಿತ್ ಶಾ ವಿರುದ್ಧ ಘೋಷಣೆ ಕೂಗುತ್ತಾ ಅವರ ಪ್ರತಿಕೃತಿಯನ್ನು ದಹಿಸುವ ಮೂಲಕ ಭೀಮ್ ಆರ್ಮಿ ಏಕತಾ ಮಿಷನ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು.

ಸಂಸತ್ ನಲ್ಲಿ ಅಮಿತ್ ಶಾ ಅವರು ಅಂಬೇಡ್ಕರ್ ರಿಗೆ ಅವಮಾನ ಆಗುವಂತೆ ಮಾತನಾಡಿದ್ದು, ತೀರಾ ನೋವುಂಟು ಮಾಡಿದೆ. ಹಾಗಾಗಿ ಪ್ರಧಾನ ಮಂತ್ರಿ ಅವರನ್ನು ತಕ್ಷಣವೇ ಸಚಿವ ಸಂಪುಟದಿಂದ ಕೈ ಬಿಟ್ಟು, ಅವರ ವಿರುದ್ಧ ದೇಶದ್ರೋಹದಡಿ ಪ್ರಕರಣ ದಾಖಲಿಸಿ, ದೇಶದಿಂದ ಗಡಿಪಾರು ಮಾಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಬಿಜೆಪಿಯು ಜನತೆಯ ಪಕ್ಷವಲ್ಲ. ಅದು ಅಂಬೇಡ್ಕರ್ ಮತ್ತು ಸಂವಿಧಾನವನ್ನು ವಿರೋಧಿಸುವ ಪಕ್ಷ. ಇದು ನಿರಂತರವಾಗಿ ಸಂವಿಧಾನದ ವಿರುದ್ಧ, ಮಹಾತ್ಮರ ವಿರುದ್ಧ ಅವಹೇಳನ ಹೇಳಿಕೆ ನೀಡುತ್ತದೆ. ಈ ಪಕ್ಷ ನಿರಂತರವಾಗಿ ಅಂಬೇಡ್ಕರ್ ಅವರ ತತ್ವಸಿದ್ಧಾಂತದ ವಿರುದ್ಧವಾದ ಹೇಳಿಕೆ ನೀಡುತ್ತಾ, ಸಂವಿಧಾನ ಬದಲಾಯಿಸುವ ಪ್ರಯತ್ನ ಮಾಡುತ್ತಿದೆ ಎಂದು ಬಿಜೆಪಿ ವಿರುದ್ಧ ಪ್ರತಿಭಟನಾಕಾರರು ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ಭೀಮ್ ಆರ್ಮಿಯ ತಾಲೂಕಾ ಅಧ್ಯಕ್ಷ ಸಿದ್ಧಾರ್ಥ ಪ್ಯಾಗೆ, ಉಪಾಧ್ಯಕ್ಷ ಧರ್ಮೇಂದ್ರ ಮೋಳಕೆರೆ, ಪ್ರವೀಣ್ ಮೊರೆ, ವಿಶಾಲ್ ಬಂಧು, ಅಶೋಕ್ ಗಾಯಕವಾಡ್, ಪ್ರಶಾಂತ್ ಕೊಟಗೇರಾ, ರತನ್ ಸೊನಾಳೆ, ಹರ್ಷಿತ್ ದಾಂಡೇಕರ್, ಸಚಿನ್ ಅಂಬೆಸಾಂಗವಿ, ಸುನೀಲ್ ವಾಂಜರೆ, ಧನರಾಜ್ ಕುಂದೆ, ಆದೇಶ್ ಭಾವಿಕಟ್ಟೆ, ತುಕಾರಾಮ್ ಕಾಸ್ಲೆ, ರಾಹುಲ್ ಪ್ಯಾಗೆ, ಲೋಕೇಶ್ ಕಾಂಬ್ಳೆ ಹಾಗೂ ಸಂದೀಪ್ ಮೋರೆ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಜನವರಿ 7 ರಿಂದ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನ

ಬೆಂಗಳೂರು, ಡಿಸೆಂಬರ್ 21-ಕರ್ನಾಟಕ ವಿಮಲ್ಲಮ್ಮ ನುಡಿ ವಾರ್ತೆ

ಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "Exploring Nature's Pharmacy: Potential of Medicinal and Aromatic Plants and Their Conservation" ವಿಷಯದ ಮೇಲೆ 2025 ಜನವರಿ 7 ರಿಂದ 9 ರ ವರೆಗೆ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಅಕಾಡೆಮಿಯ ಕಛೇರಿಯಲ್ಲಿ ಆಯೋಜಿಸಲಾಗುತ್ತಿದೆ. ಈ ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಈ ಸಮ್ಮೇಳನದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಶೈಕ್ಷಣಿಕ ತಜ್ಞರು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದೆ. ಅಲ್ಲದೇ ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು ಸಂಶೋಧನಾ ಪ್ರಬಂಧವನ್ನು ಮಂಡಿಸಲು ಸಹ ಅವಕಾಶ ಕಲ್ಪಿಸಲಾಗಿದೆ. ಆಯ್ಕೆಯಾದ ಸಂಶೋಧನಾ ಪ್ರಬಂಧಗಳಿಗೆ ನಗದು ಬಹುಮಾನ ನೀಡಲಾಗುವುದು.

ಆಸಕ್ತ ಪ್ರತಿನಿಧಿಗಳು ಡಿಸೆಂಬರ್ 31 ರೊಳಗಾಗಿ ಗೂಗಲ್ ಫಾರಂ- https://forms.gle/JochVVLYyNBHKtdx7 ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಅಧಿಕಾರಿಗಳ ಮೊ.ಸಂ.9880405181, 9880405181 ಮತ್ತು 9686449019 ಅಥವಾ ಅಕಾಡೆಮಿಯ ವೆ ಬ್ಸೈಟ್ http://kstacademy.in ವೀಕ್ಷಿಸಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎ.ಎಂ. ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಪ್ರಾಧಿಕಾರ
(ಕರ್ನಾಟಕ ಸರ್ಕಾರ)

**ಕಾರ್ಯನಿರ್ವಾಹಕ ಅಭಿಯಂತರವರ ಕಾರ್ಯಾಲಯ, ಕಾಡಾ, ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳು, ವಿಭಾಗ-2, ಜಮಖಂಡಿ**

ಟೆಂಡರ ಪ್ರಕಟಣೆ ಸಂಖ್ಯೆ :EE/CADA/Div No.2/PB/TN/2024-25/299 ದಿನಾಂಕ:21.12.2024

**ಟೆಂಡರ ಪ್ರಕಟಣೆ (ಇ-ಪ್ರೊಕ್ಯೂರಮೆಂಟ ಮುಖಾಂತರ ಮಾತ್ರ)**

ಮಾನ್ಯ ರಾಜ್ಯಪಾಲರು ಕರ್ನಾಟಕ ಸರ್ಕಾರ ಇವರ ಪರವಾಗಿ ಈ ಕೆಳಗೆ ಸಹಿ ಮಾಡಿರುವವರಿಂದ ಕರ್ನಾಟಕ ಸರ್ಕಾರದ ಇ-ಪ್ರೋಕ್ಯೂರಮೇಂಟ ಪೋರ್ಟಾಲ್‌ನಲ್ಲಿ (https://kppp.karnataka.gov.in) 4705 ಯೋಜನೆ ಅಡಿಯ ಕಾಮಗಾರಿಗಳಿಗೆ ಮೇಲ್ಕಾಣಿಸಿದ ಪ್ರಕಟಣೆಯಲ್ಲಿ ಅರ್ಹ ಗುತ್ತಿಗೆದಾರರಿಂದ ಟೆಂಡರಗಳನ್ನು ಕರೆಯಲಾಗಿರುತ್ತದೆ.

ವಿವರ :

| | |
|---|---|
| Indent Nos. in e-portal | Indent No.76 Call-2(SC), 85 others |
| Est. Amount put to tender in Rs. Lakhs | 13.97 to 16.94 |
| Last Date for receipt of tenders | 30-12-2024 Up to 17.00 hrs. |
| Date of Opening of Tenders | 31-12-2024 at 17.15 hrs. |

ಕಾಮಗಾರಿಗಳ ಹೆಸರು/ಗುತ್ತಿಗೆದಾರರ ಅರ್ಹತೆ/ ಟೆಂಡರಿನ ನಿಯಮ/ಟೆಂಡರ ಪ್ರೋಸೆಸಿಂಗ ಶುಲ್ಕ ಇತ್ಯಾದಿ ವಿವರಗಳಿಗೆ https://kppp.karnataka.gov.in. ಮೂಲಕ ಮಾಹಿತಿ ಪಡೆಯಬಹುದು ಅಥವಾ 08353-220050 ದೂರವಾಣಿಗೆ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು. ಟೆಂಡರಗಳನ್ನು ಸ್ವೀಕರಿಸುವ ಅಧಿಕಾರಿಯು ಯಾವುದೇ ಕಾರಣ ನೀಡದೆ ಯಾವುದೇ ಟೆಂಡರನ್ನು ಅಥವಾ ಎಲ್ಲಾ ಟೆಂಡರಗಳನ್ನು ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಸಹಿ/- ಕಾರ್ಯನಿರ್ವಾಹಕ ಅಭಿಯಂತರು,
ಕಾಡಾ, ಮ&ಘ ಯೋಜನೆಗಳ ವಿಭಾಗ-2, ಜಮಖಂಡಿ

ವಾ.ಸಾ.ಇ/ಬಾಗಲಕೋಟೆ/395/ದೇಶಪಾಂಡೆಪಬ್ಲಿಸಿಟಿ/2024-25

## ಸ್ಪರ್ಧೆಗಳಲ್ಲಿ ನಿರಂತರವಾಗಿ ಭಾಗವಹಿಸಿ



(ಮಲ್ಲಪ್ಪಾ ಟಿ ಹಾಸಗೊಂಡ)

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಸ್ಪರ್ಧೆಗಳಲ್ಲಿ ಸೋಲು-ಗೆಲುವು ಒಂದು ನಾಣ್ಯದ ಎರಡು ಮುಖಗಳಿದ್ದಂತೆ, ಗೆದ್ದವರೂ ಹಿಗ್ಗದೆ ಸೋತವರೂ ಕುಗ್ಗದೆ ಈ ಎರಡನ್ನು ಸ್ಪರ್ಧಾ ಮನೋಭಾವದಿಂದ ಸ್ವೀಕರಿಸಬೇಕು ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಹೇಳಿದರು. ಪಟ್ಟಣದ ಕುಂಬಾರ ಗುಂಡಯ್ಯ ಕಲ್ಯಾಣ ಮಂಟಪದಲ್ಲಿ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ 135ನೆಯ ಜಯಂತ್ಯುತ್ಸವ ನಿಮಿತ್ತ ಶನಿವಾರ ಆಯೋಜಿಸಿದ್ದ ಶರಣರ ವೇಷಭೂಷಣ ಸ್ಪರ್ಧೆ ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಸ್ಪರ್ಧೆಗಳು ಇರಲಿ, ಗೆದ್ದರೆ ಅಭಿಮಾನ ಸಿಗುತ್ತದೆ. ಸೋತರೆ ಅನುಭವ ಸಿಗುತ್ತದೆ. ಹಾಗಾಗಿ ಸೋಲು-ಗೆಲುವು ಲೆಕ್ಕಿಸದೇ ಸ್ಪರ್ಧೆಗಳಲ್ಲಿ ನಿರಂತರವಾಗಿ ಭಾಗವಹಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಸಾನ್ನಿಧ್ಯ ವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ತಮ್ಮ ಜೀವಿತಾವಧಿಯಲ್ಲಿ ಈ ಸಮಾಜಕ್ಕೆ ಅಚ್ಚಳಿಯದಂತಹ ನೆನಪಿಗಳನ್ನು ಕೊಡುಗೆಯಾಗಿ ನೀಡಿದ್ದಾರೆ. ಬಸವಣ್ಣನವರ ಸಿದ್ಧಾಂತ, ಪಟ್ಟದ್ದೇವರ ತತ್ವ ಮುಂದಿನ ಜನಾಂಗಕ್ಕೆ ಮುಟ್ಟಿಸಲು ಇಂತಹ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ಎಲ್ಲ ಮಕ್ಕಳು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಫರ್ಟಿಲೈಸರ್ ಅಸೋಷಿಯನ್ ಅಧ್ಯಕ್ಷ ಮಲ್ಲಿಕಾರ್ಜುನ ಚಾಕೋತೆ, ಕಿರಣಾ ಅಸೋಷಿಯನ್ ಅಧ್ಯಕ್ಷ ದಿಲೀಪಕುಮಾರ ಸುಂಟೆ, ಕಪಡಾ ಅಸೋಷಿಯನ್ ಶಿವಕುಮಾರ ಕಲ್ಯಾಣೆ, ಪಿಕೆಪಿಎಸ್ ಸದಸ್ಯ ರಾಜಕುಮಾರ ಜಲ್ದೆ, ಯುವ ಮುಖಂಡ ಆಕಾಶ ರಿಕ್ಕೆ, ಚನ್ನಬಸವ ಮ್ಯಾರಥಾನ್ ಸೇವಾ ಸಮಿತಿ ಅಧ್ಯಕ್ಷ ರವೀಂದ್ರ ಚಿಡಗುಪ್ಪೆ, ಸದ್ಗುರು ಶಾಲೆಯ ಅಧ್ಯಕ್ಷ ಅಕ್ಷಯ ಮುದ್ದಾ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಸಂಗ್ರಾಮಪ್ಪ ಇಂಗಳೆ, ವೀರಣ್ಣ ಕುಂಬಾರ, ರಾಜಕುಮಾರ ಸಾಲಿ, ರಾಜು ಜುಬರೆ, ಗುಂಡಪ್ಪ ಸಂಗಮಕರ್, ಭಾರತಿ ಪ್ರಭುದೇವ ಕುಂಬಾರ ಇದ್ದರು. ಬಾಬು ಬೆಲ್ದಾಳ ಸ್ವಾಗತಿಸಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು. ಬಸವರಾಜ ಪ್ರಭಾ ವಂದಿಸಿದರು.

## ತರಬೇತಿ ಶಿಬಿರದ ಸಮಾರೋಪ ಸಮಾರಂಭ

ಬೆಂಗಳೂರು, ಡಿಸೆಂಬರ್ 21-ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'ವು ಡಿಸೆಂಬರ್ 23 ರ ಬೆಳಿಗ್ಗೆ 10 ಗಂಟೆಗೆ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿರುವ 30 ದಿನಗಳ ಕೆಎಎಸ್ ಪರೀಕ್ಷಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮೈಸೂರು ಜಿಲ್ಲಾ ಪೊಲೀಸ್ ಅಧೀಕ್ಷಕ ವಿಷ್ಣುವರ್ಧನ ಎನ್. ಮತ್ತು ಶ್ರೀಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ.ರೂಪ ಭಾಗವಹಿಸಿ ಶಿಬಿರಾರ್ಥಿಗಳಿಗೆ ಶುಭಹಾರೈಸಲಿದ್ದಾರೆ.

ಭಾಲ್ಕಿ ಪುರಸಭೆ ಮುಖ್ಯಾಧಿಕಾರಿ ಕಾನೂನುಬಾಹಿರವಾಗಿ ಗೋಡೆ ಕಂಪೌಂಡ್ ಒಡೆಸಿದ್ದಾರೆ

## ಬೇಡಿದಷ್ಟು ಹಣ ನೀಡದ್ದಕ್ಕೆ ಕಂಪೌಂಡೆ ಒಡೆಸಿದ್ದಾರೆ - ಪಾಂಡುರಂಗ ಕನಸೆ ಆರೋಪ

ಮಲ್ಲಮ್ಮ ನುಡಿ ವಾರ್ತೆ



ಬೀದರ. ಡಿ. 21 :- ಭಾಲ್ಕಿ: ಬೇಡಿದಷ್ಟು ಹಣ ನೀಡದೇ ಇದ್ದುದಕ್ಕೆ ಭಾಲ್ಕಿ ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ ಅವರು ನಮ್ಮ ಬಯಲು ನಿವೇಶನಕ್ಕೆ ಕಟ್ಟಿಸಲಾದ ಗೋಡೆ ಕಂಪೌಂಡೆ ಒಡೆಸಿದ್ದಾರೆ ಎಂದು ನಿವೇಶನದ ಮಾಲಿಕರ ಮಗನಾದ ಪಾಂಡುರಂಗ ಕನಸೆ ಪುರಸಭೆ ಮುಖ್ಯಾಧಿಕಾರಿ ಮೇಲೆ ಗಂಭೀರ ಆರೋಪ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ಯಾದವರಾವ ವಿಠಲರಾವ ಕನಸೆ ನಮ್ಮ ತಂದೆಯವರಾಗಿದ್ದು, ಅವರ ಹೆಸರಿನ ಮೇಲೆ ಭಾಲ್ಕಿಯ ಬಾಲಾಜಿನಗರದಲ್ಲಿ 90*75 ಅಳತೆಯ ನಿವೇಶನ 2017ರಲ್ಲಿ ನೊಂದಣಿಯಾಗಿದೆ. ಅಲ್ಲಿ ಕಟ್ಟಡ ನಿರ್ಮಾಣ ಮಾಡಲು ಅನುಮತಿ ಪತ್ರ ಕೂಡಾ ನಮ್ಮಲ್ಲಿದೆ. ಆದರೆ ಹಿಂದೆ ಯಾರು ಅನುಮತಿ ಕೊಟ್ಟಿದ್ದಾರೋ ನಮಗೆ ಗೊತ್ತಿಲ್ಲ. ಈಗ ಗಣಕೀಕರಣ ಅನುಮತಿ ಪಡೆಯಬೇಕು. ಒಂದು ಲಕ್ಷಣ ಹಣ ಕೊಡಿ ಎಂದು ಬೇಡಿಕೆ ಇಟ್ಟಿದ್ದಾರೆ. ಹಣ ನೀಡದೇ ಇದ್ದುದಕ್ಕೆ ನಿವೇಶನದ ಮಾಲಿಕರಿಗೆ ಯಾವುದೇ ನೊಟೀಸ್ ನೀಡದೆ ಡಿ. 21 ರಂದು ಬೆಳಿಗ್ಗೆ 7 ಗಂಟೆಗೆ ಹೇಳದೆ ಕೇಳದೆ ಕಾರಬಾರಿಯವರು ಕಂಪೌಂಡೆ ಒಡೆಸಿದ್ದಾರೆ ಎಂದು ಪಾಂಡುರಂಗ ಕನಸೆ ಆರೋಪಿಸಿದರು.

ಕಟ್ಟಡ ನಿರ್ಮಾಣ ಮಾಡಲು ಮಾನ್ಯ ಭಾಲ್ಕಿ ನ್ಯಾಯಾಲಯ ಅನುಮತಿ ನೀಡಿದೆ. ಈ ನ್ಯಾಯಾಲಯದ ಆದೇಶವನ್ನೂ ಉಲ್ಲಂಘನೆ ಮಾಡಿರುವ ಆರೋಪ ಕೂಡಾ ಸಂಗಮೇಶ ಕಾರಬಾರಿ ಮೇಲಿದೆ. ಅದನ್ನೂ ಮೀರಿ ನಮ್ಮ ನಿವೇಶನದ ಕಂಪೌಂಡೆ ಒಡೆಸಿದ್ದಾರೆ. ಆದ್ದರಿಂದ ಸರ್ಕಾರ ಅವರ ಮೇಲೆ ನ್ಯಾಯಾಲಯದ ಆದೇಶದ ಉಲ್ಲಂಘನೆ ಪ್ರಕಾರ ಕಾನೂನಿನ ಸೂಕ್ತಕ್ರಮ ಕೈಗೊಳ್ಳಬೇಕು. ನಮಗೆ ನ್ಯಾಯ ಒದಗಿಸಿಕೊಡಬೇಕೆಂದು ಪ್ರಕಟಣೆಯಲ್ಲಿ ಪಾಂಡುರಂಗ ಕನಸೆ ತಿಳಿಸಿದ್ದಾರೆ.

Printed, Published and Owned by : Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad - 585330.
Editor: Ramesh Reddy. Office Ph. No: +91 9449732000.